ಸಂಪುಟ: 21, ಸಂಚಿಕೆ: 199, ಪುಟಗಳು: 8, ಭಾನುವಾರ, 28 ಏಪ್ರಿಲ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಭಾನುವಾರ 28, ಏಪ್ರಿಲ್ -2024)

- ಶ್ರೀಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ಚೈತ್ರ ಮಾಸ,
- ಕೃಷ್ಣ ಪಕ್ಷ/ ಚತುರ್ಥಿ, ಪಂಚಮಿ
- ಜೇಷ್ಠ ನಕ್ಷತ್ರ
- **ರಾಹುಕಾಲ:** 04:59 PM 06 : 30 PM
- **ಗುಳಿಕಕಾಲ:** 03:28 PM04 : 59 PM
- **ಯಮಗಂಡಕಾಲ:** 12:27 PM 01 : 58 PM

## ಭಾರತದಲ್ಲಿ ಹುಲುಸಾಗಿ ಬೆಳೆಯುತ್ತಿದೆ ಆಟಿಕೆ ಉದ್ಯಮ

# ಶೇ. 70ರಷ್ಟು ತಪ್ಪಿದೆ ಚೀನೀ ಬೊಂಬೆ ಆಮದು

**ಬೆಂಗಳೂರು:** ಕಳೆದ ಕೆಲ ವರ್ಷಗಳ ಹಿಂದಿನವರೆಗೂ ಭಾರತದಲ್ಲಿ ಸಿಗುತ್ತಿದ್ದ ಬಹುತೇಕ ಆಟಿಕೆಗಳು ಅಥವಾ ಬೊಂಬೆಗಳು ಚೀನಾದಿಂದ ಆಮದು ಮಾಡಿಕೊಂಡವಾಗಿದ್ದವು. ಇತ್ತೀಚೆಗೆ ಆಟಿಕೆ ತಯಾರಿಕೆ ಉದ್ಯಮದಲ್ಲಿ ಭಾರತ ಗಮನಾರ್ಹ ಬೆಳವಣಿಗೆ ಸಾಧಿಸಿದೆ. ಚೀನಾದಿಂದ ಆಮದು ಮಾಡಿಕೊಳ್ಳಲಾಗುವ ಆಟಿಕೆಗಳ ಪ್ರಮಾಣ ಶೇ. 70ರಷ್ಟು ಕಡಿಮೆ ಆಗಿದೆ ಎಂದು ಒಪಿ ಇಂಡಿಯಾ ವೆಬ್ ಸೈಟ್‌ನ ವರದಿಯೊಂದು ಹೇಳಿದೆ. ಭಾರತದಲ್ಲಿ ಟಾಯ್ ಕ್ಲಸ್ಟರ್ ಗಳ ನಿರ್ಮಾಣದಿಂದ ಹಿಡಿದು, ಆಮದು



ಸುಂಕ ಇತ್ಯಾದಿ ಕ್ರಮಗಳವರೆಗೆ ಕೇಂದ್ರ ಸರ್ಕಾರದ ವಿವಿಧ ನೀತಿಗಳು ಭಾರತದಲ್ಲಿ ಆಟಿಕೆ ಉದ್ಯಮ ಹುಲುಸಾಗಿ ಬೆಳೆಯಲು ಕಾರಣವಾಗಿವೆ. ಭಾರತದಲ್ಲಿ ಆಟಿಕೆಗಳಿಗೆ ಇರುವ ಆಂತರಿಕ ಬೇಡಿಕೆಯನ್ನು ಪೂರೈಸುವುದರ ಜೊತೆಗೆ ಈಗ ವಿದೇಶಗಳಿಗೆ ರಫ್ತು ಮಾಡುವ ಹಂತಕ್ಕೂ ಈ ಉದ್ಯಮ ಸಜ್ಜಾಗಿದೆ. ಈಗಾಗಲೇ ಅಲ್ಪ ಪ್ರಮಾಣದಲ್ಲಿ ಮಧ್ಯಪ್ರಾಚ್ಯ ಹಾಗೂ ಆಫ್ರಿಕನ್ ದೇಶಗಳಿಗೆ ಆಟಿಕೆಗಳನ್ನು ಭಾರತ ರಫ್ತು ಮಾಡುತ್ತಿರುವುದು ಗೊತ್ತಾಗಿದೆ. ಚೀನಾದ ಆಟಿಕೆಗಳ ಮೇಲೆ ಸರ್ಕಾರ ಆಮದು ಸುಂಕ ಹೇರಿದೆ. ಇದರಿಂದ ಬಹಳ ಅಗ್ಗದ ದರದಲ್ಲಿ ಪ್ರವಾಹೋಪಾದಿಯಲ್ಲಿ ಆಟಿಕೆ ಗಳು ಭಾರತಕ್ಕೆ ಹರಿದುಬರುವುದು ಕಡಿಮೆ ಆಗಿದೆ. ಇದು ಭಾರತೀಯ ಆಟಿಕೆ ತಯಾರಕರಿಗೆ ಹೆಚ್ಚಿನ ಅವಕಾಶ ಸಿಗಲು ಅವಕಾಶ ಕೊಟ್ಟಿದೆ. ಆಡಳಿತಾರೂಢ ಬಿಜೆಪಿ ಪಕ್ಷ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಆಟಿಕೆ ತಯಾರಿಕೆಯಲ್ಲಿ ದೇಶವನ್ನು ಗ್ಲೋಬಲ್ ಹಬ್ ಆಗಿ ಮಾಡುತ್ತೇವೆ ಎಂದು ಹೇಳಿಕೊಂಡಿದೆ. ಈ ಹಂತಕ್ಕೆ ಏರಲು ಭಾರತದಲ್ಲಿ ಆಟಿಕೆ ಉದ್ಯಮ ಅಣಿಗೊಂಡಿದೆ ಎಂಬುದು ಈ ಕ್ಷೇತ್ರದ ಪರಿಣಿತರ ಅನಿಸಿಕೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಭೀಕರ ರಸ್ತೆ ಅಪಘಾತ; 3 ಭಾರತೀಯರ ಸಾವು



**ದಕ್ಷಿಣ ಕೆರೊಲಿನಾ:** ಅಮೆರಿಕದ ಸೌತ್ ಕೆರೊಲಿನಾದಲ್ಲಿ ಭೀಕರ ರಸ್ತೆ ಅಪಘಾತ ನಡೆದಿದೆ. ಈ ಅಪಘಾತದಲ್ಲಿ ಮೂವರು ಗುಜರಾತಿ ಮಹಿಳೆಯರು ಸಾವನ್ನಪ್ಪಿದ್ದಾರೆ. ಮೃತರೆಲ್ಲರೂ ಗುಜರಾತ್‌ನ ಆನಂದ್ ಜಿಲ್ಲೆಯವರು ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ. ಮೃತರನ್ನು ರೇಖಾಬೆನ್ ಪಟೇಲ್, ಸಂಗೀತಾಬೆನ್ ಪಟೇಲ್ ಮತ್ತು ಮನೀಶಾಬೆನ್ ಪಟೇಲ್ ಎಂದು ಗುರುತಿಸಲಾಗಿದೆ. ಮೃತರು ಪ್ರಯಾಣಿಸುತ್ತಿದ್ದ ಎಸ್‌ಯುವಿ ದಕ್ಷಿಣ ಕೆರೊಲಿನಾದ ಗ್ರೀನ್ ವಿಲ್ಲೆ ಕೌಂಟಿಯಲ್ಲಿ ಸೇತುವೆಗೆ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅತಿಯಾದ ವೇಗದಿಂದ ಅಪಘಾತ ಸಂಭವಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪುಟ 2

### ಬಾವ ಅತ್ಯಾಚಾರ ಮಾಡಿದ್ದಾನೆಂದು ಗಂಡನ ಬಳಿ ಹೇಳಿಕೊಂಡ್ರೆ, ನೀನು ನನ್ನ ಪತ್ನಿಯೇ ಅಲ್ಲ ಎಂದ




**ಉತ್ತರ ಪ್ರದೇಶ:** ಮಹಿಳೆಯೊಬ್ಬಳು ತನ್ನ ಪತಿ ಬಳಿ ಹೋಗಿ ನೀವಿಲ್ಲದಿರುವಾಗ ಬಾವ ನನ್ನ ಮೇಲೆ ಅತ್ಯಾಚಾರವೆಸಗಿದ್ದಾರೆ ಎಂದು ಹೇಳಿಕೊಂಡರೆ ಗಂಡನೊಬ್ಬ ನೀನು ನನ್ನ ಪತ್ನಿಯೇ ಅಲ್ಲ ಎಂದಿರುವ ಘಟನೆ ಉತ್ತರ ಪ್ರದೇಶದಲ್ಲಿ ನಡೆದಿದೆ. ವ್ಯಕ್ತಿಯೊಬ್ಬ ತನ್ನ ಅಣ್ಣನಿಲ್ಲದಿರುವ ಸಮಯ ನೋಡಿ ಅತ್ತಿಗೆ ಮೇಲೆ ಅತ್ಯಾಚಾರವೆಸಗಿದ್ದ ಬಳಿಕ ಆಕೆ ನಡೆದಿದ್ದನ್ನು ಗಂಡನ ಬಳಿ ಹೇಳಿದಾಗ ಆತ ನೀನು ನನ್ನ ಪತ್ನಿಯೇ ಅಲ್ಲ ಎಂದು ಹೇಳಿ ಹತ್ಯೆಗೆ ಯತ್ನಿಸಿರುವ ಘಟನೆ ನಡೆದಿದೆ.

ಪುಟ 2

# ಬಿಜೆಪಿಗೆ ಸಿಖ್ಖರ ಬಲ

## ದೆಹಲಿಯಲ್ಲಿ 1,500 ಮಂದಿ ಸಿಖ್ಖರು ಕಮಲಕ್ಕೆ ಸೇರ್ಪಡೆ

**ದೆಹಲಿ:** ಲೋಕಸಭಾ ಚುನಾವಣೆಯ ಹೊಸ್ತಿಲಲ್ಲೇ 1,500 ಮಂದಿ ಸಿಖ್ಖರು ಬಿಜೆಪಿಗೆ ಸೇರ್ಪಡೆಗೊಂಡಿರುವುದು ಬಿಜೆಪಿಗೆ ಭಾರಿ ಬಲ ಬಂದಂತಾಗಿದೆ. ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ, ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ತರುಣ್ ಚುಗ್, ಪಕ್ಷದ ನಾಯಕ ಮಂಜಿಂದರ್ ಸಿಂಗ್ ಸಿರ್ಸಾ ಮತ್ತು ದೆಹಲಿ ಬಿಜೆಪಿ ಅಧ್ಯಕ್ಷ ವೀರೇಂದ್ರ ಸಚ್‌ದೇವ ಅವರ ಸಮ್ಮುಖದಲ್ಲಿ ಸಿಖ್ ಸಮುದಾಯದ ಜನರು ಪಕ್ಷಕ್ಕೆ ಸೇರ್ಪಡೆಗೊಂಡರು.

ದೇಶದಲ್ಲಿ 2024ರ ಲೋಕಸಭೆ ಚುನಾವಣೆಗೆ ಮತದಾನ ನಡೆಯುತ್ತಿರುವ ಹೊತ್ತಿನಲ್ಲೇ ಇವರು ಬಿಜೆಪಿಯೊಂದಿಗೆ ಕೈ ಜೋಡಿಸಿದ್ದಾರೆ. ಈ ಸಂದರ್ಭದಲ್ಲಿ ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡ ಮಾತನಾಡಿ, ನಮ್ಮ ಸಿಖ್ ಸಹೋದರರು ದೇಶಕ್ಕಾಗಿ ಹೇಗೆ ಪ್ರಾಣ ತ್ಯಾಗ ಮಾಡಿದರು ಎಂಬುದು ನಮಗೆ ಗೊತ್ತಿದೆ. ದೇಶದ ಮೇಲೆ ನಡೆದ ಎಲ್ಲಾ ದಾಳಿಗಳಿಗೆ ತಕ್ಕ ಉತ್ತರ ನೀಡಿದ್ದ ಸಿಖ್ ಸಹೋದರರು ಅಪಾರ ಕೊಡುಗೆ ನೀಡಿದ್ದಾರೆ.

ಇಂತಹ ಸಿಖ್ ಸಮುದಾಯದವರು ಬಿಜೆಪಿಗೆ ಸೇರ್ಪಡೆಯಾಗುತ್ತಿರುವುದು ನಮಗೆ ಹೆಮ್ಮೆ ಮತ್ತು ಸಂತೋಷದ ಸಂಗತಿಯಾಗಿದೆ ಎಂದರು.

ಪ್ರಧಾನಿ ಮೋದಿ ಸಿಖ್ ಸಮುದಾಯಕ್ಕಾಗಿ ಕೆಲಸ ಮಾಡಿದ್ದಾರೆ: ಜೆಪಿ ನಡ್ಡಾ ದೇಶದ ಏಕತೆ, ಸಮಗ್ರತೆ ಮತ್ತು ಭದ್ರತೆಯನ್ನು ನಾವು ಮುನ್ನಡೆಸುವ ಏಕೈಕ ಪಕ್ಷ ಬಿಜೆಪಿಯಾಗಿದೆ. ಇದರಲ್ಲಿ ನಿಮ್ಮ ದೊಡ್ಡ



ಕೊಡುಗೆ ಇದೆ, ನಿಮ್ಮ ಸಹಭಾಗಿತ್ವದೊಂದಿಗೆ ನಾವು ಈ ಕಾರ್ಯವನ್ನು ತ್ವರಿತಗತಿಯಲ್ಲಿ ಮುನ್ನಡೆಸುತ್ತೇವೆ. ಯಾರಾದರೂ ನಿಜವಾಗಿಯೂ ಸಿಖ್ ಸಮುದಾಯಕ್ಕಾಗಿ ಕೆಲಸ ಮಾಡಿದ್ದರೆ ಅದು ನಮ್ಮ ಪ್ರಧಾನಿ ನರೇಂದ್ರ ಮೋದಿ . ಮೋದಿಯವರು ಅವರು ಬಹಳ ಸಮಯದಿಂದ ಪಂಜಾಬ್‌ನ ಉಸ್ತುವಾರಿ ವಹಿಸಿದ್ದಾರೆ.

1984ರ ಗಲಭೆಗಳ ಕುರಿತು ಪ್ರಧಾನಿ ಮೋದಿ ಅವರು ಎಸ್‌ಐಟಿ ರಚಿಸಿದರು ಮತ್ತು ಇಂದು ಆ ಗಲಭೆಗಳ ಅಪರಾಧಿಗಳು ಜೈಲಿನಲ್ಲಿದ್ದಾರೆ ಎಂದರು.

ಬಿಜೆಪಿ ನಾಯಕ ಮಂಜಿಂದರ್ ಸಿಂಗ್ ಸಿರ್ಸಾ ಮಾತನಾಡಿ, 1947ರಿಂದ ಇಲ್ಲಿಯವರೆಗೆ ನಮ್ಮ ಮೇಲೆ ದಬ್ಬಾಳಿಕೆ ನಡೆಯುತ್ತಿದೆ. ಅಮಾಯಕ ಸಿಖ್ಖರನ್ನು ಕೊಲ್ಲಲಾಯಿತು. ಕಾಂಗ್ರೆಸ್ ಸರ್ಕಾರ ನಮ್ಮ ಮೇಲೆ ದೌರ್ಜನ್ಯ ನಡೆಸಿತು ಮತ್ತು 1984 ರ ಸಿಖ್ ದಂಗೆಯಲ್ಲಿ ಜನರನ್ನು ಸಜೀವ ದಹನ ಮಾಡಲಾಯಿತು. ಆ ಗಲಭೆಯ ಹೊಣೆಯನ್ನು ಅಂದಿನ ಪ್ರಧಾನಿ ರಾಜೀವ್ ಗಾಂಧಿ ವಹಿಸಿಕೊಂಡಿದ್ದರು ಎಂದಿದ್ದಾರೆ. ಜಸ್ಮೆನ್ ಸಿಂಗ್ ನೋನಿ, ಪರ್ಮಿಂದರ್ ಸಿಂಗ್ ಲಕ್ಕಿ, ಭೂಪೇಂದರ್ ಸಿಂಗ್ ಗಿನ್ನಿ, ರಮಣದೀಪ್ ಸಿಂಗ್ ಥಾಪರ್, ರಾಮನ್ಜೋತ್ ಸಿಂಗ್ ಮೀಟಾ, ಹರ್ಜೀತ್ ಸಿಂಗ್ ಪಪ್ಪಾ ಮತ್ತು ಮಂಜೀತ್ ಸಿಂಗ್ ಔಲಾಖ್ ಮುಂತಾದ ಸಿಖ್ಖರು ಬಿಜೆಪಿಗೆ ಸೇರ್ಪಡೆಗೊಂಡಿದ್ದಾರೆ.

## ರಾಜ್ಯದಲ್ಲಿ ಇಂದು 4 ಕಡೆ ಪ್ರಧಾನಿ ಮೋದಿ ರ‍್ಯಾಲಿ



**ಬೆಳಗಾವಿ:** ಕರ್ನಾಟಕದಲ್ಲಿ ಲೋಕಸಭಾ ಚುನಾವನೆ ಕಾವು ರಂಗೇರಿದೆ. ಈಗಾಗಲೇ ರಾಜ್ಯದಲ್ಲಿ 14 ಕ್ಷೇತ್ರಗಳಿಗೆ ಮೊದಲ ಹಂತದ ಮತದಾನ ಮುಕ್ತಾಯವಾಗಿದ್ದು, ಮೇ 7ರಂದು ರಾಜ್ಯದ ಉತ್ತರ ಕರ್ನಾಟಕದ ಭಾಗದ 14 ಕ್ಷೇತ್ರಗಳಿಗೆ ಎರಡನೇ ಹಂತದ ಮತದಾನ ನಡೆಯಲಿದೆ. ಜಿದ್ದಿ ಜಿದ್ದು ಎಂಬಂತೆ ಪಟ್ಟು ಬಿದ್ದಿರುವ ಕೇಸರಿ ಪಡೆಗೆ ಕರ್ನಾಟಕವೇ ಮೇನ್ ಟಾರ್ಗೆಟ್ ಆಗಿದೆ.

ಪುಟ 2

## ಜಮೀರ್ ಅಹ್ಮದ್‌ಖಾನ್ ವಿರುದ್ಧದ ಚುನಾವಣಾ ತಕರಾರು ಅರ್ಜಿ ವಜಾ

**ಬೆಂಗಳೂರು:** ಚಾಮರಾಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಸಚಿವ ಜಮೀರ್ ಅಹ್ಮದ್ ಖಾನ್ ವಿರುದ್ಧ ಸಲ್ಲಿಸಲಾಗಿದ್ದ ಚುನಾವಣಾ ತಕರಾರು ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾಗೊಳಿಸಿದೆ. ಜಮೀರ್ ಅಹ್ಮದ್ ಖಾನ್ ಆಯ್ಕೆ ಪ್ರಶ್ನಿಸಿ ಅದೇ ಕ್ಷೇತ್ರದ ಮತದಾರ ಶಶಾಂಕ್ ಜೆ. ಶ್ರೀಧರ್ ಅವರು ಸಲ್ಲಿಸಿದ್ದ ಅರ್ಜಿ ಪರಿಶೀಲಿಸಿದ ನ್ಯಾ.ಎಂ.ಐ.ಅರುಣ್ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ.



ವಾದ-ಪ್ರತಿವಾದ ಆಲಿಸಿದ ಬಳಿಕ ನ್ಯಾಯಪೀಠ, '' ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷ ನೀಡಿದ ಗ್ಯಾರೆಂಟಿ ಪಕ್ಷಗಳ ತಪ್ಪು ಯೋಜನೆ ಎನ್ನಬಹುದು, ಆದರೆ ಚುನಾವಣಾ ಅಕ್ರಮವೆಂದು ಕರೆಯಲು ಸಾಧ್ಯವಿಲ್ಲ. ಜನಪ್ರಾತಿನಿಧ್ಯ ಕಾಯ್ದೆ ಸೆಕ್ಷನ್ 123ರ ಅನ್ವಯ ಪಕ್ಷದ ಪ್ರಣಾಳಿಕೆಯನ್ನು ಅಕ್ರಮ ಎಂದು ಹೇಳಲು ಆಗುವುದಿಲ್ಲ. ಕಾಂಗ್ರೆಸ್ ನ ಐದು ಗ್ಯಾರಂಟಿ ಜನ ಕಲ್ಯಾಣ ಯೋಜನೆಗಳೆನ್ನಬಹುದು. ಗ್ಯಾರೆಂಟಿಯಿಂದ ಸರ್ಕಾರದ ಬೊಕ್ಕಸಕ್ಕೆ ಹೊರೆಯೇ ಅಲ್ಲವೇ ಬೇರೆ ವಿಚಾರ, ಗ್ಯಾರಂಟಿಗಳಿಂದ ಹೇಗೆ ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ. ಇದು ದುರಾಡಳಿತವೆಂಬುದನ್ನು ನಿರೂಪಿಸುವುದು ಪ್ರತಿಪಕ್ಷಕ್ಕೆ ಬಿಟ್ಟದ್ದು. ಪ್ರಸ್ತುತ ಸ್ಥಿತಿಯಲ್ಲಿ 5 ಗ್ಯಾರಂಟಿ ತಪ್ಪು ನೀತಿಯೆನ್ನಬಹುದು. ಆದರೆ, ಇದು ಚುನಾವಣಾ ಭ್ರಷ್ಟಾಚಾರ ಎನ್ನಲು ಸಾಧ್ಯವಿಲ್ಲ'' ಎಂದು ಹೇಳಿದೆ.

ನ್ಯಾಯಾಲಯ ಸುಪ್ರೀಂಕೋರ್ಟ್‌ನ ತೀರ್ಪು ಉಲ್ಲೇಖಿಸಿ ''ಪ್ರಣಾಳಿಕೆಯಲ್ಲಿನ ಉಚಿತ ಕೊಡುಗೆಗಳಿಂದ ಮತದಾರರ ಮೇಲೆ ಪ್ರಭಾವ ಬೀರಬಹುದು. ಉಚಿತ ಕೊಡುಗೆಗಳಿಂದ ಪಕ್ಷಗಳ ನಡುವೆ ಸಮಾನತೆ ಇರುವುದಿಲ್ಲ. ಚುನಾವಣಾ ಆಯೋಗ ಈ ಬಗ್ಗೆ ಮಾರ್ಗಸೂಚಿ ರೂಪಿಸಬೇಕು. ಈ ಬಗ್ಗೆ ಸೂಕ್ತ ಶಾಸನ ರೂಪಿಸಬೇಕು ಅಂತ ಸುಪ್ರೀಂಕೋರ್ಟ್ ಸರ್ಕಾರಕ್ಕೆ ಸೂಚಿಸಿದೆ ಎಂದು ಹೈಕೋರ್ಟ್ ಸುಪ್ರೀಂಕೋರ್ಟ್ ತೀರ್ಪು ಉಲ್ಲೇಖಿಸಿ, ಆದೇಶ ಹೊರಡಿಸಿದೆ.

## ಚಾಮರಾಜನಗರ ಇಂಡಿಗನತ್ತ ಗ್ರಾಮದಲ್ಲಿ ಇವಿಎಂ ಧ್ವಂಸಗೊಳಿಸಿದೆ ಕೇಸ್

# 33 ಜನರ ಬಂಧನ

**ಚಾಮರಾಜನಗರ:** ಜಿಲ್ಲೆಯ ಹನೂರು ತಾಲೂಕಿನ ಇಂಡಿಗನತ್ತ ಗ್ರಾಮದಲ್ಲಿ ಇವಿಎಂ ಧ್ವಂಸಗೊಳಿಸಿದ ಪ್ರಕರಣಕ್ಕೆ



ಸಂಬಂಧಿಸಿದಂತೆ ಮಲೆ ಮಹದೇಶ್ವರ ಬೆಟ್ಟ ಪೊಲೀಸ್ ಠಾಣೆಯಲ್ಲಿ ಮೂರು ಪ್ರಕರಣ ದಾಖಲಾಗಿದೆ. ಘಟನೆ ಸಂಬಂಧ ಈವರೆಗೂ 33 ಮಂದಿಯನ್ನು ಬಂಧಿಸಿದ್ದೇವೆ ಎಂದು ಚಾಮರಾಜನಗರ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹೋ ಹೇಳಿದ್ದಾರೆ. ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಇಂಡಿಗನತ್ತ ಗ್ರಾಮದಲ್ಲಿ ಗ್ರಾಮದಲ್ಲಿ ಒಂದು ಏಖಖಕ ತುಕಡಿ, ಡಿಎಆರ್ ತುಕಡಿ ನಿಯೋಜನೆ ಮಾಡುವ ಮೂಲಕ ಪೊಲೀಸ್ ಬಿಗಿ ಬಂದೋಬಸ್ತ್ ಒದಗಿಸಲಾಗಿದೆ ಎಂದು ಹೇಳಿದ್ದಾರೆ.



ಪುಟ 2

## ಮಹಾದೇವ್ ಬೆಟ್ಟಿಂಗ್ ಆಯಪ್ ಪ್ರಕರಣ

# ಸಾಹಿಲ್ ಖಾನ್ ಸೆರೆ

**ಛತ್ತೀಸ್‌ಗಢ:** ಮಹಾದೇವ್ ಬೆಟ್ಟಿಂಗ್ ಆಪ್ ಪ್ರಕರಣದಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ನಟ ಸಾಹಿಲ್ ಖಾನ್ ಅವರನ್ನು ಮುಂಬೈ ಪೊಲೀಸರು ಬಂಧಿಸಿದ್ದಾರೆ. ಛತ್ತೀಸ್‌ಗಢದಲ್ಲಿ ಮುಂಬೈ ಸೈಬರ್ ಸೆಲ್‌ನ ವಿಶೇಷ ತನಿಖಾ ತಂಡ (ಎಸ್‌ಐಟಿ) ಅವರನ್ನು ಬಂಧಿಸಿದ್ದು, ಬಂಧನ ಪೂರ್ವ ಜಾಮೀನು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಬಾಂಬೆ ಹೈಕೋರ್ಟ್ ತಿರಸ್ಕರಿಸಿದೆ.



ಇದಕ್ಕೂ ಮೊದಲು, 2023 ರ ಡಿಸೆಂಬರ್‌ನಲ್ಲಿ ಎಸ್‌ಐಟಿ ಸಾಹಿಲ್ ಮತ್ತು ಇತರ ಮೂವರನ್ನು ವಿಚಾರಣೆಗೆ ಕರೆದಿತ್ತು, ಆದರೆ ಅವರು ಹಾಜರಾಗಲಿಲ್ಲ. ಲಯನ್ ಬುಕ್ ಬ್ರ್ಯಾಂಡ್ ಅನ್ನು ಪ್ರಚಾರ ಮಾಡುತ್ತಿದೆ ಮತ್ತು ಬೆಟ್ಟಿಂಗ್ ಪ್ಲಾಟ್ ಫಾರ್ಮ್‌ನೊಂದಿಗೆ ನೇರ ಸಂಬಂಧವನ್ನು ನಿರಾಕರಿಸಿದೆ.

ರಾಯಪುರ ಮಾರ್ಗವಾಗಿ ಮುಂಬೈಗೆ ಕರೆತರಲಾಗುತ್ತಿದೆ. ಲೋಟಸ್ ಆಪ್ 247ರಲ್ಲಿ ಪಾಲುದಾರನಾಗಿದ್ದು, ಇಂದು ಮಧ್ಯಾಹ್ನ ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಕಾನೂನುಬಾಹಿರ ಕಾರ್ಯಾಚರಣೆಯಲ್ಲಿ ನೇರವಾಗಿ ಭಾಗಿಯಾಗಿರುವುದನ್ನು ಉಲ್ಲೇಖಿಸಿ ನ್ಯಾಯಾಲಯವು ಅವರ ಜಾಮೀನು ಅರ್ಜಿಯನ್ನು ವಜಾಗೊಳಿಸಿದೆ. ಸ್ಟೈಲ್ ಮತ್ತು ಎಕ್ಸ್‌ಕ್ಯೂಸ್ ಮಿಯಲ್ಲಿನ ಪಾತ್ರಗಳಿಗೆ ಹೆಸರುವಾಸಿಯಾದ ಸಾಹಿಲ್ ಈಗ ಫಿಟ್‌ನೆಸ್‌ನತ್ತ ಗಮನಹರಿಸಿದ್ದಾರೆ, ಡಿವೈನ್ ನ್ಯೂಟ್ರಿಷನ್ ಅನ್ನು ಸ್ಥಾಪಿಸಿದ್ದಾರೆ, ಇದು ಫಿಟ್‌ನೆಸ್ ಪೂರಕಗಳನ್ನು ನೀಡುತ್ತದೆ.

2023 ರಲ್ಲಿ, ಮಹಾದೇವ್ ಬೆಟ್ಟಿಂಗ್ ಆಯಪ್ ಪ್ರಕರಣದ ವಿಚಾರಣೆ ನಡೆಸುತ್ತಿರುವ ಅಪರಾಧ ವಿಭಾಗವು ಡಿಸೆಂಬರ್ 15 ರಂದು ತಮ್ಮ ಹೇಳಿಕೆಗಳನ್ನು ದಾಖಲಿಸಲು ಸಾಹಿಲ್ ಖಾನ್ ಮತ್ತು ಇತರ ಮೂವರಿಗೆ ಸಮನ್ಸ್ ನೀಡಿತ್ತು ಎಂದು ವರದಿಯಾಗಿದೆ. ಆದರೆ, ಖಾನ್ ತನಿಖೆಗಾಗಿ ಪೊಲೀಸರ ಮುಂದೆ ಹಾಜರಾಗಲಿಲ್ಲ.

ಪುಟ 2

## ದೆಹಲಿ ಕಾಂಗ್ರೆಸ್ ಅಧ್ಯಕ್ಷ ಅರವಿಂದರ್ ಸಿಂಗ್ ಲವ್ಲಿ

# ರಾಜೀನಾಮೆ

**ದೆಹಲಿ:** ದೆಹಲಿ ಕಾಂಗ್ರೆಸ್ ಅಧ್ಯಕ್ಷ ಅರವಿಂದರ್ ಸಿಂಗ್ ಲವ್ಲಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಲೋಕಸಭೆ ಚುನಾವಣೆಗೂ ಮುನ್ನ ದೆಹಲಿಯಲ್ಲಿ ಕಾಂಗ್ರೆಸ್ ಭಾರೀ ಹಿನ್ನೆಡೆ ಅನುಭವಿಸಿದೆ.



ಪಕ್ಷದ ರಾಜ್ಯಾಧ್ಯಕ್ಷ ಅರವಿಂದರ್ ಸಿಂಗ್ ಲವ್ಲಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಕಾಂಗ್ರೆಸ್ ವಿರುದ್ಧ ಸುಳ್ಳು, ಕಪೋಲಕಲ್ಪಿತ ಮತ್ತು ದುರುದ್ದೇಶಪೂರಿತ ಭ್ರಷ್ಟಾಚಾರ ಆರೋಪಗಳನ್ನು ಹೊರಿಸುವ ಏಕೈಕ ಆಧಾರದ ಮೇಲೆ ರಚಿಸಲಾದ ಪಕ್ಷದೊಂದಿಗಿನ ಮೈತ್ರಿಗೆ ದೆಹಲಿ ಕಾಂಗ್ರೆಸ್ ಘಟಕವು ವಿರುದ್ಧವಾಗಿದೆ ಎಂದು ಅರವಿಂದರ್ ಲವ್ಲಿ ತಮ್ಮ ರಾಜೀನಾಮೆ ಪತ್ರದಲ್ಲಿ ಬರೆದಿದ್ದಾರೆ. ಇದರ ಹೊರತಾಗಿಯೂ ದೆಹಲಿಯಲ್ಲಿ ಆಪ್ ಜೊತೆ ಮೈತ್ರಿ ಮಾಡಿಕೊಳ್ಳಲು ಪಕ್ಷ ನಿರ್ಧರಿಸಿದೆ ಎಂದಿದ್ದಾರೆ.

ಪುಟ 2

## ದೆಹಲಿ ವಿಮಾನ ನಿಲ್ದಾಣದಲ್ಲಿ ನಕಲಿ ಪೈಲಟ್ ವಶಕ್ಕೆ

**ದೆಹಲಿ:** ದೆಹಲಿಯ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಕಲಿ ಪೈಲಟ್‌ನನ್ನು ಬಂಧಿಸಲಾಗಿದೆ. ಸಂಗೀತ್ ಸಿಂಗ್ ಎಂಬ ವ್ಯಕ್ತಿ ಪೈಲಟ್ ಸಮವಸ್ತ್ರವನ್ನು ಧರಿಸಿದ್ದರು. ತಾನು ಸಿಂಗಾಪುರ ಏರ್‌ಲೈನ್ಸ್‌ನಲ್ಲಿ ಪೈಲಟ್ ಆಗಿದ್ದೇನೆ ಎಂದು ಸೆಂಟ್ರಲ್ ಇಂಡಸ್ಟ್ರಿಯಲ್ ಸೆಕ್ಯುರಿಟಿ ಫೋರ್ಸ್ (ಸಿಐಎಸ್‌ಎಫ್) ಸಿಬ್ಬಂದಿಗೆ ತಿಳಿಸಿದ್ದ.

ಕೊರಳಲ್ಲಿ ಗುರುತಿನ ಚೀಟಿಯನ್ನೂ ಹಾಕಿಕೊಂಡಿದ್ದ. ಆದರೆ, ಸಿಐಎಸ್‌ಎಫ್ ಸಿಬ್ಬಂದಿಗೆ ಈ ವ್ಯಕ್ತಿಯ ಮೇಲೆ ಅನುಮಾನ ಬಂದಿದ್ದು, ವಿಚಾರಣೆ ವೇಳೆ ಆತ ಪೈಲಟ್ ಅಲ್ಲ ಎಂಬುದು ಬೆಳಕಿಗೆ ಬಂದಿದೆ. ಇದರ ನಂತರ, ಸಿಐಎಸ್‌ಎಫ್ ಈ ನಕಲಿ ಪೈಲಟ್ ಅನ್ನು ಹಿಡಿದು ದೆಹಲಿ ಪೊಲೀಸರಿಗೆ ಹಸ್ತಾಂತರಿಸಿತು.

ಇಂಡಿಯಾ ಟುಡೆಯ ಹಿಮಾಂಶು



ಮಿಶ್ರಾ ವರದಿಯ ಪ್ರಕಾರ, ಘಟನೆ ಏಪ್ರಿಲ್ 25 ರಂದು ನಡೆದಿದೆ. ಮೆಟ್ರೋ ಸ್ಕೈವಾಕ್ ಪ್ರದೇಶದಲ್ಲಿ ಪೈಲಟ್ ಸಮವಸ್ತ್ರ ಧರಿಸಿದ್ದ ವ್ಯಕ್ತಿಯೊಬ್ಬರು ತಿರುಗಾಡುತ್ತಿರುವುದನ್ನು ಸಿಐಎಸ್‌ಎಫ್ ಸಿಬ್ಬಂದಿ ನೋಡಿದ್ದರು. ಈ ವ್ಯಕ್ತಿ ತನ್ನನ್ನು ಏರ್‌ಲೈನ್ಸ್ ಕಂಪನಿಯ ಪೈಲಟ್ ಎಂದು ಹೇಳಿಕೊಂಡಿದ್ದ.

ಆರೋಪಿ ಸಂಗೀತ್ ಸಿಂಗ್ ಏವಿಯೇಷನ್ ಹಾಸ್ಪಿಟಾಲಿಟಿಯಲ್ಲಿ ಒಂದು ವರ್ಷದ ಕೋರ್ಸ್ ಮಾಡಿದ್ದಾರೆ. ಆರೋಪಿಗಳು 2020ರಲ್ಲಿ ಈ ಕೋರ್ಸ್ ಮಾಡಿದ್ದ. ಆದರೆ ತಾನು ಪೈಲಟ್ ಎಂದು ಮನೆಯವರಿಗೆ ಸುಳ್ಳು ಹೇಳಿದ್ದಾನೆ. ಈ ಮೂಲಕ ಆರೋಪಿಯು ಪೈಲಟ್ ಕೆಲಸ ಮಾಡುವುದಾಗಿ ಹೇಳಿಕೊಂಡು ತನ್ನ ಸ್ನೇಹಿತರು ಮತ್ತು ಕುಟುಂಬದವರನ್ನು ದಾರಿ ತಪ್ಪಿಸುತ್ತಿದ್ದ.

ಸಂಗೀತ್ ಸಿಂಗ್ ನನ್ನು ಬಂಧಿಸಲಾಗಿದೆ. ಆತನ ವಿರುದ್ಧ ವಂಚನೆ, ಫೋರ್ಜರಿ ಮತ್ತು ನಕಲಿ ದಾಖಲೆಗಳ ಬಳಕೆಗೆ ಸಂಬಂಧಿಸಿದ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ದೆಹಲಿ ಪೊಲೀಸರು ಸಂಪೂರ್ಣ ತನಿಖೆ ಆರಂಭಿಸಿದ್ದಾರೆ.

ಪುಟ 2

## ಅಂಬುಲೆನ್ಸ್‌ನಿಂದ ಸರಣಿ ಅಪಘಾತ: ಚಾಲಕನ ಬಂಧನ



**ಬೆಂಗಳೂರು:** ಅಂಬುಲೆನ್ಸ್‌ವೊಂದು ಮೂರುಕಾರು ಮತ್ತುಒಂದು ಬೈಕ್‌ಗೆ ಸರಣಿಯಾಗಿಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಹಾಗೂ ಕಾರು ಚಾಲಕನಿಗೆ ಸಣ್ಣಪುಟ್ಟ ಗಾಯಗಳಾಗಿರುವ ಘಟನೆ ಬ್ಯಾಟರಾಯನಪುರ ಸಂಚಾರಿಠಾಣಾ ವ್ಯಾಪ್ತಿಯ ಗುಡ್ಡದಹಳ್ಳಿ ಬಳಿ ನಡೆದಿದೆ. ಶುಕ್ರವಾರರಾತ್ರಿ 10:45ರ ಸುಮಾರಿಗೆ ಸರಣಿಅಪಘಾತ ನಡೆದಿದೆ. ಅಂಬುಲೆನ್ಸ್ ಚಾಲಕ ಸುಮಂತ್ ಮಾರ್ಕೆಟ್‌ನಿಂದ ಗುಡ್ಡದಹಳ್ಳಿ ಮಾರ್ಗವಾಗಿ ಬರುತ್ತಿದ್ದ ಸಂದರ್ಭ ನಿಯಂತ್ರಣ ಸಿಗದೆ ಎರಡುಕಾರು ಹಾಗೂ ಬೈಕ್ ನಡುವೆ ಸರಣಿಅಪಘಾತ ಸಂಭವಿಸಿದೆ.ಈ ವೇಳೆ ಕಾರಲ್ಲಿದ್ದ ನಾಲ್ಕು ತಿಂಗಳ ಗರ್ಭಿಣಿ ಪಾರಾಗಿದ್ದು, ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಗಾಯಾಳುಗಳಿಗೆ ಖಾಸಗಿ ಆಸ್ಪತ್ರೆಯಲ್ಲಿಚಿಕಿತ್ಸೆ ನೀಡಲಾಗುತ್ತಿದೆ. ಬ್ಯಾಟರಾಯನಪುರ ಸಂಚಾರಿ ಪೊಲೀಸರು ಚಾಲಕ ಸುಮಂತ್‌ನನ್ನು ಬಂಧಿಸಿದ್ದಾರೆ.ಈ ಕುರಿತು ಬ್ಯಾಟರಾಯನಪುರ ಸಂಚಾರಿ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

## ಜಮೀರ್ ರೋಷಾವೇಶದ ಭಾಷಣಕ್ಕೆಗ್ಲಾಸ್ ಪೀಸ್ ಪೀಸ್!



**ಬೆಳಗಾವಿ:** ಸಚಿವಜಮೀರ್ ಅಹ್ಮದ್ ಅವರು ಇಂದು ಭಾಷಣ ಮಾಡುತ್ತಿದ್ದ ಸಂದರ್ಭದಲ್ಲಿಡಯಾಸ್‌ಗಾಜನ್ನುಕೈಯಿಂದ ಗುದ್ದಿ ಒಡೆದು ಹಾಕಿದ ಪ್ರಸಂಗವೊಂದು ಬೆಳಗಾವಿಯಲ್ಲಿ ನಡೆದಿದೆ. ಜಮೀರ್ ಅವರು ಇಂದು ಬೆಳಗಾವಿಯ ಗೋಕಾಕ್ ನಗರದಕೆ.ಜಿಎನ್ ಹಾಲ್ ನಲ್ಲಿಕಾಂಗ್ರೆಸ್‌ಅಭ್ಯರ್ಥಿ ಮೃಣಾಲ್ ಪರ ಪ್ರಚಾರ ಭಾಷಣದಲ್ಲಿ ಭಾಗಿಯಾಗಿದ್ದಾರೆ. ಈ ವೇಳೆ ಸಚಿವರು ರೋಷಾವೇಶ ತೋರಿದ್ದಾರೆ. ಸಾರೇಜಹಾಂಸೇ ಅಚ್ಚಾ ಎಂದು ಹೇಳುತ್ತ ನಾವೆಲ್ಲಾಒಂದು.ದೇಶ ಹಮಾರಾ ಹೈ ಹಮಾರಾ ಹೈ ಎನ್ನುತ್ತಾ ಜಮೀರ್ ಅವರು ಕೈಯಿಂದ ಡಯಾಸ್ ಗಾಜಿಗೆ ಗುದ್ದಿದ್ದಾರೆ. ಜಮೀರ್ ಗುದ್ದುತ್ತಿದ್ದಂತೆಯೇ ಡಯಾಸ್‌ಗೆ ಅಳವಡಿಸಿದ ಗಾಜು ಒಡೆದು ಚೂರಾಗಿದೆ. ಗಾಜು ಪೀಸ್ ಪೀಸ್‌ಆಗುತ್ತಿದ್ದಂತೆ ನೆರೆದಿದ್ದ ಕಾರ್ಯಕರ್ತರು ಕೂಗ ತೊಡಗಿದ್ದಾರೆ.

## ಮತದಾನ ಮುಗಿದ ಬೆನ್ನಲ್ಲೇ ಜರ್ಮನಿಗೆ ಹಾರಿದ ಪ್ರಜ್ವಲ್‌ರೇವಣ್ಣ

**ಬೆಂಗಳೂರು:** ಹಾಸನ ಲೋಕಸಭಾಕ್ಷೇತ್ರದಅಭ್ಯರ್ಥಿ ಪ್ರಜ್ವಲ್ ರೇವಣ್ಣ ಮತದಾನ ಮುಗಿದ ಬಳಿಕ ಜರ್ಮನಿಗೆ ತೆರಳಿದ್ದಾರೆ.



ಲೋಕಸಭಾಚುನಾವಣಾ ಸಮಯದಲ್ಲಿ ಅಶ್ಲೀಲ ವಿಡಿಯೋ ಪ್ರಕರಣದೊಡ್ಡ ಸದ್ದು ಮಾಡುತ್ತಿರುವ ಬೆನ್ನಲ್ಲೇ ಪ್ರಜ್ವಲ್ ರೇವಣ್ಣ ಶನಿವಾರ ಬೆಳಗ್ಗೆ 3:15ಕ್ಕೆ ಬೆಂಗಳೂರಿನಿಂದ ಜರ್ಮನಿಯ ಫ್ರಂಕ್‌ಫರ್ಟ್‌ಗೆ ತೆರಳಿದ ಮಾಹಿತಿ ಲಭ್ಯವಾಗಿದೆ.

ಪ್ರಜ್ವಲ್‌ರೇವಣ್ಣಅವರ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷತನಿಖಾತಂಡರಚಿಸಲು ಸರ್ಕಾರ ತೀರ್ಮಾನಿಸಿದೆ.

ಹಾಸನ ಜಿಲ್ಲೆಯಲ್ಲಿ ಅಶ್ಲೀಲ ವೀಡಿಯೋ ತುಣುಕುಗಳು ಹರಿದಾಡುತ್ತಿದ್ದು, ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯಎಸಗಿರುವುದು ಮೇಲ್ನೋಟಕ್ಕೆಕಂಡು ಬರುತ್ತಿದೆ. ಈ ಹಿನ್ನೆಲೆಯಲ್ಲಿಎಸ್.ಐ.ಟಿತನಿಖೆ ನಡೆಸುವಂತೆ ಮಹಿಳಾ ಆಯೋಗದಅಧ್ಯಕ್ಷರು ಸರ್ಕಾರಕ್ಕೆ ಪತ್ರ ಬರೆದಿದ್ದರು.ಅವರ ಮನವಿಗೆ ಸ್ಪಂದಿಸಿ ಈ ನಿರ್ಣಯ ಕೈಗೊಳ್ಳಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

### ಬರಪರಿಹಾರ ಅಲ್ಪ ಪ್ರಮಾಣದ ಹಣಕೊಟ್ಟು

# ಕೇಂದ್ರ ಸರ್ಕಾರದಿಂದ ಮಲತಾಯಿಧೋರಣೆ

**ಬೆಂಗಳೂರು:** ನಾವು 18,000 ಕೋಟಿಗೆ ಮನವಿ ಸಲ್ಲಿಸಿದ್ದೆವು. ಸಮಸ್ಯೆ ಗಂಭೀರವಾಗಿರುವ ಆಧಾರದ ಮೇಲೆ ಪರಿಹಾರ ಕೇಳಿದ್ದೆವು. ಈಗ 3,400 ಕೋಟಿಯಷ್ಟು ಹಣಕೊಟ್ಟಿದ್ದಾರೆ. ಅಲ್ಪ ಪ್ರಮಾಣದ ಹಣಕೊಟ್ಟು ಮಲತಾಯಿ ಧೋರಣೆ ಮಾಡಿದ್ದಾರೆ ಎಂದು ಕಂದಾಯ ಸಚಿವಕೃಷ್ಣ ಬೈರೇಗೌಡಕೇಂದ್ರದ ವಿರುದ್ಧ ಅಸಮಾಧಾನ ಹೊರಹಾಕಿದ್ದಾರೆ.

ಕೇಂದ್ರದಿಂದ ಬರ ಪರಿಹಾರ ಬಿಡುಗಡೆ ವಿಚಾರವಾಗಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬರ ಪರಿಹಾರ ಬಿಡುಗಡೆ ಪತ್ರ ಸಾಮಾಜಿಕ ಜಾಲತಾಣದಲ್ಲಿ ಓಡಾಡುತ್ತಿದೆ. ಕೇಂದ್ರ ಸರ್ಕಾರದ ಜೊತೆ ಮಾತುಕತೆ ಮಾಡಿದ್ದೇವೆ. ಆದರೆ ಯಾವುದೇ ಅಧಿಕೃತ ದೃಢೀಕರಣ ಆಗಿಲ್ಲ. ನಾವು ಅಧಿಕೃತ ಆದೇಶದ ನಿರೀಕ್ಷೆಯಲ್ಲಿದ್ದೇವೆ ಎಂದರು.

ಅವರ ಬಳಿ ಸಮಯ ಇದ್ದಾಗ ರಾಜ್ಯಕ್ಕೆ ಪರ ಪರಿಹಾರ ಬಿಡುಗಡೆ ಅವಕಾಶ ತೆಗೆದುಕೊಂಡಿಲ್ಲ. ನಾಲ್ಕು ತಿಂಗಳು ನಾವು ನೀಡಿದ ಪತ್ರದ ಮೇಲೆ ಕೂತಿದ್ದರು. ಕರ್ನಾಟಕದ ಹಕ್ಕಿಗೆ ಯಾವುದೇ ಬೆಲೆಯನ್ನೂಕೊಡಲಿಲ್ಲ. ಅವರ ಕೈಯಲ್ಲಿ ತೀರ್ಮಾನ



ಇದ್ದಾಗ ರಾಜ್ಯಕ್ಕೆ ಕೊಡಬಾರದು ಅನ್ನೋ ಧೋರಣೆ ಹೊಂದಿದ್ದರು. ವಿಪತ್ತು ನಿರ್ವಹಣಾ ಕಾಯ್ದೆ 2005ರಡಿ ಹಣ ಬಿಡುಗಡೆ ಮಾಡಬೇಕಿತ್ತು. ಬಿಡುಗಡೆ ಮಾಡದಕಾರಣ ನಾವು ಕೇಂದ್ರದ ವಿರುದ್ಧಕೋರ್ಟ್ ಮೆಟ್ಟಿಲೇರುವ ಅವಶ್ಯಕತೆಎದುರಾಯಿತು. ಕೋರ್ಟ್‌ನಲ್ಲಿ ಎರಡು ಬಾರಿ ಹಿಯರಿಂಗ್ ಆಗಿದೆ.ನಾವು ಕೊಟ್ಟಿರುವುದಕ್ಕೆ ಎಲ್ಲವೂ ಸರಿಇದೆ, ಕ್ರಮಬದ್ಧವಾಗಿತ್ತು. ಅದಕ್ಕೆ ಹೆಚ್ಚು ಚರ್ಚೆ ಆಗಲಿಲ್ಲ. ವಾದ ಬೇಡ ಅಂತ ಕೇಂದ್ರದ ಪರ ವಕೀಲರು ಮನವಿ ಮಾಡಿದ್ದಾರೆಎಂದು ತಿಳಿಸಿದರು.

ನಾವು ಸೆಪ್ಟೆಂಬರ್‌ನಲ್ಲಿ ಪರಿಹಾರದ ಮನವಿ ಕೊಟ್ಟಿದ್ದೆವು. ಕೇಂದ್ರ ತಂಡ ಬಂದು ಅಧ್ಯಯನ ಮಾಡಿ ಹೋಗಿತ್ತು. ರಾಜ್ಯದ ಮನವಿಯನ್ನು ಕೇಂದ್ರತಡ ಮಾಡಿತ್ತು. ಕೇಂದ್ರದ ಸಚಿವರನ್ನು ಭೇಟಿ ಮಾಡಿದರೂ ಬಿಡುಗಡೆ ಮಾಡಿರಲಿಲ್ಲ. ನಾವು ಮನವಿ ಕೊಟ್ಟು ಏಳು ತಿಂಗಳು ಆಗಿತ್ತು.ಕರ್ನಾಟಕದ ಮನವಿಗೆ ಗೌರವಕೊಡಲಿಲ್ಲ. ಅದಕ್ಕಾಗಿ ನಾವು ಸುಪ್ರೀಂಕೋರ್ಟ್ ಮೆಟ್ಟಿಲು ಹತ್ತಿದೆವು. ಕಾನೂನಿನ ಹೋರಾಟ ಮಾಡಬೇಕಾಯಿತು. ರಾಜ್ಯದ ಮನವಿಯನ್ನು ಕೋರ್ಟ್ ಪ್ರಶ್ನೆ ಮಾಡಲಿಲ್ಲ. ನಾವು ಸಮಯಕ್ಕೆ ಸರಿಯಾಗಿಎಲ್ಲಾ ಮನವಿ ಮಾಡಿದೆವು. ಕೇಂದ್ರದ ವಕೀಲರು ಮನವಿ ಮಾಡಿದರು.ನಾವು ನಿರ್ಧಾರ ಮಾಡಲು ಸಮಯ ಬೇಕು ಎಂದಿದ್ದರು. ನಮಗೆ ಹೋರಾಟದ ಮೂಲಕ ಬರ ಪರಿಹಾರ ಹಣ ಬಂದಿದೆ.ನಮಗೆ ಕಾನೂನು ಬದ್ಧವಾಗಿ ಬಂದಿರುವ ಹಣ ಇದು ಎಂದು ಹೇಳಿದರು.

## ಕಾಂಗ್ರೆಸ್ ಅಧಿನಾಯಕಿಯಿಂದ್ಲೇ ಏನೂ ಮಾಡೋಕೆ ಆಗಲಿಲ್ಲ

**ಕೊಪ್ಪಳ:** ಜಿಲ್ಲೆಯಲ್ಲಿತಂಗಡಗಿ ವರ್ಸಸ್ ರೆಡ್ಡಿ ಟಾಕ್‌ಫೈಟ್ ಮತ್ತೆ ಜೋರಾಗಿದೆ. ಕಾಂಗ್ರೆಸ್ ಅಧಿನಾಯಕಿಯಿಂದಲೇ ಏನೂ ಮಾಡೋಕೆ ಆಗಲಿಲ್ಲ. ನೀನೇನು ಮಾಡ್ತೀಯಾ.. ಎನ್ನುವ ಮೂಲಕ ಸಚಿವ ಶಿವರಾಜ್ ತಂಗಡಗಿಗೆ ಶಾಸಕ ಗಾಲಿ ಜನಾರ್ದನರೆಡ್ಡಿ ಟಾಂಗ್‌ಕೊಟ್ಟಿದ್ದಾರೆ.

ಕುಷ್ಟಗಿತಾಲೂಕಿನ ಹಮಸಾಗರದಲ್ಲಿ ಮಾತನಾಡುತ್ತಾ ಜನಾರ್ದನರೆಡ್ಡಿ ಬೆತ್ತಲೆ ಮಾಡ್ತೀನಿ ಎಂಬ ತಂಗಡಗಿ ಹೇಳಿಕೆಗೆ ತಿರುಗೇಟು ನೀಡಿದಅವರು, ತಂಗಡಗಿ ನಿನ್ನಕಾಂಗ್ರೆಸ್ ಪಕ್ಷದ ಅಧಿನಾಯಕಿ ಸೋನಿಯಾಗಾಂಧಿ ಕೈಯಲ್ಲಿ ನನ್ನ ಏನೂ ಮಾಡಿಕೊಳ್ಳಲು ಆಗಿಲ್ಲ. ಅಧಿಕಾರಕ್ಕೆ ಬರೋಕೆ ಆಗ್ತಿಲ್ಲ ಅಂತ ನನ್ನ 4 ವರ್ಷಜೈಲಲ್ಲಿಟ್ಟು ಅಧಿಕಾರಕ್ಕೆ ಬಂದಿದ್ದೀರಿ. ನಾಚಿಕೆಯಾಗಬೇಕು ನಿಮಗೆ.ಈಗ ಬನ್ನಿ ಅಧಿಕಾರಕ್ಕೆ, ಹೇಗೆ ಬರ್ತಿರೋ ನಾನು ನೋಡ್ತೀನಿ ಎಂದುಕಿಡಿಕಾರಿದರು.

ನಮ್ಮಕರ್ಮ ಫಲ ನಮ್ಮಜೊತೆಇರುತ್ತೆ, ನಾವು ಏನೇ ಮಾಡಿದ್ರುಅದು ನಮ್ಮಜೊತೆ ಬರುತ್ತೆ.ಒಳ್ಳೆಯದು ಮಾಡಿದ್ರೆ ಒಳ್ಳೆಯದಾಗತ್ತೆ, ಕೆಟ್ಟದ್ದು ಮಾಡಿದ್ರೆ ಕೆಟ್ಟದಾಗುತ್ತೆ. 10 ವರ್ಷದಲ್ಲಿದೇಶದಲ್ಲಿ ಕೊಳ್ಳೆ ಹೊಡೆದು ಲೂಟಿ ಮಾಡಿದ್ದೀರಿ, ಜನಾರ್ದನರೆಡ್ಡಿನ ಜೈಲಿಗೆ ಹಾಕಿದ್ರಿ, ಆಂಧ್ರದಲ್ಲಿ ಜಗನ್ ಮೋಹನ್‌ರೆಡ್ಡಿ, ತಮಿಳುನಾಡಲ್ಲಿ ಕನಿಮೋಳಿ, ಅಮಿತ್ ಶಾರನ್ನಜೈಲಿಗೆ ಹಾಕಿದ್ರಿ. ನಿಮಗೆ ನಾಚಿಕೆ ಇಲ್ಲ, ಅಧಿಕಾರಕ್ಕಾಗಿ 25-30



ಕುಟುಂಬಗಳನ್ನ ಜೈಲಿಗೆ ಹಾಕಿ ನೀವು ಬೆತ್ತಲಾಗಿದ್ದೀರಿ. ಇವತ್ತು ಬೆತ್ತಲೆ ಮಾಡ್ತೀವಿ ಅಂತ ಹೇಳುವ ತಂಗಡಗಿ, ಡಿಕೆಶಿ ತಿಹಾರ್‌ಜೈಲಿಗೆ ಹೋಗುವಾಗ ಎಲ್ಲಿಗೆ ಹೋಗಿದ್ರಿಎಂದುರೆಡ್ಡಿ ಪ್ರಶ್ನಿಸಿದರು.

ಮೋದಿ ಅಂದ್ರೆ ಶಿವರಾಜ ತಂಗಡಗಿಗೆ ಕಿವಿಯಲ್ಲಿ ಮುಳ್ಳು ಚುಚ್ಚಿದಂತೆ ಆಗುತ್ತೆ. ಮೋದಿ ಮೋದಿ ಅಂದೋರಿಗೆ ಕಪಾಳಕ್ಕೆ ಹೊಡಿರಿ ಅಂತಾರೆ ಅಂದ್ರೆಎಷ್ಟು ತಲೆಕೆಟ್ಟಿರಬೇಕು ಇವರಿಗೆ. ಸಂಸ್ಕಾರ ಇಲ್ಲದ ಕಾಂಗ್ರೆಸ್ ಪಕ್ಷದ ಮಂತ್ರಿತಂಗಡಗಿ ಕಪಾಳಕ್ಕೆ ಹೊಡಿಬೇಕು ಅಂದ್ರೆ ನಮಗೆ ಒಂದು ಸೆಕೆಂಡ್‌ಕೂಡಾಟೈಂ ಬೇಕಾಗಿಲ್ಲ. ಆದರೆಅದು ಬಿಜೆಪಿ ಸಂಸ್ಕಾರ ಸಂಸ್ಕೃತಿಅಲ್ಲ. ಬಿಜೆಪಿ ಅಭ್ಯರ್ಥಿಗೆ ಮತ ಹಾಕುವಾಗ ಎರಡು ಬಾರಿ ಮನಸಲ್ಲಿ ಮೋದಿ ಮೋದಿ ಎಂದು ಮತ ಹಾಕಿ.ಆಗ ತಂಗಡಗಿಯ ಎರಡು ಕೆನ್ನೆಗೆ ಬಾರಿಸಿದಂತಾಗತ್ತೆ ಎಂದು ವಾಗ್ದಾಳಿ ನಡೆಸಿದ್ದಾರೆ.

## ಕುಮಾರಸ್ವಾಮಿ ಒಬ್ಬ ನಾಡ ದ್ರೋಹಿ

**ಬೆಂಗಳೂರು:** ಕೇಂದ್ರ ಸರ್ಕಾರ ಈಗ ಕೊಟ್ಟಿರುವ ಪರಿಹಾರವೇ ಸಾಕು ಬಿಡಿ ಎಂದು ಕುಮಾರಸ್ವಾಮಿ ಹೇಳಿದ್ದಾರೆ. ನೀವೊಬ್ಬ ನಾಡದ್ರೋಹಿ ಎಂದು ಮಾಜಿ ಸಿಎಂ ಹೆಚ್‌ಡಿಕೆ ವಿರುದ್ಧ ಡಿಸಿಎಂ ಡಿ.ಕೆ.ಶಿವಕುಮಾರ್ ವಾಗ್ದಾಳಿ ನಡೆಸಿದರು.



ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದಅವರು, ಕೇಂದ್ರದಿಂದ ಕರ್ನಾಟಕಕ್ಕೆ 3,454 ಕೋಟಿರೂ.ಬರ ಪರಿಹಾರ ನೀಡಿದ್ದೇವೆ ಎಂಬ ಪತ್ರ ಬಂದಿದೆ. ಆದರೆ ಖಾತೆಗೆ ಯಾವಾಗಜಮೆ ಆಗುತ್ತೋಗೊತ್ತಿಲ್ಲ. ಅವರು ಮಾಡಲಿ ಬಿಡಲಿ, ನಮ್ಮ ಕೆಲಸ ನಾವು ಮಾಡುತ್ತಿದ್ದೇವೆ. ಇದುರಾಜಕೀಯ ವಿಚಾರಅಲ್ಲ. ರಾಜ್ಯಕ್ಕೆ ಆಗುತ್ತಿರುವ ದೊಡ್ಡ ದ್ರೋಹದ ಬಗ್ಗೆ ಮಾತನಾಡುತ್ತಿದ್ದೇವೆ ಎಂದರು.

ಇದರ ಮಧ್ಯೆ ಕೆಲವು ರಾಜಕಾರಣಿಗಳು ಹೇಳ್ತಾರೆ.ಸಾಕು ಬಿಡಿ ಈಗ ಕೊಟ್ಟಿರೋದು ಅಂತಾರೆ. ಅದೇನು ಇವರ ಮನೆ ಆಸ್ತಿನಾ ದೇಶಕ್ಕಲ್ಲ, ರಾಜ್ಯಕ್ಕೆಇವರು ದ್ರೋಹಿಗಳು. ಕುಮಾರಸ್ವಾಮಿ ಹೇಳಿದ್ದರಂತೆ, ಸಾಕು ಬಿಡಿ ಕೊಟ್ಟಿರುವುದು ಅಂತಾ.ನೀನೊಬ್ಬ ನಾಡದ್ರೋಹಿ ಎಂದು ವಾಗ್ದಾಳಿ ನಡೆಸಿದರು.

ಈಗ ಕುಮಾರಸ್ವಾಮಿ ಏನೇನೋ ಮಾತನಾಡ್ತಿದ್ದಾರೆ.ಒಂದೇ ದಿನ ಕೈಹಿಡಿದು ಬರೆಸ್ತಾರಂತೆ. ಕುಮಾರಸ್ವಾಮಿ ಮೊದಲೇ ಮಾಡಬಹುದಿತ್ತಲ್ಲ ನಮಗೆ ವೋಟು ಕೊಡಿ ನಾವು ಮಾಡಿಸ್ತೇವೆ ಅಂತಾರೆ. ಅಧಿಕಾರ ಕೊಟ್ರೆ ಮಾತ್ರ ಇವರಿಗೆ ರಾಜ್ಯದ ಹಿತ.ಅಧಿಕಾರಇಲ್ಲದಿದ್ರೆಯಾವ ಹಿತವಿಲ್ಲ ಎಂದುಟಾಂಗ್ ಕೊಟ್ಟರು.

## ಪ್ರಜ್ವಲ್ ರೇವಣ್ಣ ಅಶ್ಲೀಲ ವೀಡಿಯೋ ಪ್ರಕರಣ: ತನಿಖೆ

**ಬೆಂಗಳೂರು:** ಪ್ರಜ್ವಲ್‌ರೇವಣ್ಣ ಅವರ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ತಂಡ ರಚಿಸಲು ಸರ್ಕಾರ ತೀರ್ಮಾನಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ. ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ಸಿಎಂ ಸಿದ್ದರಾಮಯ್ಯ, ಹಾಸನ ಜಿಲ್ಲೆಯಲ್ಲಿ ಅಶ್ಲೀಲ ವೀಡಿಯೋ ತುಣುಕುಗಳು ಹರಿದಾಡುತ್ತಿದ್ದು, ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯಎಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ ಎಂದು ಹೇಳಿದ್ದಾರೆ.

ಈ ಹಿನ್ನೆಲೆಯಲ್ಲಿ ಎಸ್‌ಐಟಿ ತನಿಖೆ ನಡೆಸುವಂತೆ ಮಹಿಳಾ ಆಯೋಗದ ಅಧ್ಯಕ್ಷರು ಸರ್ಕಾರಕ್ಕೆ ಪತ್ರ ಬರೆದಿದ್ದರು. ಅವರ ಮನವಿಗೆ ಸ್ಪಂದಿಸಿ ಈ ನಿರ್ಣಯ ಕೈಗೊಳ್ಳಲಾಗಿದೆ ಎಂದು ಸಿಎಂ ತಿಳಿಸಿದ್ದಾರೆ.

## ಬಿಜೆಪಿ ಸಂಸದ ಶ್ರೀನಿವಾಸ್ ಪ್ರಸಾದ್ ಆರೋಗ್ಯ ಸ್ಥಿತಿ ಗಂಭೀರ

**ಬೆಂಗಳೂರು:** ವಯೋಸಹಜ ಅನಾರೋಗ್ಯದಿಂದ ಆಸ್ಪತ್ರೆಗೆ ದಾಖಲಾಗಿದ್ದ ಬಿಜೆಪಿ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಅವರ ಸ್ಥಿತಿ ಗಂಭೀರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ.

ಅನಾರೋಗ್ಯಕಾರಣಕ್ಕೆ ಶ್ರೀನಿವಾಸ್ ಪ್ರಸಾದ್‌ಅವರು ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ಸಂಸದರ ಆರೋಗ್ಯ ಕುರಿತು ವೈದ್ಯ ಸುದರ್ಶನ್ ಬಲ್ಲಾಳ ಅವರು ಸುದ್ದಿಗೋಷ್ಠಿ ನಡೆಸಿ ಮಾಹಿತಿ ಹಂಚಿಕೊಂಡಿದ್ದಾರೆ.

ಸುದರ್ಶನ್ ಬಲ್ಲಾಳ ಮಾತನಾಡಿ, ಶ್ರೀನಿವಾಸ್ ಪ್ರಸಾದ್ ಅವರು 25



ವರ್ಷದಿಂದ ನಮ್ಮ ಬಳಿ ಚಿಕಿತ್ಸೆಗೆ ಬರ್ತಾ ಇದ್ದಾರೆ. ಎಪ್ರಿಲ್ 22 ರಂದು ಇನ್‌ಫೆಕ್ಷನ್ ಅಂತಾ ಬಂದು ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ಶುಗರ್, ಬಿಪಿ ವ್ಯತ್ಯಾಸ ಇರುವುದರಿಂದ ಐಸಿಯುನಲ್ಲಿ ಚಿಕಿತ್ಸೆಕೊಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

## ಏ.30ಕ್ಕೆ ಶಿವಮೊಗ್ಗಕ್ಕೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಭೇಟಿ

**ಶಿವಮೊಗ್ಗ:** ಏಪ್ರಿಲ್ 30 ರಂದು ಶಿವಮೊಗ್ಗಕ್ಕೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಭೇಟಿ ನೀಡುತ್ತಿದ್ದು, ಪ್ರಚಾರ ನಡೆಸಲಿದ್ದಾರೆ ಎಂದು ಬಿಜೆಪಿ ಅಭ್ಯರ್ಥಿ ಬಿ.ವೈ. ರಾಘವೇಂದ್ರ, ತಿಳಿಸಿದರು.

ಶಿವಮೊಗ್ಗದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದ ಅವರು, ರಾಜ್ಯದಲ್ಲಿ ಎರಡನೇ ಹಂತದ ಚುನಾವಣೆ ದಿನಾಂಕ ಹತ್ತಿರ ಬರುತ್ತಿದೆ. ಗ್ಯಾರಂಟಿ ಬಗ್ಗೆ ಸಾಕಷ್ಟು ಚರ್ಚೆ ನಡೆಯುತ್ತಿದೆ. ಕಾಂಗ್ರೆಸ್ ಪಕ್ಷದಿಂದ ತಾಯಂದಿರಿಗೆ ವರ್ಷಕ್ಕೆ ಒಂದು ಲಕ್ಷ ರೂ.ಕೊಡುವ ಬಗ್ಗೆ ಹೇಳಿದ್ದಾರೆ. ಇದು ಅಸಾಧ್ಯವಾದ ಮಾತಾಗಿದ್ದು, ಕಾಂಗ್ರೆಸ್ ಜನತೆಗೆ ಸುಳ್ಳು ಭರವಸೆ ನೀಡುತ್ತಿದೆ ಎಂದು ಟಾಂಗ್ ಕೊಟ್ಟರು.

ದೇಶದ ಬಜೆಟ್ 45 ಲಕ್ಷ ರೂ. ಕೋಟಿ ಇದೆ. ದೇಶದಲ್ಲಿ 68 ಲಕ್ಷಕೋಟಿ ಮಹಿಳೆಯರಿದ್ದಾರೆ. ಪ್ರತಿ ಕುಟುಂಬಕ್ಕೆ ಓರ್ವ ಮಹಿಳೆಗೆ ಅಂದರೂ 38 ಲಕ್ಷ ಕೋಟಿ ರೂ.ಬೇಕಾಗುತ್ತದೆ. ಆದರೆ ಗ್ಯಾರಂಟಿ ಮೂಲಕ ಕಾಂಗ್ರೆಸ್ ಮಹಿಳೆಯರನ್ನು



ತಪ್ಪುದಾರಿಗೆ ಎಳೆಯುತ್ತಿದೆ. ಇದು ದೇಶಕ್ಕೆ ಅಥವಾ ರಾಜ್ಯಕ್ಕೆ ಸೀಮಿತವಾದ ಪ್ರಣಾಳಿಕೆಯೇ ಗೊತ್ತಿಲ್ಲ ಎಂದು ತಿರುಗೇಟು ನೀಡಿದರು.

ಜನಒಂದು ಬಾರಿ ಮೋಸ ಹೋಗಬಹುದು. ಪದೇ ಪದೇ ಮೋಸ ಹೋಗಲ್ಲ. ನಮ್ಮದು ಮೋದಿ ಗ್ಯಾರಂಟಿ. ಮೋದಿ ಗ್ಯಾರಂಟಿ ಮುಂದೆ ಬೇರೆ ಗ್ಯಾರಂಟಿ ನಡೆಯುವುದಿಲ್ಲ ಎಂದರು.

## ಯುವತಿಯ ಫೋಟೋ ಅಶ್ಲೀಲವಾಗಿ ಎಡಿಟ್ ಮಾಡಿ ಇನ್ಸ್ಟಾಗ್ರಾಮ್‌ನಲ್ಲಿ ಪೋಸ್ಟ್

**ಬೆಂಗಳೂರು:** ಯುವತಿಯ ಭಾವಚಿತ್ರಗಳನ್ನು ಅಶ್ಲೀಲವಾಗಿ ಎಡಿಟ್ ಮಾಡಿ ಫೋಟೋಟಿ new_up_down_officialJA ಎಂಬ ಇನ್ಸ್ಟಾಗ್ರಾಮ್‌ಖಾತೆಯಲ್ಲಿ ಅಪ್ಲೋಡ್ ಮಾಡಿದ್ದ ಆರೋಪಿ ವಿರುದ್ಧ ಹೈಗ್ರೌಂಡ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. new_up_down_official ಎಂಬ ಇನ್ಸ್ಟಾಗ್ರಾಮ್ ಖಾತೆ ಹೊಂದಿರುವ ಆರೋಪಿ ಯುವತಿಯ ಭಾವಚಿತ್ರವನ್ನು ಎಡಿಟ್‌ಮಾಡಿ ಮಂಗಳವಾರ ಏಪ್ರಿಲ್ 09ರ ರಾತ್ರಿ 9 ಗಂಟೆ ಸುಮಾರಿಗೆ ತನ್ನ ಪೇಜ್ ನಲ್ಲಿ ಅಪ್ಲೋಡ್‌ಮಾಡಿದ್ದಾನೆ. ಬಳಿಕಯುವತಿಗೆ''5 ಸಾವಿರನೀಡಿದರೆನಿನ್ನ ಅಶ್ಲೀಲ ವಿಡಿಯೋಗಳನ್ನು ಡಿಲಿಟ್‌ಮಾಡುತ್ತೇನೆ''ಎಂದು ಹೇಳಿದ್ದಾನೆ.

ಆಗ ಯುವತಿ ಈ ವಿಚಾರವನ್ನು ಪೊಲೀಸರಿಗೆ ತಿಳಿಸುತ್ತೇನೆ ಎಂದು ಹೇಳಿದ್ದಾಳೆ.ಅದಕ್ಕೆ ಆರೋಪಿ ''ಪೊಲೀಸ್‌ನವರು ನಮ್ಮಮನೆಗೆ ದಿನ ಬರುತ್ತಾರೆ''ಅಂತಸಂದೇಶ ಕಳುಹಿಸಿದ್ದಾನೆ. ಬಳಿಕ ಯುವತಿ ಹೈಗ್ರೌಂಡ್ ಪೊಲೀಸ್‌ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.ದೂರುನೀಡಿ 8 ದಿನ ಕಳೆದರೂ ಪೊಲೀಸರು ಕ್ರಮ ಕೈಗೊಂಡಿಲ್ಲ ಎಂಬ



ಆರೋಪ ಕೇಳಿ ಬಂದಿದೆ.

**ಯುವತಿಯ ನಗ್ನ ಫೋಟೋ ಇನ್‌ಸ್ಟಾದಲ್ಲಿ ಪೋಸ್ಟ್ ಮಾಡಿದ ಆರೋಪಿ:** ಮತ್ತೊಂದು ಪ್ರಕರಣದಲ್ಲಿ, ಬೆಂಗಳೂರಿನ ಓರ್ವಯುವತಿಗೆ ಬ್ಲ್ಯಾಕ್‌ಮೇಲ್ ಮಾಡಿ ಸಾಮಾಜಿಕ ಜಾಲತಾಣದ ಮೂಲಕ ಆಕೆಯ ನಗ್ನ ಫೋಟೋಗಳನ್ನುಪಡೆದು ಸ್ನೇಹಿತರಿಗೆ ಮತ್ತು ಸಂಬಂಧಿಕರಿಗೆ ಶೇರ್‌ಮಾಡಿದ್ದ ಆರೋಪಿ ವಿರುದ್ಧ ದೂರು ದಾಖಲಾಗಿದೆ. ಯುವತಿ ದ್ವಿತೀಯ ಪಿಯುಸಿಯಲ್ಲಿ ವ್ಯಾಸಾಂಗ ಮಾಡುತ್ತಿದ್ದಾಳೆ. ಯುವತಿ ತಂದೆ 16 ವರ್ಷಗಳ ಹಿಂದೆ ರಸ್ತೆ ಅಪಘಾತದಲ್ಲಿ ಮೃತಪಟ್ಟಿದ್ದಾರೆ. ತಾಯಿ ಮನೆ ಕೆಲಸಮಾಡಿಕೊಂಡು ಮಕ್ಕಳನ್ನು ಸಾಕುತ್ತಿದ್ದಾರೆ. ಕಳೆದವರ್ಷ 2023ರಲ್ಲಿ ಸಂತ್ರಸ್ತೆಯ ಇನ್‌ಸ್ಟಾಗ್ರಾಂ ಖಾತೆಗೆ bhoomikachinnu974 ಎಂಬ ಇನ್‌ಸ್ಟಾಗ್ರಾಂ ಖಾತೆಯಿಂದ ಆಕೆಯ ಕುಟಂಬದ ಹಾಗೂ ತಾಯಿಯ ಎಡಿಟ್‌ನಗ್ನ ಚಿತ್ರಗಳನ್ನು ಕಳುಹಿಸಲಾಗಿದೆ.

ಬಳಿಕ ಆರೋಪಿ, ಸಂತ್ರಸ್ತೆಗೆ ಮೆಸೆಜ್ ಮಾಡಿ ''ನಿನ್ನತಾಯಿಯ ಫೋಟೋಗಳನ್ನು ಸಮಾಜಿಕ ಜಾಲತಾಣಗಳಲ್ಲಿ ಹರಿಬಿಡುತ್ತೇನೆ. ಈ ಫೋಟೋಗಳನ್ನು ಹರಿಬಿಡಬಾರದೆಂದರೇ ನಿನ್ನನಗ್ನ ಚಿತ್ರಗಳನ್ನು ಕಳುಹಿಸು''ಎಂದು ಬೆದರಿಕೆ ಹಾಕಿದ್ದಾನೆ. ಇದರಿಂದ ಹೆದರಿದ ಸಂತ್ರಸ್ತೆ ಆಕೆಯನಗ್ನ ಚಿತ್ರಗಳನ್ನು bhoomikachinnu974 ಎಂಬ ಇನ್‌ಸ್ಟಾಗ್ರಾಂಖಾತೆಗೆ ಕಳುಹಿಸಿದ್ದಾಳೆ.

ಬಳಿಕ ಆರೋಪಿ ಈ ನಗ್ನ ಚಿತ್ರಗಳನ್ನು ಏ.09 ರಂದು ಇನ್‌ಸ್ಟಾಗ್ರಾಂ ಮೂಲಕ ಸಂತ್ರಸ್ತೆಯ ಸ್ನೇಹಿತರಿಗೆ ಕಳಹಿಸಿದ್ದಾನೆ. ನಂತರ ChinnuChinnu ಎಂಬ ಫೇಸ್‌ಬುಕ್ ಖಾತೆಯಿಂದ ಯುವತಿಯ ಮಾವನ ಫೇಸ್‌ಬುಕ್ ಖಾತೆಗೆ ಕಳುಹಿಸಿದ್ದಾನೆ. ಪ್ರಕರಣ ಸಂಬಂಧಯುವತಿ ಅಮೃತಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾಳೆ.

## ಪ್ರಧಾನಿ ಮೋದಿ ರ‍್ಯಾಲಿ

ಮೊದಲ ಹಂತದ ಮತದಾನಕ್ಕೂ ಮುನ್ನ ಮೂರ್ನಾಲ್ಕು ಬಾರಿ ಆಗಮಿಸಿದ್ದ ಪ್ರಧಾನಿ ಮೋದಿ, ಇದೀಗ ಎರಡನೇ ಹಂತದ ಮತಶಿಕಾರಿಗೆ ಮತ್ತೊಮ್ಮೆ ಎಂಟ್ರಿ ಕೊಟ್ಟಿದ್ದು, ಉತ್ತರ ಕರ್ನಾಟಕದಾದ್ಯಂತ ಭರ್ಜರಿ ಮತಬೇಟೆಗಿಳಿದಿದ್ದಾರೆ. ಇಂದು ಮತ್ತು ನಾಳೆ (ಏಪ್ರಿಲ್ 28, 29) ರಾಜ್ಯದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಒಟ್ಟು ಐದು ಕ್ಷೇತ್ರಗಳಲ್ಲಿನ ಸಮಾವೇಶಗಳಲ್ಲಿ ಭಾಗಿಯಾಗಲಿದ್ದಾರೆ. ಒಂದು ಒಂದೇ ದಿನ ನಾಲ್ಕು ಕ್ಷೇತ್ರಗಳಲ್ಲಿ ಮೋದಿ ಅಬ್ಬರದ ಪ್ರಚಾರ ಮಾಡಲಿದ್ದಾರೆ. ಬೆಳಗಾವಿ, ದಾವಣಗೆರೆ, ಉತ್ತರ ಕನ್ನಡ ಜಿಲ್ಲೆಯ ಶಿರಸಿ, ವಿಜಯನಗರ ಹೊಸಪೇಟೆಯಲ್ಲಿ ಜಿಲ್ಲೆಯ ಅಭ್ಯರ್ಥಿಗಳ ಪರ ಅವರು ಮತಯಾಚಿಸಲಿದ್ದಾರೆ. ಮೊದಲಿಗೆ ಮೋದಿ ಬೆಳಗಾವಿಯಿಂದಲೇ ಪ್ರಚಾರ ಆರಂಭಿಸಿದ್ದಾರೆ.

ಇನ್ನು ಮೇ 7ರಂದು ರಾಜ್ಯದಲ್ಲಿ ಎರಡನೇ ಹಂತದ ಚುನಾವಣೆ ಹಿನ್ನೆಲೆ ಶನಿವಾರ (ಏ.27) ರಾತ್ರಿಯೇ ಪ್ರಧಾನಿ ನರೇಂದ್ರ ಮೋದಿ ಅವರು ಬೆಳಗಾವಿಗೆ ಆಗಮಿಸಿ, ಕಾಕತಿ ಬಳಿಯ ಹೋಟೆಲ್ ನಲ್ಲಿ ತಂಗಿದ್ದರು. ಪ್ರಧಾನಿ ಮೋದಿ ಅವರು ಇಂದು (ಏ.28) ಬೆಳಗಾವಿ, ದಾವಣಗೆರೆ, ಹೊಸಪೇಟೆ, ಶಿರಸಿಯಲ್ಲಿ ನಡೆಯುವ ನಾಲ್ಕು ಸಮಾವೇಶದಲ್ಲಿ ಭಾಗಿಯಾಗಲಿದ್ದಾರೆ. ಬೆಳಗ್ಗೆ 10.55ಕ್ಕೆ ಹೋಟೆಲ್ ನಿಂದ ಹೊರಡುವ ಪ್ರಧಾನಿ ಮೋದಿ, 11 ಗಂಟೆಗೆ ಬೆಳಗಾವಿಯ ಮಾಲಿನಿ ಸಿಟಿ ಮೈದಾನದ ನಡಯುವೆ ಸಮಾವೇಶದಲ್ಲಿ ಭಾಗಿಯಾಗಲಿದ್ದಾರೆ. 11.55ಕ್ಕೆ ಬೆಳಗಾವಿಯಿಂದ ಹೊರಟು 12.55ಕ್ಕೆ ಉತ್ತರ ಕನ್ನಡ ಜಿಲ್ಲೆಯ ಶಿರಸಿಗೆ ತಲುಪಲಿದ್ದಾರೆ.

ಬಳಿಕ ಶಿರಸಿಯಿಂದ ಮಧ್ಯಾಹ್ನ 2 ಗಂಟೆಗೆ ಹೊರಟು 2.50ಕ್ಕೆ ದಾವಣಗೆರೆಗೆ ಆಗಮಿಸಲಿದ್ದು, ದಾವಣಗೆರೆ ಸಮಾವೇಶದಲ್ಲಿ ಭಾಗವಹಿಸಿ, ನಂತರ ಸಂಜೆ 4.50ಕ್ಕೆ ಹೊಸಪೇಟೆ ತಲುಪಲಿದ್ದಾರೆ. ಅಲ್ಲಿ 5 ಗಂಟೆಗೆ ಹೊಸಪೇಟೆ ಸಮಾವೇಶದಲ್ಲಿ ಭಾಗವಹಿಸಿ ರಾತ್ರಿ ಹೊಸಪೇಟೆಯಲ್ಲಿ ಮೋದಿ ವಾಸ್ತವ್ಯ ಮಾಡಲಿದ್ದಾರೆ.

**ಏ.29 ರ ಪ್ರಚಾರ ವಿವರ:** ಏಪ್ರಿಲ್ 29ರ ಬೆಳಗ್ಗೆ 11 ಗಂಟೆಗೆ ಹೊಸಪೇಟೆಯಿಂದ ಹೊರಟು ಮಧ್ಯಾಹ್ನ 12.05ಕ್ಕೆ ಬಾಗಲಕೋಟೆಗೆ ತಲುಪಿ ಮಧ್ಯಾಹ್ನ 12.15ಕ್ಕೆ ಬಾಗಲಕೋಟೆಯ ತೋಟಗಾರಿಕೆ ವಿವಿ ಮೈದಾನದಲ್ಲಿ ನಡೆಯುವ ಸಾರ್ವಜನಿಕ ಸಮಾವೇಶದಲ್ಲಿ ಭಾಗವಹಿಸಿ, ಬಿಜೆಪಿ ಅಭ್ಯರ್ಥಿ ಪರ ಪ್ರಚಾರ ಮಾಡಲಿದ್ದಾರೆ. ಮಧ್ಯಾಹ್ನ 1.05ಕ್ಕೆ ಬಾಗಲಕೋಟೆಯಿಂದ ಸೊಲ್ಲಾಪುರಕ್ಕೆ ಮೋದಿ ಪ್ರಯಾಣಿಸಲಿದ್ದಾರೆ.

ಮೊದಲನೇ ಪುಟದಿಂದ...

## 33 ಜನರ ಬಂಧನ

ಪ್ರಕರಣಕ್ಕೆ ಸಂಬಂಧಿಸಿದಂತೆ ಇಂದು ಸಭೆ ನಡೆಸಿದ ಚುನಾವಣಾ ಅಧಿಕಾರಿಗಳು ಸೋಮವಾರ ಮರು ಮತದಾನಕ್ಕೆ ಗ್ರೀನ್ ಸಿಗ್ನಲ್ ಕೊಟ್ಟಿದೆ. ರೊಚ್ಚಿಗೆದ್ದ ಹಾಡಿಯ ಮಂದಿ ಪೊಲೀಸರು ಹಾಗೂ ಚುನಾವಣಾ ಅಧಿಕಾರಿಗಳ ಮೇಲೆ ಕಲ್ಲು ಬೀಸಿ ಇವಿಎಂ ವಿವಿಪ್ಯಾಟ್ ನ ಧ್ವಂಸ ಮಾಡಿ ಹಾಕಿದ್ದರು. ಈ ಹಿನ್ನಲೆ ಸೋಮವಾರ ಇಂಡಿಗನತ್ತ 146 ಮತಗಟ್ಟೆಯಲ್ಲಿ ಮರು ಮತದಾನಕ್ಕೆ ಸಿದ್ದತೆ ನಡೆಸಲಾಗಿದೆ.

ಇನ್ನು ನಿನ್ನೆ ಗಲಾಟೆ ಗದ್ದಲವಾಗಿ ಇವಿಎಂ ಮಷಿನ್ ಧ್ವಂಸ ಮಾಡಿದ ಬೆನ್ನಲ್ಲೆ ಕೇಂದ್ರ ಚುನಾವಣಾ ಆಯೋಗಕ್ಕೆ ಜಿಲ್ಲಾ ಮುಖ್ಯ ಚುನಾವಣಾ ಅಧಿಕಾರಿ ವರದಿ ನೀಡಿತ್ತು. ವರದಿ ಹಾಗೂ ಎಫ್ ಐಆರ್ ಕಾಪಿ ಸ್ವೀಕರಿಸಿದ ಕೇಂದ್ರ ಚುನಾವಣಾ ಆಯೋಗ ಸೋಮವಾರ ಮರು ಮತದಾನಕ್ಕೆ ಗ್ರೀನ್ ಸಿಗ್ನಲ್ ನೀಡಿದೆ. ಈ ಹಿನ್ನಲೆ ಪೊಲೀಸ್ ಇಲಾಖೆ ಸೂಕ್ತ ಭದ್ರತೆಯೊಂದಿಗೆ ಪೊಲೀಸ್ ಬಿಗಿ ಬಂದೋಬಸ್ತ್ ಜತೆ ಮರು ಮತದಾನಕ್ಕೆ ಸಿದ್ದತೆ ನಡೆಸಿದೆ.

**ಮತದಾನದ ವೇಳೆ ನಡೆದಿದ್ದೇನು :** ಮೂಲ ಸೌಕರ್ಯವನ್ನು ಕಲ್ಪಿಸದ ವಿಚಾರವಾಗಿ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಇಂಡಿಗನತ್ತ ಗ್ರಾಮದ ಜನರು ಮತದಾನ ಬಹಿಷ್ಕರಿಸಿದ್ದರು. ಯಾರೊಬ್ಬರೂ ಮತದಾನಕ್ಕೆ ಬಾರದೆ ಇರುವುದರಿಂದ ಶೂನ್ಯ ಮತದಾನವಾಗುವ ಆತಂಕ ಅಧಿಕಾರಿಗಳದ್ದಾಗಿತ್ತು. ಹೀಗಾಗಿ ಅಧಿಕಾರಿಗಳು ಹಾಡಿ ಜನರನ್ನು ಮನವೊಲಿಸಿ ಕರೆತಂದು ಮತದಾನ ಮಾಡಿಸಲು ಮುಂದಾಗಿದ್ದರು. ಇದರಿಂದ ರೊಚ್ಚಿಗೆದ್ದ ಗ್ರಾಮಸ್ಥರು ಇಂಡಿಗನತ್ತ ಗ್ರಾಮದ ಮತಗಟ್ಟೆಯನ್ನು ಸುತ್ತುವರಿದಿದ್ದು, ಮೂಲಸೌಕರ್ಯ ಕಲ್ಪಿಸುವವರೆಗೆ ಮತದಾನ ಮಾಡಬೇಡಿ ಆಗ್ರಹಿಸಿದ್ದರು. ಈ ವೇಳೆ, ಜನರನ್ನು ಚದುರಿಸಲು ಪೊಲೀಸರು ಲಾಠಿ ಚಾರ್ಜ್ ಮಾಡಿದ್ದರು. ಇದರಿಂದ ರೊಚ್ಚಿಗೆದ್ದ ಗ್ರಾಮಸ್ಥರು ಮತಗಟ್ಟೆ ಮೇಲೆ ದಾಳಿ ಮಾಡಿ ಮೇಜು, ಕುರ್ಚಿ, ಇವಿಎಂ ಧ್ವಂಸ ಮಾಡಿದ್ದರು.

## ನಕಲಿ ಪೈಲಟ್ ವಶಕ್ಕೆ

ಸಂದೀಪ್ ಸಿಂಗ್ ಮೇಲೆ ನಿಗಾ ಇರಿಸಿದ್ದ ಸಿಐಎಸ್ ಎಫ್ ವಿಮಾನ ನಿಲ್ದಾಣದ ಒಂದೇ ದಾರಿಯಲ್ಲಿ ಹಲವು ಬಾರಿ ಅಡ್ಡಾಡುವುದನ್ನು ಗಮನಿಸಿ, ತೀವ್ರ ವಿಚಾರಣೆಗೊಳಪಡಿಸಿದಾಗ ನಕಲಿ ಪೈಲಟ್ ಎನ್ನುವ ವಿಚಾರ ಹೊರಗೆ ಬಂದಿದೆ.

## ರಾಜೀನಾಮೆ

ದೆಹಲಿ ಕಾಂಗ್ರೆಸ್‌ನ ಶಿಸ್ತು ಸಮಿತಿ ಸಭೆಯ ನಂತರ ದೆಹಲಿಯ ಮಾಜಿ ಸಚಿವ ಮತ್ತು ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಸದಸ್ಯ ರಾಜ್‌ಕುಮಾರ್ ಚೌಹಾಣ್ ಪಕ್ಷಕ್ಕೆ ರಾಜೀನಾಮೆ ನೀಡಿದ ಕೆಲವು ದಿನಗಳ ನಂತರ ಅರವಿಂದರ್ ಸಿಂಗ್ ಲವ್ಲಿ ರಾಜೀನಾಮೆ ನೀಡಿದ್ದಾರೆ. ದೆಹಲಿ ಕಾಂಗ್ರೆಸ್‌ನ ಶಿಸ್ತು ಸಮಿತಿಯು ಮಂಗಳವಾರ ಸಭೆ ನಡೆಸಿದ್ದು, ಚೌಹಾಣ್ ವಿರುದ್ಧದ ದೂರುಗಳ ಬಗ್ಗೆ ಯಾವುದೇ ಕ್ರಮ ಕೈಗೊಳ್ಳಬೇಕೆ ಎಂದು ನಿರ್ಧರಿಸಲು ಎಐಸಿಸಿಗೆ ಬಿಟ್ಟಿತ್ತು.

## ಸಾಹಿಲ್ ಖಾನ್ ಸೆರೆ

ಮಹಾದೇವ್ ಬೆಟ್ಟಿಂಗ್ ಆಯಪ್ ಪ್ರಕರಣದಲ್ಲಿ ಹಲವು ನಟ ಹೆಸರುಗಳು ಬೆಳಕಿಗೆ ಬಂದಿವೆ. ಇದೀಗ ಆ ಪಟ್ಟಿಯಲ್ಲಿ ಸಾಹಿಲ್ ಖಾನ್ ಹೆಸರೂ ಕೂಡ ಸೇರಿದೆ. ಮಹಾದೇವ ಬೆಟ್ಟಿಂಗ್ ಆ ಯಪ್ ನಿಷೇಧಗೊಳಿಸಿ ಕೇಂದ್ರ ಸರ್ಕಾರ ಕಳೆದ ವರ್ಷ ಆದೇಶ ಹೊರಡಿಸಿತ್ತು. ಮಹದೇವ್ ಬೆಟ್ಟಿಂಗ್ ಆ ಯಪ್ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ತನಿಖೆ ನಡೆಸಿದ್ದು, ಈ ಮಧ್ಯೆ ಮಹದೇವ್ ಬುಕ್ ಆನ್‌ಲೈಲ್ ಸೇರಿದಂತೆ ಇತರೆ 21 ಬೆಟ್ಟಿಂಗ್ ಅಪ್ಲಿಕೇಶನ್‌ಗಳು ಮತ್ತು ವೆಬ್‌ಸೈಟ್‌ಗಳ ವಿರುದ್ಧ ಐಟಿ ಸಚಿವಾಲಯ ಬ್ಯಾಂಧ ಹೇರಿತ್ತು. ಇಡಿ ಶಿಫಾರಸಿನ ನಂತರ ಮಾಹಿತಿ ತಂತ್ರಜ್ಞಾನ ಕಾಯ್ದೆಯ ಸೆಕ್ಷನ್ 69ಎ ಅಡಿಯಲ್ಲಿ ಆದೇಶ ಹೊರಡಿಸಲಾಗಿತ್ತು.

## ಸಾವು

ಹೆದ್ದಾರಿಯಲ್ಲಿ ಸಾಗುತ್ತಿದ್ದ ಎಸ್ ಯುವಿ ಹಲವು ಬಾರಿ ರಸ್ತೆಯಲ್ಲಿ ಪಲ್ಟಿಯಾಗಿ ಮರದ ಮೇಲೆ ಸಿಲುಕಿಕೊಂಡಿತ್ತು. ಆ ವೇಳೆ ಕಾರು ಸುಮಾರು 20 ಅಡಿ ಎತ್ತರಕ್ಕೆ ಏರಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅವರು ಪ್ರಯಾಣಿಸುತ್ತಿದ್ದ ಕಾರು ವೇಗದ ಮಿತಿಯನ್ನು ಮೀರಿದೆ ಎಂದು ಮುಖ್ಯ ಉಪ ಕರೋನರ್ ಮೈಕ್ ಎಲ್ಲಿಸ್ ಮಾಧ್ಯಮಗಳಿಗೆ ತಿಳಿಸಿದ್ದಾರೆ. ಈ ಘಟನೆಯಲ್ಲಿ ಬೇರೆ ಯಾವುದೇ ವಾಹನಗಳು ಭಾಗಿಯಾಗಿಲ್ಲ ಎಂದು ಸ್ಪಷ್ಟಪಡಿಸಿದರು. ಸೌತ್ ಕೆರೊಲಿನಾ ಹೈವೇ ಪೆಟ್ರೋಲ್, ಗ್ಯಾಂಟ್ ಫೈರ್, ರೆಸ್ಕ್ಯೂ, ಮತ್ತು ಗ್ರೀನ್‌ವಿಲ್ಲೆ ಕೌಂಟಿ ಇಎಂಎಸ್ ಘಟಕಗಳು ಸೇರಿದಂತೆ ರಕ್ಷಣಾ ತಂಡಗಳು ಘಟನಾ ಸ್ಥಳಕ್ಕೆ ಧಾವಿಸಿ ನೆರವು ನೀಡಿವೆ. ಈ ವೇಳೆ ಕಾರಿನಲ್ಲಿದ್ದ ಮೂವರು ಮಹಿಳೆಯರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅಪಘಾತದಲ್ಲಿ ಬದುಕುಳಿದ ವ್ಯಕ್ತಿಯೊಬ್ಬರು ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

## ಚೀನೀ ಬೊಂಬೆ ಆಮದು

ಭಾರತದಾದ್ಯಂತ 60ಕ್ಕೂ ಹೆಚ್ಚು ಆಟಿಕೆ ಕ್ಲಸ್ಟರ್ ಗಳನ್ನು ಸ್ಥಾಪಿಸಲಾಗಿದೆ. ಕೊಪ್ಪಳದಲ್ಲಿ ಏಕಸ್ ಎಂಬ ದೈತ್ಯ ಕಂಪನಿ 400 ಎಕರೆಯಷ್ಟು ಬೃಹತ್ ಜಾಗದಲ್ಲಿ ಟಾಯ್ ಕ್ಲಸ್ಟರ್ ನಿರ್ಮಿಸಿದೆ. ಉತ್ತರಪ್ರದೇಶದಲ್ಲಿ 100 ಎಕರೆ ಜಾಗದಲ್ಲಿ ಕ್ಲಸ್ಟರ್ ನಿರ್ಮಾಣ ಕಾರ್ಯ ನಡೆಯುತ್ತಿದೆ. ವಿವಿಧ ರಾಜ್ಯಗಳು ಆಟಿಕೆ ತಯಾರಕರಿಗೆ ಸಬ್ಸಿಡಿ ಇತ್ಯಾದಿ ನೀಡಿ ಉತ್ತೇಜಿಸುತ್ತಿದೆ.

ಏಸ್ ಟರ್ಟಲ್ ಎಂಬ ಆಟಿಕೆ ತಯಾರಿಕೆ ಕಂಪನಿಯ ಸಿಇಒ ನಿತಿ ಛಬ್ರ ಅವರ ಪ್ರಕಾರ ಭಾರತದ ಆಂತರಿಕ ಆಟಿಕೆ ಬೇಡಿಕೆ ಪೂರೈಸುವಷ್ಟು ಸಾಮರ್ಥ್ಯವನ್ನು ಸ್ಥಳೀಯ ಉದ್ಯಮ ಗಳಿಸಬೇಕಾದರೆ ಎರಡು ವರ್ಷ ಬೇಕಾಗಬಹುದು.

ಹೊಸ ಆಟಿಕೆ ಸ್ಟಾರ್ಟಪ್ ಆದ ಜಾಂಬೋ ಎಂಬ ಕಂಪನಿಯ ಸಹ-ಸಂಸ್ಥಾಪಕ ವಿಪಿನ್ ನಿಝುವಾನ್ ಅವರು ಭಾರತದ ಆಟಿಕೆ ಉದ್ದಿಮೆ ಬಗ್ಗೆ ಆಶಾದಾಯಕವಾಗಿದ್ದಾರೆ. 2030ರಷ್ಟರಲ್ಲಿ ಭಾರತವನ್ನು ವಿಶ್ವದ ಆಟಿಕೆ ರಾಜಧಾನಿಯನ್ನಾಗಿ ಮಾಡಬೇಕು. ಬೆಲೆಯಲ್ಲಿ ಮತ್ತು ಗುಣಮಟ್ಟದಲ್ಲಿ ಚೀನಾವನ್ನು ಸರಿಗಟ್ಟಿ ಜಾಗತಿಕ ಆಟಿಕೆ ಮಾರುಕಟ್ಟೆಯಲ್ಲಿ ಮುಂಚೂಣಿಗೆ ಬರಲು ಸಮರ್ಥವನ್ನಾಗಿ ಮಾಡುವುದು ತಮ್ಮ ಗುರಿ ಎಂದು ವಿಪಿನ್ ಹೇಳುತ್ತಾರೆ.

## ಎಂದ

ಆಕೆಯ ಪತಿ ಹಾಗೂ ಬಾವ ಇಬ್ಬರೂ ಕೋಣೆಗೆ ಬಂದು ದುಪಟ್ಟಾದಿಂದ ಆಕೆಯನ್ನು ಕತ್ತು ಹಿಸುಕಿ ಕೊಲೆ ಮಾಡಲು ಯತ್ನಿಸಿದ್ದಾರೆ ಅಷ್ಟೇ ಅಲ್ಲದೆ ಘಟನೆಯನ್ನು ಮೊಬೈಲ್ ನಲ್ಲಿ ರೆಕಾರ್ಡ್ ಮಾಡಿದ್ದಾರೆ. ಮಹಿಳೆ ವಿಡಿಯೋವನ್ನು ಹಂಚಿಕೊಂಡ ನಂತರ ಮತ್ತು ಸಾಮಾಜಿಕ ಮಾಧ್ಯಮದಲ್ಲಿ ಲಿಖಿತ ದೂರಿನ ನಂತರ ಪೊಲೀಸರು ಘಟನೆಯನ್ನು ಗಮನಿಸಿದ್ದಾರೆ.

ಆರೋಪಿ ಪತಿ ಮತ್ತು ಬಾವನ ವಿರುದ್ಧ ಖತೌಲಿ ಕೊತ್ವಾಲಿ ಪೊಲೀಸ್ ಠಾಣೆಯಲ್ಲಿ ಭಾರತೀಯ ದಂಡ ಸಂಹಿತೆಯ (ಐಪಿಸಿ) 376 (ಅತ್ಯಾಚಾರ), 307 (ಕೊಲೆಗೆ ಯತ್ನ), ಮತ್ತು 328 ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಆರೋಪಿಗಳಿಬ್ಬರನ್ನೂ ಬಂಧಿಸುವ ಪ್ರಯತ್ನ ನಡೆಯುತ್ತಿದ್ದು, ಶೀಘ್ರವೇ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಪೊಲೀಸ್ ವರಿಷ್ಠಾಧಿಕಾರಿ ಸತ್ಯನಾರಾಯಣ ಪ್ರಜಾಪತಿ ತಿಳಿಸಿದ್ದಾರೆ.

## ಕದ್ದ ಬೈಕ್‌ಗಳನ್ನು ಮೆಜೆಸ್ಟಿಕ್‌ನಲ್ಲಿ ಪಾರ್ಕ್ ಮಾಡಿ ಪರಾರಿ



**ಬೆಂಗಳೂರು:** ಮೆಜೆಸ್ಟಿಕ್‌ನಲ್ಲಿ ಬೈಕ್ ಕಳ್ಳತನದ ಹಾವಳಿ ಹೆಚ್ಚಾಗಿದ್ದು, ಬೈಕ್ ಕಳ್ಳತನ ಮಾಡಿ ಬಸ್ ನಿಲ್ದಾಣದ ಪಕ್ಕದ ಪೇಪಾರ್ಕಿಂಗ್‌ನಲ್ಲಿ ಪಾರ್ಕ್ ಮಾಡಿ ಕಳ್ಳರು ಪರಾರಿಯಾಗುತ್ತಿರುವ ವಿಚಾರ ಬೆಳಕಿಗೆ ಬಂದಿದೆ.

ಪಾರ್ಕ್ ಮಾಡಿಐದಾರು ತಿಂಗಳಾದರೂ ಬೈಕ್ ಗಳನ್ನು ತೆಗೆದುಕೊಂಡು ಹೋಗದೇಇದ್ದಾಗಅನುಮಾನ ಮೂಡಿಅಲ್ಲಿನ ಸಿಬ್ಬಂದಿ ಸುಮಾರು 30 ಬೈಕ್‌ಗಳನ್ನು ಪೊಲೀಸರಿಗೆ ಒಪ್ಪಿಸಿದ್ದಾರೆ.

ಹಿಂದೆ ಬೈಕ್ ಕಳ್ಳತನ ಮಾಡಿದ ಬಳಿಕ ಕಳ್ಳರು ಬೈಕಿನ ಜೊತೆಯೇ ಪರಾರಿಯಾಗುತ್ತಿದ್ದರು.ಆದರೆ ಈಗ ಸಿಸಿಟಿವಿಗಳು ಎಲ್ಲೆಡೆಇರುವಕಾರಣ ಸುಲಭವಾಗಿ ಸಿಕ್ಕಿ ಬೀಳುತ್ತಿದ್ದಾರೆ. ಹೀಗಾಗಿ ಬಂಧನಗೊಳ್ಳುವ ಭಯದಲ್ಲಿ ಪಾರ್ಕಿಂಗ್‌ನಲ್ಲಿ ಕಳ್ಳರು ಬೈಕ್ ಪಾರ್ಕ್ ಮಾಡಿ ಹೋಗುತ್ತಿದ್ದಾರೆ.

ಈ ರೀತಿ ಪಾರ್ಕ್ ಮಾಡಿ ಹೋದವರುಆರು ತಿಂಗಳು ಕಳೆದರು ಮರಳಿ ಬರದೇಇರುವಕಾರಣ ಪಾರ್ಕಿಂಗ್ ಸಿಬ್ಬಂದಿ ಉಪ್ಪಾರಪೇಟೆ ಪೊಲೀಸ್‌ಠಾಣೆಗೆದೂರು ನೀಡಿದ್ದಾರೆ.ಅಲ್ಲದೇ ಕೆಲವು ಬೈಕ್‌ಗಳನ್ನು ಪೊಲೀಸರಿಗೆ ಒಪ್ಪಿಸಿದ್ದಾರೆ.

ಪಾರ್ಕಿಂಗ್ ಸಿಬ್ಬಂದಿ ಒಪ್ಪಿಸಿರುವ ಬೈಕ್‌ಗಳಲ್ಲಿ ಐದಕ್ಕೂ ಹೆಚ್ಚು ಬೈಕ್‌ಗಳು ಕಳ್ಳತನವಾಗಿದ್ದು ಎಂದು ತಿಳಿದು ಬಂದಿದೆ. ಅದರಲ್ಲಿ ಕೆಲವು ಬೈಕ್‌ಗಳನ್ನು ವಾರಸುದಾರರಿಗೆ ಪೊಲೀಸರು ಒಪ್ಪಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮ

**ಮೈಸೂರು:** ಶ್ರೀ ನಟರಾಜ ಪ್ರತಿಷ್ಠಾನದ ಆಶ್ರಯದಲ್ಲಿ ಸ್ನಾತಕೋತ್ತರ ಕೇಂದ್ರದ (ಎಂ.ಕಾಂ.) ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮದಲ್ಲಿ ಆದಾಯ ತೆರಿಗೆ ಸಲಹೆಗಾರರಾದ ಶ್ರೀ ಎಂ.ಸಿ.ಸುಂದರ್., ಖಜಿಆಣಡಿಭಿಜ ಕಜಡಿಂಟಿ, ಂಣಜಣಡಿ ಚಿಟಿಜ ಖಿಚಿಘ ಅಂಟಿಣಟಣಚಿಟಿಣ ಒಘಿಂಡಿಜ ರವರು ಮಾತನಾಡುತ್ತಾ ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಪ್ರಾಮಾಣಿಕವಾದ ತೆರಿಗೆ ಸಂದಾಯ ಅತಿ ಮುಖ್ಯವಾದುದು. ಯಾರು ಕಾನೂನನ್ನು ಮಾಡುತ್ತಾರೆಯೋ ಹಾಗೂ ಜಾರಿಗೊಳಿಸುತ್ತಾರೆಯೋ ಅಂತಹವರಲ್ಲಿ ಕೆಲವರು ಕಾನೂನನ್ನು ಮುರಿಯುತ್ತಾರೆ.

ಆದಾಯ ತೆರಿಗೆ ಎಂಬುದು ಪಿಡುಗಲ್ಲ. ಅದು ದೇಶದ ಅಭಿವೃದ್ಧಿಗೆ ಪೂರಕವಾದುದ್ದು. ಆದ್ದರಿಂದ ಪ್ರತಿಯೊಬ್ಬರು ಪ್ರಾಮಾಣಿಕವಾಗಿ ಇದು ಮೂಲಭೂತ ಕರ್ತವ್ಯ ಎಂದು ತೆರಿಗೆ ಪಾವತಿಸಬೇಕು. ಕಾರ್ಯಾಂಗ, ನ್ಯಾಯಾಂಗ, ಶಾಸಕಾಂಗದಂತೆಯೇ ಮಾಧ್ಯಮಾವೂ ಒಂದಾಗಿದೆ. ಆದ್ದರಿಂದ ಮಾಧ್ಯಮದವರು ತೆರಿಗೆಯ ಮಹತ್ವವನ್ನು ಜನಸಾಮಾನ್ಯರಿಗೆ ತಿಳಿಸುವ ದಿಕ್ಕಿನಲ್ಲಿ ಸಕ್ರಿಯರಾಗಬೇಕಾಗಿದೆ. ಆಯಾಕಾಲಕ್ಕೆ ಬದಲಾಗುವ ತೆರಿಗೆಯ ನಿಯಮವನ್ನು ಅರ್ಥೈಸಿಕೊಂಡು ತೆರಿಗೆ ಪಾವತಿದಾರರಿಗೆ ಅರಿವು ಮೂಡಿಸಬೇಕೆಂದು ಕರೆ ಕೊಟ್ಟರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪ್ರೊ. ಎಸ್. ಶಿವರಾಜಪ್ಪ, ವಿಶೇಷಾಧಿಕಾರಿಗಳು, ಶ್ರೀ ನಟರಾಜ ಪ್ರತಿಷ್ಠಾನ, ಮೈಸೂರು. ಇವರು ಮಾತನಾಡುತ್ತಾ ತೆರಿಗೆ ಪಾವತಿಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಬೇಕು. ಆಯಾಕಾಲಕ್ಕೆ ಬದಲಾಗುವ ತೆರಿಗೆಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರಕ್ಕೆ ಪಾವತಿಸಿದರೆ ಭವ್ಯ ಭಾರತ ನಿರ್ಮಾಣವಾಗುವುದರಲ್ಲಿ ಯಾವುದೇ ಸಂಶಯವಿಲ್ಲ.ಎಂ.ಕಾಂ.ಮತ್ತು ಬಿ.ಕಾಂ.ವಿದ್ಯಾರ್ಥಿಗಳು ಇದನ್ನೂ ತಲಸ್ಪರ್ಶಿಯಾಗಿ ಅಧ್ಯಯನ ಮಾಡಬೇಕು. ಪ್ರತಿಭೆ ನಿಂತ ನೀರಲ್ಲ. ಅದು ಯಾವಾಗಲೂ ಚಲನರೇವುವಾಗಿರಬೇಕು. ಇದೇ ರೀತಿ ವಿದ್ಯಾರ್ಥಿಗಳು ಸದರಿ ಕ್ರಿಯಾಶೀಲರಾಗಿ ಸುಂದರ ಬದುಕನ್ನು ರೂಪಿಸಿಕೊಳ್ಳಬೇಕೆಂದು ತಿಳಿಸಿದರು.

ವೇದಿಕೆಯಲ್ಲಿ ಉಪಸ್ಥಿತರಿದ್ದ ಪ್ರಾಂಶುಪಾಲರಾದ ಡಾ. ಶಾರದ ಎಂ. ಮಾತನಾಡಿ ವಿದ್ಯಾರ್ಥಿಗಳು ವಿದ್ಯಾರ್ಥಿದಿಶೆಯಲ್ಲಿ ಶಿಸ್ತು, ಸಂಯಮವನ್ನು ರೂಢಿಸಿಕೊಂಡು ಅಧ್ಯಯನಶೀಲರಾಗ ಬೇಕು ಎಂದು ಕಿವಿ ಮಾತು ಹೇಳಿದ್ದರು.

ಕಾರ್ಯಕ್ರಮದಲ್ಲಿ ಕು. ಪೃಥ್ವಿ ಸ್ವಾಗತಿಸಿದರು, ಅಭಿಷೇಕ್ ಪ್ರಾರ್ಥಿಸಿದರೆ ಕು. ನಿಶಾ ಸರ್ವರನ್ನು ವಂದಿಸಿ ವಿಶೇಷ ಉಪನ್ಯಾಸದಲ್ಲಿ ಎಲ್ಲಾ ಅಧ್ಯಾಪಕರು ಮತ್ತು ಅಧ್ಯಾಪಕೇತರರು ಭಾಗವಹಿಸಿದರು.



## ಕೆ ಎಮ್ ಪಿ ಕೆ ಟ್ರಸ್ಟ್ ವಿವಿಧೆಡೆ ಪಕ್ಷಿಗಳಿಗೆ ನೀರಿನ ವ್ಯವಸ್ಥೆ

**ಮೈಸೂರು:** ನಗರದ ಲಕ್ಷ್ಮಿಪುರಂನಲ್ಲಿರುವ ಮರಗಳಿಗೆ ಕೆ ಎಂ ಪಿ ಕೆ ಟ್ರಸ್ಟ್ ಹಾಗೂ ಅರಿವು ಸಂಸ್ಥೆ ವತಿಯಿಂದ ಬೇಸಿಗೆ ತಾಪಮಾನ ಹೆಚ್ಚಳ ಹಿನ್ನೆಲೆಯಲ್ಲಿ 30ರಿಂದ 40ಕ್ಕೂ ಹೆಚ್ಚು ಕಡೆಗಳಲ್ಲಿ ಪಕ್ಷಿಗಳ ನೀರಿನ ಸಂಗ್ರಹ ಹಾಗೂ ನೀರಿನ ಅರವಟ್ಟಿಗೆ ಉದ್ಘಾಟಿಸಲಾಯಿತು. ಕೆ ಎಂ ಪಿ ಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್ ಮಾತನಾಡಿ, ಈಗಾಗಲೇ ನಿರಂತರವಾಗಿ ಎರಡು ತಿಂಗಳಿಂದ ನಾನಾ ಪ್ರದೇಶಗಳಲ್ಲಿ ನೀರಿನ ಬೌಲನ್ನು ಇಡಲಾಯಿತು, ಮನುಷ್ಯನಿಗೆ ಹೇಗೆ ದಿನನಿತ್ಯದ ಬದುಕಿನಲ್ಲಿ ಆಹಾರ, ನೀರು, ಗಾಳಿ ಬೇಕೇ ಬೇಕು ಅದೇ ರೀತಿ ಪ್ರಾಣಿ ಪಕ್ಷಿಗಳಿಗೂ ಕೂಡ ಬೇಕು ಅದಕ್ಕಾಗಿ ಮನುಷ್ಯರಾದ ನಾವುಗಳು ಅದನ್ನರಿತು ಇಂತಹ ಬಿರು ಬಿಸಿಲಿನಲ್ಲಿ ಮನುಷ್ಯರೇ ಜೀವನ ಮಾಡುವುದು ಕಷ್ಟ ಇಂತಹ ಸಂದರ್ಭದಲ್ಲಿ ಪಕ್ಷಿಗಳು ಹೇಗೆ ಬದುಕಬೇಕು ಹಾಗಾಗಿ ಪಕ್ಷಿಗಳು ನೀರು ಕುಡಿಯಲು ಪ್ಲಾಸ್ಟಿಕ್ ಬೌಲ್ ಗಳಲ್ಲಿ ನೀರನ್ನಾಕಿ ಗಿಡ ಮರಗಳಿಗೆ ಅಲ್ಲಲ್ಲಿ ಹಗ್ಗದಿಂದ ನೇತಾಕಿದರು, ಅವುಗಳನ್ನು ನೋಡಿದ ಪಕ್ಷಿಗಳು ಆದರ ಮೇಲೆ ಕುಳಿತುಕೊಂಡು ನೀರನ್ನು ಕುಡಿದು ತನ್ನ ದಾಹವನ್ನು ತೀರಿಸಿಕೊಳ್ಳುಲು ಸಹಾಯವಾಗುತ್ತದೆ ಎಂದರು. ಇದೇ ಸಂದರ್ಭದಲ್ಲಿ ಕೆ ಎಂ ಪಿ ಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ಕೆ ಆರ್ ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಗಿರೀಶ್ ರಾಮ್ ಮೂರ್ತಿ, ಎಸ್ ಎನ್ ರಾಜೇಶ್, ಶ್ರೀಕಾಂತ್ ಕಶ್ಯಪ್, ಬೈರತಿ ಲಿಂಗರಾಜು, ಚಕ್ರಪಾಣಿ, ಮಹೇಶ್ ಕುಮಾರ್, ಭಂಡಾರಿ, ದಯಾನಂದ್ ಹಾಜರಿದ್ದರು



## ರಂಗಭೂಮಿ ಕಲೆ ಉಳಿಸುವುದು ಎಲ್ಲರ ಕರ್ತವ್ಯ

**ಮೈಸೂರು:** ಇಂದು ಆಲನಹಳ್ಳಿ ಬಡಾವಣೆಯ ವಿನಾಯಕನ ದೇವಸ್ಥಾನದಲ್ಲಿ ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ (ರಿ) ಕರ್ನಾಟಕ ಮೈಸೂರು ಎನ್ ಆರ್ ವಲಯದ ವತಿಯಿಂದ ನಡೆಯುತ್ತಿದ್ದ ಮಕ್ಕಳ ಬೇಸಿಗೆ ಶಿಬಿರದಲ್ಲಿ ,ವೀರಶೈವ ಸಮಾನ ಮನಸ್ಕರ ಸ್ನೇಹ ಬಳಗ ಕುದೇರು ಮಠ ಮೈಸೂರು ಇವರ ವತಿಯಿಂದ ರಂಗಭೂಮಿ ಮಹತ್ವ, ಹಾಡುಗಾರಿಕೆ, ಅಭಿನಯ, ವಿಷಯ ಕುರಿತು,ರಂಗಭೂಮಿ ನಿರ್ದೇಶಕರಾದ ಬೀರಿಹುಂಡಿ ಗೋವಿಂದರಾಜು ರಂಗಭೂಮಿಯ ಹಿರಿಯ ಕಲಾವಿದರುಗಳಾದ ಚಿಕ್ಕಹಳ್ಳಿ ಪುಟ್ಟಣ್ಣ , ನಿವೃತ್ತ ಡಿಓಎಸ್ಪಿ ಶಿವಬಸಪ್ಪ, ಕೆರೆಹಳ್ಳಿ ದೊರೆಸ್ವಾಮಿ, ರವರ ಸಾರಥ್ಯದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ರಂಗಭೂಮಿ ನಿರ್ದೇಶಕರಾದ ಬೀರಿಹುಂಡಿ ಗೋವಿಂದರಾಜುರವರು ಇವತ್ತಿನ ಕಾಲದಲ್ಲಿ ಚಲನಚಿತ್ರಕ್ಕೂ ಸಹ ಯುವ ಸಮೂಹ ವೀಕ್ಷಣೆ ಮಾಡುವುದು ಗಣನೀಯವಾಗಿದೆ ಅದರಲ್ಲೂ ರಂಗಭೂಮಿ ಕಲೆ ನಶಿಸಿ ಹೋಗುತ್ತಿರುವ ಸಂದರ್ಭದಲ್ಲಿ ದೊರೆಸ್ವಾಮಿ ರವರು ಮಕ್ಕಳಿಗೆ ಇದರ ಬಗ್ಗೆ ಅರಿವು ಹಾಗೆ ಅನೇಕ ದಿಗ್ಗಜ ಚಲನಚಿತ್ರ ನಟರು ರಂಗಭೂಮಿ ಕಲೆಯಿಂದ ಆಧಾರ್ಪಣೆ ಮಾಡಿರುವುದರ ಬಗ್ಗೆ ಅರಿವು ಮೂಡಿಸಿ ಹಾಗೂ ಹಾಡುಗಳನ್ನು ಮಕ್ಕಳೊಂದಿಗೆ ಹಾಡಿ ಮಕ್ಕಳಿಗೂ ಸಹ ಅಭ್ಯಾಸ ಮಾಡಲಾಯಿತು. ನಂತರ ಮಾತನಾಡಿದ ಹಿರಿಯ ರಂಗಭೂಮಿ ಕಲಾವಿದರಾದ ಕೆರೆಹಳ್ಳಿ ಬಿ ದೊರೆಸ್ವಾಮಿ ರವರು ಕಲೆ ಎಲ್ಲರನ್ನೂ ಕೈ ಬಿಸಿ ಕರಿಯುತ್ತದೆ ಆದರೆ ಕೆಲವರನ್ನ ಮಾತ್ರ ಆಯ್ಕೆ ಮಾಡುತ್ತದೆ ಈ ಕಲೆ ಅಳವಡಿಸಿಕೊಂಡರೆ ಯಾವುದೇ ದುಶ್ಚಟಕ್ಕೆ ಬಲಿಯಾಗದೆ, ಒಳ್ಳೆಯ ಮಾರ್ಗದಲ್ಲಿ ನಡೆಯಬಹುದು ಆದ್ದರಿಂದ ಈ ಶಿಬಿರವನ್ನು ಮಕ್ಕಳು ಈಗ ಬೇಸಿಗೆ ರಜೆಯಲ್ಲಿ ಇರುವುದರಿಂದ ರಂಗಭೂಮಿ ಕಲೆ ಹಾಡುಗಾರಿಕೆ ಅಭಿನಯ ವಾಕ್ ಚಾತುರ್ಯ ಹಾಗೂ ಶ್ರದ್ಧೆ ಆಸಕ್ತಿ ಹೇಗಿರಬೇಕು ಎಂಬುದರ ಅರಿವು ಮಕ್ಕಳಿಗೆ ಮೂಡಿಸಿ ಮುಂದಿನ ಪೀಳಿಗೆಗೆ ರಂಗಭೂಮಿ ಕಲೆ ಉಳಿಸಬೇಕು ಬೆಳೆಸಬೇಕು ಎಂಬ ನಿಟ್ಟಿನಲ್ಲಿ ಈ ಶಿಬಿರ ಆಯೋಜನೆ ಮಾಡಿದ್ದೇವೆ ಎಂದು ತಿಳಿಸಿದರು.

ಸಕಹಳ್ಳಿ ಮಹದೇವಸ್ವಾಮಿ ಹೊಸಕೋಟೆ ನಂದೀಶ್, , ಕೆರೆಹಳ್ಳಿ ಲೋಹಿತ್, ಬಾಗಳಿ ಮಹೇಶ್ ,ಹೊಸಕೋಟೆ ಪ್ರಭುಸ್ವಾಮಿ, ಹೊಸಕೋಟೆ ಸುಂದ್ರಪ್ಪ ಮುಂತಾದ ರಂಗಭೂಮಿ ಕಲಾವಿದರು ಭಾಗವಹಿಸಿ, ಪೌರಾಣಿಕ ನಾಟಕಗಳ ಮಹತ್ವವನ್ನು ತಿಳಿಸಿ ಮತ್ತು ಅನೇಕ ರಂಗಗೀತೆಗಳನ್ನು ಹಾಡಿ ಶಿಬಿರಾರ್ಥಿಗಳನ್ನು ಮನರಂಜಿಸಲಾಯಿತು. ಈ ಸಂದರ್ಭದಲ್ಲಿ ಹಿರಿಯ ಯೋಗ ಬಂಧು ವಿಠಲ್ ರಾಜಣ್ಣ ಸಂತೋಷ್ ಅಣ್ಣ ಹನುಮಂತ್ ಮುಂತಾದವರು ಉಪಸ್ಥಿತಿಯಲ್ಲಿದ್ದರು.



### ಹಿರಿಯ ಸಾಹಿತಿ ಬನ್ನೂರು ರಾಜು ಅಭಿಮತ

## ಡಾ.ರಾಜ್‌ಗೆ ಆಸ್ಕರ್ ಬರಬೇಕಿತ್ತು

**ಮೈಸೂರು:** ಪ್ರಪಂಚದ ಎಂಥಾ ಅದ್ಭುತ ನಟರ ಸಾಲಿನಲ್ಲಿ ಬೇಕಾದರೂ ನಿಲ್ಲಬಲ್ಲ, ನಿಂತು ಅವರನ್ನೆಲ್ಲಾ ಮೀರಿಸಬಲ್ಲ ಮಹದದ್ಭುತ ಪ್ರಚಂಡ ಪ್ರತಿಭಾ ಶಕ್ತಿಯಿದ್ದ ನಮ್ಮ ಕನ್ನಡದ ಅಣ್ಣ ಜಗದ್ವಿಖ್ಯಾತ ಮೇರುನಟ ಡಾ. ರಾಜ್ ಕುಮಾರ್ ಅವರಿಗೆ ವಿಶ್ವ ಚಿತ್ರರಂಗದ ಅತ್ಯುನ್ನತ ಗೌರವ ಪುರಸ್ಕಾರವಾದ ಜಾಗತಿಕ ಮನ್ನಣೆಯ ಪ್ರತಿಷ್ಠಿತ ಆಸ್ಕರ್ ಪ್ರಶಸ್ತಿ ಬರಬೇಕಿತ್ತೆಂದು ಪತ್ರಕರ್ತರೂ ಆದ ಸಾಹಿತಿ ಬನ್ನೂರು ಕೆ. ರಾಜು ಅಭಿಪ್ರಾಯಪಟ್ಟರು.

ನಗರದ ಕೃಷ್ಣಮೂರ್ತಿಪುರಂನ ನಮನ ಕಲಾ ಮಂಟಪದಲ್ಲಿ ಶ್ರೀಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದ ವತಿಯಿಂದ ನಡೆದ ಕರ್ನಾಟಕ ರತ್ನ, ಪದ್ಮಭೂಷಣ, ವರನಟ ಡಾ. ರಾಜ್ ಕುಮಾರ್ ಅವರ 95 ನೇ ಜನ್ಮದಿನೋತ್ಸವ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಳ್ಳಿಗಮಾರ, ಹುಚ್ಚ, ಬೆಪ್ಪ, ರೈತ, ಕಾರ್ಮಿಕ, ವೈದ್ಯ, ಕಳ್ಳ, ಪೊಲೀಸ್, ಪೆದ್ದ, ವಿಜ್ಞಾನಿ, ಸಂತ, ಭಗವಂತ, ಮಹಾಂತ, ಯೋಧ, ಜೇಮ್ಸ್ ಬಾಂಡ್ ಹೀಗೆ ಚಮ್ಮಾರನಿಂದ ಹಿಡಿದು ಚಕ್ರವರ್ತಿಯವರೆಗೆ ಬೆಳ್ಳಿ ತೆರೆಯಲ್ಲಿ ರಾಜ್ ಕುಮಾರ್ ಅವರಷ್ಟು ವೈವಿಧ್ಯಮಯ ಪಾತ್ರಗಳನ್ನು ಮಾಡಿದ ನಟ ಜಗತ್ತಿನಲ್ಲಿ ಮತ್ತೊಬ್ಬ ಸಿಗಲಾರರೆಂದರು.

ಮೂಲತಃ ವೃತ್ತಿರಂಗ ಭೂಮಿ ಮೂಲಕ ಚಿತ್ರರಂಗಕ್ಕೆ ಬಂದ ರಾಜ್ ಕುಮಾರ್ ರವರು ಉಭಯ ಕ್ಷೇತ್ರಗಳಲ್ಲೂ ಚಿರಸ್ಥಾಯಿಯಾಗುಳಿಯುವ ಅಮೋಘ ಅಭಿನಯನೀಡಿಕಲಾರಸಿಕರೆದೆಯಲ್ಲಿಶಾಶ್ವತವಾಗಿ ನಿಂತವರು. ರಂಗಭೂಮಿಯೂ ಸೇರಿದಂತೆ ಅಭಿನಯ ಜಗತ್ತಿನಲ್ಲಿ ವರನಟ ಡಾ.ರಾಜ್ ಕುಮಾರ್ ಸಾಧನೆ ಚಾರಿತ್ರಿಕವಾದದ್ದು. ಪೌರಾಣಿಕ, ಐತಿಹಾಸಿಕ, ಸಾಮಾಜಿಕ, ಜಾನಪದ, ಬಾಂಡ್ ಶೈಲಿಯ ಪತ್ತೇದಾರಿ ಚಿತ್ರಗಳು ಒಳಗೊಂಡಂತೆ 'ಬೇಡರ ಕಣ್ಣಪ್ಪ' ಚಿತ್ರದಿಂದ ಆರಂಭಿಸಿ ಶಬ್ದವೇಧಿ ತನಕ ಸುಮಾರು ಇನ್ನೂರೆಂಟು ಚಲನ ಚಿತ್ರಗಳಲ್ಲಿ ನಟಿಸಿ ದಾಖಲೆ ನಿರ್ಮಿಸಿರುವ



ಡಾ. ರಾಜಕುಮಾರ್ ಅವರ ಪ್ರತಿಯೊಂದು ಸಿನಿಮಾಗಳೂ ಸಮಾಜಕ್ಕೆ ಒಂದೊಂದು ಜೀವನ ಸಂದೇಶ ನೀಡುವ ಜನೋಪಯೋಗಿ ಚಿತ್ರಗಳೇ ಆಗಿವೆ. ಕಾಯಕದ ಮಹತ್ವ ಸಾರುವ 'ಬಂಗಾರದ ಮನುಷ್ಯ', ಕುಡಿತದ ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸುವ 'ಜೀವನ ಚೈತ್ರ' ಮುಂತಾದ ಸಿನಿಮಾಗಳು ಡಾ.ರಾಜ್ ನಟನೆಯಲ್ಲಿ ತೆರೆಗೆ ಬಂದ ಮೇಲಂತೂ ನಮ್ಮ ಸಮಾಜದಲ್ಲಿ ಅನೇಕ ಬದಲಾವಣೆಗಳಾಗಿವೆ. ಜನಪರ ಕಾಳಜಿಯುಳ್ಳ ಒಬ್ಬ ಶ್ರೇಷ್ಠ ನಟ ತಮ್ಮ ನಟನೆಯ ಚಲನ ಚಿತ್ರಗಳಿಂದ ಸಮಾಜವನ್ನು ಪರಿವರ್ತನೆ ಮಾಡಬಲ್ಲ ಎಂಬುದಕ್ಕೆ ರಾಜ್ ಕುಮಾರ್ ರವರು ಕಣ್ಣ ಮುಂದಿನ ಸಾಕ್ಷಿ ಗಲ್ಲಿನಂತಿದ್ದರೆಂದು ಹೇಳಿದ ಬನ್ನೂರು ರಾಜು ಅವರು, ರಾಜ್ ಕುಮಾರ್ ರವರು ತಮ್ಮ ನಟನೆ ಮತ್ತು ಬದುಕಿನ ರೀತಿಯಿಂದ ಎಲ್ಲರಿಗೂ ಮಾದರಿಯಾಗಿದ್ದರೆಂದು ತಿಳಿಸಿದರು.

ಇದಕ್ಕೂ ಮುನ್ನ ಸಂಸ್ಕೃತಿ ಚಿಂತಕ ಡಾ.ಕೆ. ರಘು ರಾಮ್ ವಾಜಪೇಯಿ ಅವರು ಡಾ.ರಾಜ್ ಕುಮಾರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ನಮ್ಮ ಕರ್ನಾಟಕ ರತ್ನ ಡಾ.ರಾಜ್ ಕುಮಾರ್ ಅವರ ಕಲಾಸೇವೆಗೆ ಎಂದೋ ಭಾರತ ರತ್ನ ಪ್ರಶಸ್ತಿ ಬರಬೇಕಿತ್ತು. ಆದರೆ ಅವರು ಬದುಕಿದ್ದಾಗಲಂತೂ ಬರಲಿಲ್ಲ. ಹಾಗಾಗಿ ಈಗಲಾದರೂ ನಮ್ಮ ಕೇಂದ್ರ ಸರ್ಕಾರ ಮರಣೋತ್ತರ ವಾಗಿ ಡಾ.ರಾಜ್ ಕುಮಾರ್ ಅವರಿಗೆ ಭಾರತರತ್ನ ಪ್ರಶಸ್ತಿ ನೀಡಬೇಕೆಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.

ಇದೇ ಸಂದರ್ಭದಲ್ಲಿ ಖ್ಯಾತ ರಂಗಕರ್ಮಿ ರಾಜಶೇಖರ ಕದಂಬ ಅವರನ್ನು ಅಭಿನಂದಿಸಿ ಸನ್ಮಾನಿಸಲಾಯಿತು. ಶ್ರೀಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದ ಸಂಸ್ಥಾಪಕ ಅಧ್ಯಕ್ಷ ಬಸವ ರಾಜೇಂದ್ರಸ್ವಾಮಿ ಅವರು ಪ್ರಾರಂಭದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿ ಎಲ್ಲರನ್ನೂ ಆತ್ಮೀಯವಾಗಿ ಸ್ವಾಗತಿಸಿದರು. ಮೈಸೂರು ಜಿಲ್ಲಾ ಚಿನ್ನ ಬೆಳ್ಳಿ ಕೆಲಸಗಾರರ ಅಭಿವೃದ್ಧಿ ಸಂಘದ ಅಧ್ಯಕ್ಷ ಲಯನ್ ಟಿ. ಸುರೇಶ್ ಹಾಗೂ ಪದ್ಮಶ್ರೀ ಜೈನ ಮಹಿಳಾ ಸಮಾಜದ ಅಧ್ಯಕ್ಷೆ ಲತಾ ಸುದರ್ಶನ್ ಅವರು ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮ ಕುರಿತು ಮಾತನಾಡಿದರು. ಅನೇಕ ಮಂದಿ ಡಾ.ರಾಜ್ ಕುಮಾರ್ ಅಭಿಮಾನಿಗಳು ಭಾಗವಹಿಸಿದ್ದರಲ್ಲದೆ ಎಲ್ಲರೂ ರಾಜಕುಮಾರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

## ಸುನೀಲ್‌ಬೋಸ್ ಗೆಲುವು ಶತಸಿದ್ಧ : ಬಿ.ಪ್ರಸನ್ನಕುಮಾರ್

**ಚಾಮರಾಜನಗರ:** ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳ ಅನುಕೂಲದಿಂದ ಈ ಬಾರಿ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸುನೀಲ್‌ಬೋಸ್ ಅತ್ಯಧಿಕ ಮತಗಳಲ್ಲಿ ಗೆಲವು ಸಾಧಿಸುವುದು ಶತಸಿದ್ಧ ಎಂದು ಕಾಂಗ್ರೆಸ್ ಬೆಂಬಲಿತ ಕರ್ನಾಟಕ ಪ್ರಜಾ ಪಾರ್ಟಿ (ರೈತಪರ್ವ) ಅಭ್ಯರ್ಥಿ ಬಿ.ಪ್ರಸನ್ನಕುಮಾರ್ ಹೇಳಿದರು. ನಗರದ ಗಾಳೀಪುರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮತಗಟ್ಟೆ ಸಂಖ್ಯೆ 90ರಲ್ಲಿ ತಂದೆ ಬೆಳ್ಳಯ್ಯ, ಪತ್ನಿ ಮಹೇಶ್ವರಿ ಅವರೊಂದಿಗೆ ತೆರಳಿ ಮತದಾನ ಮಾಡಿ ಮಾತನಾಡಿದರು. ಸಂವಿಧಾನ, ಪ್ರಜಾಪ್ರಭುತ್ವ ರಕ್ಷಣೆ ಮಾಡುವಲ್ಲಿ ಕಾಂಗ್ರೆಸ್ ಪಕ್ಷದ ಪಾತ್ರ ಅಪಾರವಾಗಿದೆ. ಈ ಚುನಾವಣೆ ಸಂವಿಧಾನ ಅಳಿವು, ಉಳಿವಿನ ಪ್ರಶ್ನೆಯಾಗಿದ್ದು ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಪರ ಉತ್ತಮ ವಾತಾವರಣವಿದ್ದು, ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳ ಅನುಕೂಲದಿಂದ ಮತದಾರರು ಈ ಬಾರಿ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಸುತ್ತಿದ್ದು, ಸುನೀಲ್ ಬೋಸ್ ಅವರು ಅತ್ಯಧಿಕ ಮತಗಳ ಅಂತರದಿಂದ ಗೆಲುವು ಸಾಧಿಸಿಸುವುದು ಶತಸಿದ್ದವಾಗಿದೆ ಎಂದರು.



## ಮೋದಿ ಅಲೆಯಿಂದ ಬಿಜೆಪಿಗೆ ಬಹುಮತ : ಎಂ.ರಾಮಚಂದ್ರ

**ಚಾಮರಾಜನಗರ:** ಪ್ರಧಾನಮಂತ್ರಿ, ನರೇಂದ್ರ ಮೋದಿಯವರ ಅಲೆಯಿಂದ ಚಾಮರಾಜನಗರ ಲೋಕಸಭಾ ಮೀಸಲು ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜು ಬಹುಮತದಿಂದ ಗೆಲುವು ಸಾಧಿಸಲಿದ್ದಾರೆ ಎಂದು ಕೇಂದ್ರ ಪರಿಹಾರ ಸಮಿತಿ ಮಾಜಿ ಎಂ.ರಾಮಚಂದ್ರ ವಿಶ್ವಾಸವ್ಯಕ್ತಪಡಿಸಿದರು. ನಗರದ ರಾಮಸಮುದ್ರ ಬಡಾವಣೆಯಲ್ಲಿರುವ ಸರ್ಕಾರಿ ಬಾಲಕರ ಹಿರಿಯ ಪ್ರಾಥಮಿಕ ಶಾಲೆಯ ಮತಗಟ್ಟೆ ಸಂಖ್ಯೆ 82 ರಲ್ಲಿ ಮತದಾನ ಮಾಡಿದ ನಂತರ ಮಾತನಾಡಿ, ಈ ಚುನಾವಣೆ ದೇಶ ಚುನಾವಣೆಯಾಗಿರುವುದರಿಂದ ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳು ಯಾವುದೇ ಪರಿಣಾಮಬೀರಲ್ಲ. ಮೋದಿಯವರ ಅಲೆವಿದ್ದು ಮತಗಟ್ಟೆಗಳೇ ಜನತೆ ಉತ್ಸುಕರಾಗಿ ತೆರಳಿ ಬಿಜೆಪಿಗೆ ಮತ ಹಾಕುತ್ತಿರುವುದು ತಿಳಿದುಬಂದಿದ್ದು ಕ್ಷೇತ್ರದಲ್ಲಿ ಬಿಜೆಪಿ ಹೆಚ್ಚಿನ ಮತಗಳ ಅಂತದಲ್ಲಿ ಗೆಲುವು ಸಾಧಿಸಲಿದೆ ಎಂದರು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಆರ್ .ವಿ.ಮಹದೇವಸ್ವಾಮಿ, ಪುಟ್ಟಮಲ್ಲಪ್ಪ, ಲಿಂಗರಾಜು, ಬಂಗಾರಸ್ವಾಮಿ, ಕುಮಾರ್ ಇತರರು ಹಾಜರದ್ದರು.



## ಕಾಂಗ್ರೆಸ್‌ಗೆ ಗೆಲುವು ನಿಶ್ಚಿತ: ಡಾ.ಬಿಜೆವಿ



**ಮೈಸೂರು:** ಮೈಸೂರು-ಕೊಡಗು, ಚಾಮರಾಜನಗರ ಲೋಕಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸುವುದು ನಿಶ್ಚಿತ ಎಂದು ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ಹೇಳಿದರು.

ಶುಕ್ರವಾರ ನಡೆದ ಮತದಾನದಲ್ಲಿ ಆಗಿರುವ ಪೂರಕ ವಾತಾವರಣ ನಮಗೆ ಬಂದಿರುವ ಮಾಹಿತಿ ಹಾಗೂ ನಾನೇ ಖುದ್ದು ಪಿರಿಯಾಪಟ್ಟಣ, ಹುಣಸೂರು, ಚಾಮುಂಡೇಶ್ವರಿ, ಮೈಸೂರು ನಗರ ಪ್ರದೇಶ, ವರುಣ ವಿಧಾನಸಭೆ ಹಾಗೂ ನಂಜನಗೂಡು ವಿಧಾನಸಭಾ ಕ್ಷೇತ್ರದ ಕೆಲವು ಮತಗಟ್ಟೆಗಳಿಗೆ ಖುದ್ದು ಭೇಟಿ ಮಾಡಿ ಬೆಳಿಗ್ಗೆ 8 ರಿಂದ ಸಂಜೆ 6 ರವರೆಗೆ ಮತದಾರರನ್ನು ಭೇಟಿ ಮಾಡಿ ಕಾಂಗ್ರೆಸ್ ಅಭ್ಯರ್ಥಿಗಳ ಪರ ಮತ ಚಲಾಯಿಸಲು ವಿನಂತಿಸಲಾಯಿತು. ಮತದಾರರು ಕಾಂಗ್ರೆಸ್ ಪರವಾಗಿ ಒಲವು ತೋರಿರುವುದರಿಂದ ಗೆಲುವು ಸಾಧಿಸಿರುವ ನಂಬಿಕೆ ಇದೆ. ಮುಖ್ಯಮಂತ್ರಿ ಸಿದ್ದರಾಮಯ್ಯ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಆಡಳಿತ, ಪಂಚ ಗ್ಯಾರಂಟಿ ಯೋಜನೆಗಳ ಜಾರಿ, ಕೇಂದ್ರದ ಪ್ರಧಾನಿ ನರೇಂದ್ರಮೋದಿ ನೇತೃತ್ವದ ಜನವಿರೋಧಿ ಆಡಳಿತ, ಸಂವಿಧಾನ ಆಡಳಿತದ ವಿರೋಧಿ ಅಲೆಯಿಂದಾಗಿ ಮತದಾರರು ಕಾಂಗ್ರೆಸ್ ಪರವಾಗಿ ನಿಂತಿದ್ದಾರೆಂದರು. ವಿಶೇಷವಾಗಿ ಕರ್ನಾಟಕದಲ್ಲಿ ಮಹಿಳಾ ಮತದಾರರು ಕಾಂಗ್ರೆಸ್ಸಿನ ಎಲ್ಲಾ ಲೋಕಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷ ಅತಿ ಹೆಚ್ಚು ಮುನ್ನಡೆ ಸಾಧಿಸಲಿದ್ದಾರೆ. ಇಂತಹ ರಾಷ್ಟ್ರೀಯ ಯೋಜನೆಗಳು ಕಾಂಗ್ರೆಸ್ ಪಕ್ಷದ ನಂಬಿಕೆಯನ್ನು ಹಿಮ್ಮಡಿ ಗೊಳಿಸಿದೆ ಎಂದು ಹೇಳಿದರು. ಇಲವಾಲ ಗ್ರಾಮದಲ್ಲಿ ಜಿಪಂ ಮಾಜಿ ಸದಸ್ಯ ಅರುಣ್ ಕುಮಾರ್ ಸೇರಿ ಅನೇಕರು ಉಪಸ್ಥಿತರಿದ್ದರು.

## ಮದ್ದದಂಗಡಿ ಮುಚ್ಚಿಸಲು ಆಗ್ರಹಿಸಿ ಪ್ರತಿಭಟನೆ ಮತದಾನ ಬಹಿಷ್ಕಾರ

**ಕೋಲಾರ:** ತಾಲ್ಲೂಕಿನ ಬೆಗ್ಲಿಬೆಣಜೇನಹಳ್ಳಿ ಗ್ರಾಮದಲ್ಲಿರುವ ಎಂಎಸ್ಐಎಲ್ ಮದ್ಯದಂಗಡಿಯನ್ನು ಮುಚ್ಚಿಸುವಂತೆ ಆಗ್ರಹಿಸಿ ಗ್ರಾಮಸ್ಥರು ಮತದಾನ ಬಹಿಷ್ಕರಿಸಿ ಪ್ರತಿಭಟನೆ ನಡೆಸಿದರು.

ಗ್ರಾಮದ ಪ್ರವೇಶ ದ್ವಾರದಲ್ಲೇ ಮದ್ಯದಂಗಡಿ ನಿರ್ಮಿಸಿದ್ದು, ಊರಿನ ಯುವಕರು ಕುಡಿದು ಬರುತ್ತಾರೆ. ವಿದ್ಯಾರ್ಥಿಗಳು, ಮಹಿಳೆಯರು ಆ ರಸ್ತೆಯಲ್ಲಿ ಓಡಾಡುವುದೇ ಕಷ್ಟವಾಗಿದೆ ಮಹಿಳೆಯರು, ವಯೋವೃದ್ಧರು ನ್ಯಾಯಬೇಕು ಎಂದು ಆಗ್ರಹಿಸಿ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ನಮ್ಮ ಗ್ರಾಮದಲ್ಲಿರುವ ಮದ್ಯದಂಗಡಿ ಮುಚ್ಚಿಸುವವರೆಗೆ ನಾವು ಮತದಾನ ಮಾಡುವುದಿಲ್ಲ ಎಂದು ಪಟ್ಟು ಹಿಡಿದರು. ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಸ್ಥಳಕ್ಕೆ ಬಂದು ಕೂಡಲೇ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ಕೋಲಾರ ಗ್ರಾಮಾಂತರ ಇನ್ ಸ್ಪೆಕ್ಟರ್ ಕಾಂತರಾಜ್ ಹಾಗೂ ಸಿಬ್ಬಂದಿ ಸ್ಥಳಕ್ಕೆ ಬಂದು




ಪ್ರತಿಭಟನಕಾರರನ್ನು ಚದುರಿಸಿದರು.

ಮೊದಲು ಮತ ಹಾಕುವಂತೆ ಅಧಿಕಾರಿಗಳು ಮನವಿ ಮಾಡಿದರು. ಮಧ್ಯಾಹ್ನದವರೆಗೆ ಮತದಾನ ಮಾಡಿರಲಿಲ್ಲ ಬಳಿಕ ಸಂಸದ ಎಸ್. ಮುನಿಸ್ವಾಮಿ ಎಂಎಲ್ಸಿ ಇಂಚರ ಗೋವಿಂದರಾಜು, ಮೈತ್ರಿ ಅಭ್ಯರ್ಥಿ ಮಲ್ಲೇಶ್ ಬಾಬು, ಜೆಡಿಎಸ್ ಮುಖಂಡ ಸಿಎಂಆರ್ ಶ್ರೀನಾಥ್ ಹಾಗೂ ಅಧಿಕಾರಿಗಳು ಸ್ಥಳಕ್ಕೆ ತೆರಳಿ ಮನವಿ ಆಲಿಸಿದರು.

ಚುನಾವಣೆ ಮುಗಿದ ನಂತರ ಅತಿ ಶೀಘ್ರದಲ್ಲಿ ಮದ್ಯದ ಅಂಗಡಿಯನ್ನು ತೆರವುಗೊಳಿಸುವುದಾಗಿ ಗ್ರಾಮಸ್ಥರಿಗೆ ಸಂಸದರು ಭರವಸೆ ನೀಡಿದರು ಕ್ರಮದ ಬಗ್ಗೆ ಭರವಸೆ ನೀಡಿ ಮನವೊಲಿಸಿದ ಮೇಲೆ ಮತಗಟ್ಟೆಗೆ ತೆರಳಿ ಮತದಾರರು ತಮ್ಮ ಹಕ್ಕು ಚಲಾಯಿಸಿದರು ಈ ಸಂದರ್ಭದಲ್ಲಿ ಗ್ರಾಮಸ್ಥರಾದ ಕೃಷ್ಣಮ್ಮ, ಚಂದ್ರೇಗೌಡ, ಚನ್ನಪ್ಪ, ಮುನಿಯಪ್ಪ, ಬಿ.ಆರ್. ಮಂಜುನಾಥ್, ಅವಿನಾಶ್, ವಿಶ್ವನಾಥ್, ರಘು, ಅರುಣ್ ಕುಮಾರ್, ಶಿವರಾಜ್, ರಾಘವೇಂದ್ರ, ಮುಂತಾದವರು ಇದ್ದರು

## ಹಣ, ಹೆಂಡದ ಹೊಳೆ ತಡೆಯುವಲ್ಲಿ ಆಯೋಗ ವಿಫಲ

**ಚಾಮರಾಜನಗರ:** ಈ ಬಾರಿಯ ಲೋಕಸಭಾ ಚುನಾವಣೆಯ ಮತದಾನ ಮುಗಿದಿದ್ದು ಚುನಾವಣೆಯಲ್ಲಿ ನಾನು ಗೆಲ್ಲಲಿ ಸೋಲಲಿ ಜಿಲ್ಲೆಯ ಅಭಿವೃದ್ಧಿಗೆ ಹೋರಾಡುವೆ ಎಂದು ಬಿಎಸ್ಪಿ ರಾಜ್ಯ ಸಂಯೋಜಕ , ಅಭ್ಯರ್ಥಿ ಎಂ.ಕೃಷ್ಣಮೂರ್ತಿ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಈ ಬಾರಿಯ ಚುನಾವಣೆಯಲ್ಲಿ ಅನಿರೀಕ್ಷಿತವಾಗಿ ಸ್ಪರ್ಧೆ ಮಾಡಿದ್ದೆ. ಲೋಕಸಭಾ ಕ್ಷೇತ್ರದಲ್ಲಿ ಪಕ್ಷ ಸಂಘಟನೆಯಲ್ಲಿ ತೊಡಗಿಕೊಳ್ಳುತ್ತೇನೆ. ಮುಂಬರುವ ಗ್ರಾಪಂ, ತಾಪಂ, ಜಿಪಂ, ವಿಧಾನಸಭಾ, ಲೋಕಸಭಾ ಚುನಾವಣೆಗಳಲ್ಲಿ ಶಕ್ತಿ ಮೀರಿ ಪಕ್ಷ ಸಂಘಟನೆ ಮಾಡುತ್ತೇನೆ ಮುಂದಿನ ಲೋಕಸಭಾ ಚುನಾವಣೆಯಲ್ಲಿ ಬಿಎಸ್ ಪಿ ಗೆದ್ದ ಗೆಲ್ಲುತ್ತೇವೆ ಎಂದರು .

ನಾನು ಹೇಳಿದಂತೆ ಜಿಲ್ಲೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಅಗತ್ಯವಿದ್ದು ಅದಕ್ಕಾಗಿ ಹೋರಾಟ ಮಾಡುತ್ತೇನೆ. ಅಲ್ಲದೇ 2 ನೇ ಹಂತದ ಕಬಿನಿ ಯೋಜನೆ ಕ್ಷೇತ್ರ ವ್ಯಾಪ್ತಿಯಲ್ಲಿರುವ ಕಬಿನಿ ಸೇರಿದಂತೆ ಇತರೆ ಜಲಾಶಯಗಳಿಂದ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ

ಜಾರಿಗೆ ಯತ್ನಿಸುತ್ತೇನೆ. ಚಾಮರಾಜನಗರ ಲೋಕಸಭಾ ಅಭಿವೃದ್ಧಿ ಮಂಡಳಿ ಸ್ಥಾಪನೆಗೆ ಹೋರಾಟ



ಮಾಡಲಾಗುವುದು ಚಾಮರಾಜನಗರ ತಾಲೂಕಿನ ಚಿಕ್ಕಮೂಡಲಹಳ್ಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸದೆ ಇರುವುದು ವಿಪರ್ಯಾಸ.. ಇಂಡಿಗನತ್ತ ಸೇರಿದಂತೆ ಇತರೆ ಕಾಡಂಚಿನ ಗ್ರಾಮಗಳಿಗೆ ಮೂಲ ಸೌಕರ್ಯ ಒದಗಿಸಲು ಜಿಲ್ಲಾಡಳಿತ, ಸರ್ಕಾರದ ಮೇಲೆ ಒತ್ತಡ ಹೇರುತ್ತೇನೆ. ಈ ಚುನಾವಣೆಯಲ್ಲಿ ಶ್ರಮಿಸಿದ ಪಕ್ಷದ ಮುಖಂಡರು, ಕಾರ್ಯಕರ್ತರು ಶ್ರಮವಹಿಸಿ ಕೆಲಸ ಮಾಡಿದ್ದಾರೆ. ಅವರಿಗೆ ಕೃತಜ್ಞತೆಗಳನ್ನು ಸಲ್ಲಿಸುವುದಾಗಿ ತಿಳಿಸಿದರು.

ಕಾಂಗ್ರೆಸ್‌ಗೆ ಸೋಲಿನ ಭಯ : ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ 7 ಕಾಂಗ್ರೆಸ್ ಶಾಸಕರಿದ್ದಾರೆ. ಅಲ್ಲದೇ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಎಚ್.ಸಿ.ಮಹದೇವಪ್ಪ ಅವರು ಕ್ಷೇತ್ರದಲ್ಲಿ ಇದ್ದಾರೆ. ಜೊತೆಗೆ ಸರ್ಕಾರದ 5 ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದರೂ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಎಸ್ಪಿಯಿಂದಾಗಿ ಕಾಂಗ್ರೆಸ್‌ಗೆ ಸೋಲಿನ ಭೀತಿ ಎದುರಾಗಿದೆ ಎಂದರು. ಈ ಬಾರಿಯ ಚುನಾವಣೆಯಲ್ಲಿ ಕ್ಷೇತ್ರದಲ್ಲಿ ಹಣ, ಮದ್ಯದ ಹೊಳೆ ಹರಿದಿದೆ. ಮದ್ಯದ ಪಾಕೆಟ್ ಮೇಲೆ ಕಾಂಗ್ರೆಸ್ ಅಭ್ಯರ್ಥಿ ಭಾವಚಿತ್ರ ಹಾಕಿ ವಿತರಿಸಲಾಗಿದೆ. ಆ ಮೂಲಕ ಚುನಾವಣಾ ನೀತಿ ಸಂಹಿತೆಯನ್ನು ಗಾಳಿಗೆ ತೂರಲಾಗಿದೆ. ಚುನಾವಣೆಯಲ್ಲಿ ಹಣ, ಹೆಂಡದ ಹೊಳೆ ಹರಿಯುವುದನ್ನು ತಡೆಯುವ ನಿಟ್ಟಿನಲ್ಲಿ ಚುನಾವಣಾ ಆಯೋಗ ವಿಫಲವಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಬಿಎಸ್ಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹ.ರಾ.ಮಹೇಶ್, ಜಿಲ್ಲಾಧ್ಯಕ್ಷ ಎನ್ .ನಾಗಯ್ಯ, ಉಪಾಧ್ಯಕ್ಷ ಬ್ಯಾಡಮೂಡ್ಲು ಬಸವಣ್ಣ, ಪ್ರಧಾನ ಕಾರ್ಯದರ್ಶಿ ಬ.ಮ.ಕೃಷ್ಣಮೂರ್ತಿ, ಸಂಯೋಜಕ ರಾಜಶೇಖರ್, ಉಸ್ತುವಾರಿ ಅಮಚವಾಡಿ ಪ್ರಕಾಶ್ ಹಾಜರಿದ್ದರು

## ವಿಜೃಂಭಣೆಯ ಆಂಜನೇಯ ಉತ್ಸವ

**ಚಾಮರಾಜನಗರ:** ನಗರದ ಶಂಕರಪುರ ಬಡಾವಣೆಯ ಶ್ರೀರಾಮ ಮಂದಿರದಲ್ಲಿ ಶ್ರೀ ರಾಮನವಮಿ ಪಟ್ಟಾಭಿಷೇಕದ ಅಂಗವಾಗಿ ವಿಜೃಂಭಣೆಯಿಂದ ಆಂಜನೇಯ ಉತ್ಸವ ನಡೆಯಿತು

ಶ್ರೀ ರಾಮ ಮಂದಿರದ ಮುಂಭಾಗ ದಿಂದ ಶಂಕರಪುರ ಬಡಾವಣೆಯ ರಸ್ತೆಯಲ್ಲಿ ಮನೆಮನೆಯ ಮುಂಭಾಗ ಶುದ್ಧ ಬಣ್ಣದ ನೀರನ್ನು ಪರಸ್ಪರ ಎರಚುವ ಮೂಲಕ ಶ್ರೀ ಆಂಜನೇಯ ಓಕಳಿ ಕಾರ್ಯಕ್ರಮ ವೈಭವದಿಂದ ಜರಗಿತು. ಅರಿಶಿನ, ಕುಂಕುಮ, ಶ್ರೀಗಂಧ ಪನ್ನೀರು ,ತುಳಸಿ, ದಾಸಿವಾಳ, ಬೇವಿನ ಎಲೆ ,ಮಾವಿನ ಎಲೆ, ಪಾರಿಜಾತ ಎಲೆ, ಸೀಬೆ ಎಲೆ ,ಮಲ್ಲಿಗೆ ಎಲೆ ಮುಂತಾದ ಪರಿಸರ ಯುಕ್ತ ಎಲೆಗಳ ರಸ ಹಾಗೂ ಶುದ್ಧ ಬಣ್ಣದ ಓಕಳಿ ನೀರನ್ನು ತಯಾರಿಸಿ ಪ್ರತಿ ಮನೆಗಳಲ್ಲೂ ಪರಸ್ಪರ ವಯೋಮಾನ ಭೇದವಿಲ್ಲದೆ ಪರಸ್ಪರ ಎರಚಿ ಸಂಭ್ರಮದಿಂದ ಓಕಳಿಯ ಕಾರ್ಯಕ್ರಮ ನೋಡುಗರಿಗೆ ಹಾಗೂ ಭಾಗವಹಿಸಿದವರಿಗೆ ಪರಮಾನಂದವನ್ನು ಉಂಟುಮಾಡುತ್ತದೆ. ಓಕಳಿ ಕಾರ್ಯಕ್ರಮದ ಕುರಿತು ಮಾತನಾಡಿದ ಸಂಸ್ಕೃತಿ ಚಿಂತಕ ಸುರೇಶ ಎನ್ ಋಗ್ವೇದಿ ಮಾತನಾಡಿ ಶಂಕರ ಪುರ ಶ್ರೀರಾಮ ಮಂದಿರದಲ್ಲಿ ಏಳು ದಶಕಗಳಿಂದಲೂ ನಿರಂತರವಾಗಿ ಶ್ರೀ ರಾಮನ ಉತ್ಸವ ನಡೆಯುತ್ತಿದ್ದು 10 ದಿನಗಳ ಕಾಲ ನಡೆಯುವ ಶ್ರೀರಾಮ ಉತ್ಸವ ಅಂಗವಾಗಿ ಕೊನೆಯ ದಿನ ಆಂಜನೇಯ ಉತ್ಸವ ಪ್ರತಿ ಮನೆಮನೆಗಳಲ್ಲೂ ಆಂಜನೇಯನ ಮೆರವಣಿಗೆ



ಹೋಗಿ ಪ್ರತಿ ಮನೆಯಲ್ಲಿ ವಿಶೇಷ ಪೂಜೆ ನೆರವೇರಿಸಿ ಕಾಣಿಕೆಗಳನ್ನು ಸ್ವೀಕರಿಸಿ ಶ್ರೀರಾಮ ಮಂದಿರಕ್ಕೆ ತೆರಳಿದ ನಂತರ ವಿಶೇಷವಾಗಿ ಓಕುಳಿ ಕಾರ್ಯಕ್ರಮ ನಡೆಯುತ್ತದೆ. ನಮ್ಮ ಸಂಸ್ಕೃತಿ ಪರಂಪರೆಯನ್ನು ಉಳಿಸಿ ಯುವಪೀಳಿಗೆ ಪರಸ್ಪರ ಭಾವೈಕ್ಯತೆ ಏಕತೆ, ಪ್ರೀತಿ, ವಿಶ್ವಾಸ ,ನಂಬಿಕೆ ಆಧ್ಯಾತ್ಮಿಕ ಭಾವನೆ ಹಾಗೂ ಭಗವಂತನಲ್ಲಿ ದೃಢವಾದ ವಿಶ್ವಾಸ ಹಾಗೂ ಬಡವ ಶ್ರೀಮಂತ ಎಂಬ ಭಾವವಿಲ್ಲದೆ ನಾನು ಎಂಬ ಅಹಂಕಾರವಿಲ್ಲದೆ ನಾವೆಲ್ಲರೂ ಒಂದೇ ಎಂಬ ಭಾವನೆಯಿಂದ ಪರಸ್ಪರ ಪಾಲ್ಗೊಳ್ಳುವ ಓಕಳಿಯ ಕಾರ್ಯಕ್ರಮ ನಿಜಕ್ಕೂ ಪರಿಶುದ್ಧವಾದ ಒಂದು ಸಂಪ್ರದಾಯವಾಗಿದೆ. ಶಂಕರಪುರ ಅಗ್ರಹಾರದ ಸುತ್ತ ನಡೆಯುವ ಈ ಕಾರ್ಯಕ್ರಮದಲ್ಲಿ ದೇಶವಿದೇಶಗಳಿಂದಲೂ ಹಾಗೂ ವಿವಿಧ ಭಾಗಗಳಿಂದಲೂ ಭಕ್ತಾದಿಗಳು ಆಗಮಿಸುತ್ತಾರೆ. ವಿಶೇಷವಾಗಿ ಮಕ್ಕಳಿಗೆ ಹಾಗೂ ಯುವಕರಿಗೆ ವಿಶೇಷವಾದ ಆಧ್ಯಾತ್ಮಿಕ ಕಾರ್ಯಕ್ರಮವಾದ ಓಕಳಿ ಪರಂಪರೆಯನ್ನು ಉಳಿಸಿ ಬೆಳೆಸುವ ಕಾರ್ಯವನ್ನು ಮಾಡಬೇಕಾಗಿದೆ ಎಂದು ತಿಳಿಸಿದರು.

ಶ್ರೀ ರಾಮ ಮಂದಿರದ ಪ್ರತಾಪ್, ಸತೀಶ್, ಕೇಶವಮೂರ್ತಿ, ರಾಜಗೋಪಾಲ್ ,ವತ್ಸಲ ರಾಜಗೋಪಾಲ್, ರಂಗನಾಥ್ ವಿಜಯಲಕ್ಷ್ಮಿ, ಸರಸ್ವತಿ ,ರಾಧಾಕೃಷ್ಣ ಸುದರ್ಶನ್ , ಮುರುಗೇಶ್ ,ನವೀನ ಉಮೇಶ್ ,ರವಿ ,ಶ್ರೇಯಸ್ ರಘುನಾಥ್, ಕಾರ್ತಿಕ್, ರಮೇಶ್ ಶ್ರೀಮತಿ,ಶರಣ್ಯ, ಶ್ರಾವ್ಯ ಋಗ್ವೇದಿ,ಸಾನಿಕ, ಸುಮನ್, ವರ್ಷಿಣಿ, ಶ್ರೇಯಸ್, ಮಾಲಾ, ವಾಣಿ ,ಪದ್ಮಿನಿ ಮೇಘನಾ ಇದ್ದರು.

# ಚಂದ್ರುನ ನನ್ನಿಂದ ಯಾರೂ ದೂರ ಮಾಡೋಕಾಗಲ್ಲ; ಶಿವಣ್ಣ ತಿರುಗೇಟು

ಶಿವರಾಜ್ ಕುಮಾರ್ ಅವರು 'ಕಬ್ಜ' ಸಿನಿಮಾದಲ್ಲಿ ಅತಿಥಿ ಪಾತ್ರ ಮಾಡಿದ್ದರು. ಈ ಸಿನಿಮಾ ಅಂದುಕೊಂಡ ರೀತಿಯಲ್ಲಿ ವಿಮರ್ಶೆ ಪಡೆದಿಲ್ಲ. ಆದರೆ, ಸಿನಿಮಾ ಉತ್ತಮವಾಗಿ ಬಿಸ್ನೆಸ್ ಮಾಡಿದೆ ಎಂದು ಚಂದ್ರು ಹೇಳಿಕೊಂಡಿದ್ದರು. 'ಕಬ್ಜಾಗೆ ಚಂದ್ರು ಓವರ್ ಹೈಪ್ ಕೊಟ್ಟರು' ಎಂಬರ್ಥದಲ್ಲಿ ಶಿವಣ್ಣ ಮಾತನಾಡಿದ್ದ ವಿಡಿಯೋ ವೈರಲ್ ಆಗಿತ್ತು. ಇದನ್ನು ಟ್ರೋಲ್ ಪೇಜ್ ಗಳಲ್ಲಿ ಬಳಕೆ ಮಾಡಲಾಗಿತ್ತು. 'ಕಬ್ಜ' ಬಗ್ಗೆ ಶಿವಣ್ಣಗೆ ಅಸಮಾಧಾನ ಇದೆ ಎಂದೆಲ್ಲ ಸುದ್ದಿ ಹಬ್ಬಿಸಲಾಯಿತು. ಈ ಬಗ್ಗೆ ಶಿವಣ್ಣ ಮಾತನಾಡಿದ್ದಾರೆ. 'ನನ್ನ ಹಾಗೂ ಆರ್ ಚಂದ್ರುನ ಯಾರೂ ಬೇರೆ ಮಾಡೋಕಾಗಲ್ಲ' ಎಂದಿದ್ದಾರೆ.

ಇತ್ತೀಚೆಗೆ ಚಂದ್ರು ಅವರು ತಮ್ಮ ನಿರ್ಮಾಣದ ಬ್ಯಾಕ್ ಟು ಬ್ಯಾಕ್ ಐದು ಸಿನಿಮಾ ಘೋಷಿಸಿದ್ದರು. ಇದರಲ್ಲಿ 'ಫಾದರ್' ಕೂಡ ಒಂದು. ಡಾರ್ಲಿಂಗ್ ಕೃಷ್ಣ ನಾಯಕನಾಗಿ ನಟಿಸ್ತಿರೊ ಈ ಚಿತ್ರಕ್ಕೆ ಅಮೃತಾ ಅಯ್ಯಂಗಾರ್ ನಾಯಕಿ. ಬೆಂಗಳೂರಿನ ಬಂಡಿ ಮಾಕಾಳಮ್ಮ ದೇವಸ್ಥಾನದಲ್ಲಿ ಮುಹೂರ್ತ ನಡೆದಿದೆ. ಇದಕ್ಕೆ ಶಿವಣ್ಣ ಆಗಮಿಸಿ ಸಾಥ್ ಕೊಟ್ಟಿದ್ದಾರೆ.



ಮಾಧ್ಯಮದ ಜೊತೆ ಮಾತನಾಡುವಾಗ ಅವರು ಆರ್ ಚಂದ್ರು ಬಗ್ಗೆ ಮೆಚ್ಚುಗೆಯ ಮಾತುಗಳನ್ನು ಆಡಿದರು.

'ಚಂದ್ರು ಏನೇ ಮಾಡಿದರೂ ಸ್ಟೈಲ್ ಆಗಿ ಮಾಡ್ತಾರೆ. ಆಡಂಬರ ಸ್ವಲ್ಪ ಜಾಸ್ತಿಯೇ ಇರುತ್ತೆ. ನಾನು ಮಾತನಾಡುವಾಗ ಅವರ ಬಗ್ಗೆ ಮಾತನಾಡಲಿ ಎಂದು ನಿರೀಕ್ಷಿಸುತ್ತಾರೆ. ಅವರು ನಿರೀಕ್ಷಿಸುತ್ತಾರೆ ಎಂದು ನಾನು ಮಾತನಾಡಲ್ಲ, ಇಷ್ಟಪಟ್ಟು ಮಾತಾಡ್ತೀನಿ. ತಂದೆ ಸೆಂಟಿಮೆಂಟ್ ಚೆನ್ನಾಗಿ ಕಟ್ಟಿಕೊಡ್ತಾರೆ. ಅವರ ಸಿನಿಮಾಗಳು ಎಮೋಷನ್ ಆಗಿ ಕನೆಕ್ಟ್ ಆಗುತ್ತವೆ. ಮೈಲಾರಿ ಸಿನಿಮಾ ಮಾಡೋವಾಗ ತಂದೆಗೆ ಕನೆಕ್ಟ್ ಆಗೋ ಪಾತ್ರ ಇತ್ತು' ಎಂದು ಶಿವಣ್ಣ ಹೇಳಿದರು. 'ಫಾದರ್' ಸಿನಿಮಾದಲ್ಲಿ ತಂದೆ-ಮಗನ ಬಾಂಧವ್ಯದ ಬಗ್ಗೆ ಇದೆ.

ಇನ್ನು, ವೈರಲ್ ಆದ ವಿಡಿಯೋ ಬಗ್ಗೆ ಶಿವಣ್ಣಗೆ ಪ್ರಶ್ನೆ ಮಾಡಲಾಯಿತು. ಇದಕ್ಕೆ ಶಿವಣ್ಣ ಉತ್ತರ ನೀಡಿದ್ದಾರೆ. 'ನನ್ನ ಹಾಗೂ ಚಂದ್ರುನ ಯಾರೂ ಬೇರೆ ಮಾಡೋಕಾಗಲ್ಲ. ಚಂದ್ರು ನನ್ನ ಬಾಂಧವ್ಯ ಯಾವಾಗಲೂ ಇರುತ್ತದೆ. ಸೋಶಿಯಲ್ ಮೀಡಿಯಾ ಆಟದ ಸಾಮಾನಿನ ರೀತಿ ಆಗಿದೆ. ಅದನ್ನು ಜನರು ಒಳ್ಳೆಯದಕ್ಕೆ ಬಳಸಿಕೊಳ್ಳುವಂತಾಗಲಿ. ಯಾವ ಮೀಡಿಯಾನೂ ಏನು ಮಾಡೋಕಾಗಲ್ಲ' ಎಂದು ಹೇಳಿದ್ದಾರೆ ಅವರು.

## ರಣಬೀರ್ ಕಪೂರ್ ಎದುರಲ್ಲೇ ಅಶ್ಲೀಲವಾಗಿ ಬೈಯ್ದ ಫೋಟೋಗ್ರಾಫರ್

ನಟ ರಣಬೀರ್ ಕಪೂರ್ ಅವರು ಇತ್ತೀಚೆಗೆ ಒಂದು ಮುಜುಗರದ ಸನ್ನಿವೇಶ ಎದುರಿಸಿದ್ದಾರೆ. ಗುಜರಾಜ್ ನ ಸೂರತ್ ನಲ್ಲಿ ಆಭರಣದ ಮಳಿಗೆಯನ್ನು ಉದ್ಘಾಟಿಸಲು ರಣಬೀರ್ ಕಪೂರ್ ತೆರಳಿದ್ದರು. ಅವರ ಫೋಟೋ ಕ್ಲಿಕ್ಕಿಸಲು ಬಂದ ಪಾಪರಾಜಿಯೊಬ್ಬನು ಅಶ್ಲೀಲ ಪದಗಳಿಂದ ಬೈಯ್ದಿದ್ದಾನೆ. ಅದನ್ನು ಕೇಳಿಸಿಕೊಂಡು ರಣಬೀರ್ ಕಪೂರ್ ಗೆ ಶಾಕ್ ಆಗಿದೆ. ಬಹಳ ಅಚ್ಚರಿಯಿಂದ ಅವರು ಫೋಟೋಗ್ರಾಫರ್ ಕಡೆಗೆ ನೋಡಿದ್ದಾರೆ. 'ಏನು ನಡೆಯುತ್ತಿದೆ ಇಲ್ಲಿ' ಎಂದು ಪ್ರಶ್ನಿಸಿದ್ದಾರೆ. ಸೋಶಿಯಲ್ ಮೀಡಿಯಾದಲ್ಲಿ ಈ ವಿಡಿಯೋ ವೈರಲ್ ಆಗಿದೆ.

ರಣಬೀರ್ ಕಪೂರ್ ಅವರ ಫೋಟೋಗಳನ್ನು ಕ್ಲಿಕ್ಕಿಸಬೇಕು ಎಂಬುದು ಪಾಪರಾಜಿಗಳ ತವಕ. ಜನಜಂಗುಳಿ ಇದ್ದಿದ್ದರಿಂದ ಸರಿಯಾದ ಫೋಟೋಗಳು ಸಿಗದೇ ಇರಬಹುದು. ಈ ಸಂದರ್ಭದಲ್ಲಿ ತಾಳ್ಮೆ ಕಳೆದುಕೊಂಡ ಫೋಟೋಗ್ರಾಫರ್ ಒಬ್ಬನು ಕೆಟ್ಟ ಭಾಷೆ ಬಳಸಿ ಕೂಗಾಡಿದ್ದಾನೆ. ಆತ ಆ ಮಾತನ್ನು ರಣಬೀರ್ ಕಪೂರ್ ಗೆ ಹೇಳಿದ್ದಾ ಅಥವಾ ಅಲ್ಲಿದ್ದ ಜನರ ಪೈಕಿ ಯಾರೋ ಒಬ್ಬರಿಗೆ ಹೇಳಿದ್ದಾ ಎಂಬುದು ಖಚಿತವಾಗಿಲ್ಲ.



ಒಟ್ಟಿನಲ್ಲಿ ಆ ಫೋಟೋಗ್ರಾಫರ್ ಬಳಸಿದ ಅಶ್ಲೀಲ ಭಾಷೆ ಕೇಳಿ ರಣಬೀರ್ ಕಪೂರ್ ಅವರಿಗೆ ಕೋಪ ಬಂದಿದೆ. ಆದರೂ ಅವರು ಆ ಸಂದರ್ಭದಲ್ಲಿ ತಾಳ್ಮೆ ಕಳೆದುಕೊಂಡಿಲ್ಲ. ಅಸಹನೆಯಿಂದ ಲುಕ್ ಕೊಟ್ಟು ಅಲ್ಲಿಂದ ತೆರಳಿದ್ದಾರೆ. ಪಾಪರಾಜಿಗಳ ಅನಾಗರಿಕ ವರ್ತನೆಗೆ ಸೋಶಿಯಲ್ ಮೀಡಿಯಾದಲ್ಲಿ ಖಂಡನೆ ವ್ಯಕ್ತವಾಗುತ್ತಿದೆ. ಕೆಟ್ಟದಾಗಿ ಮಾತನಾಡಿದ ಪಾಪರಾಜಿಗೆ ಅನೇಕರು ಕಮೆಂಟ್ ಮೂಲಕ ಕ್ಲಾಸ್ ತೆಗೆದುಕೊಂಡಿದ್ದಾರೆ.

ರಣಬೀರ್ ಕಪೂರ್ ಅವರು ಈಗ ರಾಮಾಯಣ ಸಿನಿಮಾದಲ್ಲಿ ಬ್ಯುಸಿ ಆಗಿದ್ದಾರೆ. 'ಅನಿಮಲ್' ಸಿನಿಮಾದ ಭಾರಿ ಯಶಸ್ಸಿನ ಬಳಿಕ ಅವರಿಗೆ ಈ ಅವಕಾಶ ಸಿಕ್ಕಿದೆ. ಈ ಸಿನಿಮಾದಲ್ಲಿ ಅವರಿಗೆ ಜೋಡಿಯಾಗಿ ಸಾಯಿ ಪಲ್ಲವಿ ನಟಿಸುತ್ತಿದ್ದಾರೆ. 'ದಂಗಲ್' ಖ್ಯಾತಿಯ ನಿರ್ದೇಶಕ ನಿತೇಶ್ ತಿವಾರಿ ಅವರು ಆ ಯಕ್ಷನ್ -ಕಟ್ ಹೇಳುತ್ತಿದ್ದಾರೆ. ಚಿತ್ರೀಕರಣದ ಸೆಟ್ ನಿಂದ ಕೆಲವು ಫೋಟೋಗಳು ಲೀಕ್ ಆಗಿವೆ. ಆ ಮೂಲಕ ಸಿನಿಮಾ ಮೇಲಿನ ಹೈಪ್ ಹೆಚ್ಚಾಗಿದೆ.



## ಜಪಾನ್‌ಗೆ ಹೊರಟ 777 ಚಾರ್ಲಿ

ಭಾರತದಲ್ಲಿ '777 ಚಾರ್ಲಿ' ಸಿನಿಮಾ ಮೋಡಿ ಮಾಡಿತ್ತು. ಪ್ರಾಣಿಪ್ರಿಯರು ಈ ಸಿನಿಮಾ ನೋಡಿ ಖುಷಿಪಟ್ಟಿದ್ದರು. ರಕ್ಷಿತ್ ಶೆಟ್ಟಿ ಅಭಿನಯಕ್ಕೆ ಅಭಿಮಾನಿಗಳು ಭೇಷ್ ಎಂದಿದ್ದರು. 'ಪರಂವಃ ಸ್ಟುಡಿಯೋಸ್' ಮೂಲಕ ನಿರ್ಮಾಣವಾದ '777 ಚಾರ್ಲಿ' ಸಿನಿಮಾ ತಂಡದಿಂದ ಒಂದು ವಿಶೇಷ ಸುದ್ದಿ ಕೇಳಿಬಂದಿದೆ. ಈಗ ಜಪಾನ್ ನಲ್ಲಿ ಈ ಚಿತ್ರ ಬಿಡುಗಡೆ ಆಗಲು ಸಿದ್ಧವಾಗಿದೆ. ಕನ್ನಡದ ಈ ಸಿನಿಮಾ ಜಪಾನೀಸ್ ಭಾಷೆಗೆ ಡಬ್ ಆಗಿ ಬಿಡುಗಡೆ ಆಗುತ್ತಿದೆ. ಜೂನ್ 28ರಂದು ಜಪಾನ್ ದೇಶದ ಹಲವು ನಗರಗಳಲ್ಲಿ '777 ಚಾರ್ಲಿ' ರಿಲೀಸ್ ಆಗಲಿದೆ.

ಬಾಲಿವುಡ್ ಹಾಗೂ ಟಾಲಿವುಡ್ ನ ಸಿನಿಮಾಗಳು ಜಪಾನ್ ನಲ್ಲಿ ಬಿಡುಗಡೆ ಆಗಿ ಯಶಸ್ಸು ಕಂಡಿದ್ದುಂಟು. ಈಗ ಕನ್ನಡದ ಒಂದು ಸಿನಿಮಾ ಜಪಾನ್ ನಲ್ಲಿ ತೆರೆ ಕಾಣಲು ಸಜ್ಜಾಗಿರುವುದು ಹೆಮ್ಮೆಯ ವಿಷಯ. ಜಪಾನ್ ಚಿತ್ರರಂಗದ ದೊಡ್ಡ ಸಂಸ್ಥೆ 'ಶೋಚಿಕೋ ಮೂವೀ' ಕಿರಣ್ ರಾಜ್ ನಿರ್ದೇಶನದ '777 ಚಾರ್ಲಿ' ಚಿತ್ರವನ್ನು ಜಪಾನಿನಲ್ಲಿ ವಿತರಣೆ ಮಾಡಲು ಮುಂದಾಗಿದೆ. ಈ ಹಿಂದೆ ಇದೇ ಸಂಸ್ಥೆ 'Hachi: A Dog's Tale' ಸಿನಿಮಾವನ್ನು ಜಪಾನಿನಲ್ಲಿ ವಿತರಣೆ ಮಾಡಿ ಗಮನ ಸೆಳೆದಿತ್ತು.

2023ರಲ್ಲಿ '777 ಚಾರ್ಲಿ' ಸಿನಿಮಾ ಥೈಲ್ಯಾಂಡ್ ನಲ್ಲಿ ಡಬ್ ಆಗಿ ತೆರೆಕಂಡಿತ್ತು. ಈ ಸಿನಿಮಾ ಮುಂದಿನ ದಿನಗಳಲ್ಲಿ ರಷ್ಯಾ, ಲ್ಯಾಟಿನ್ ಅಮೆರಿಕ, ಜರ್ಮನಿ, ತೈವಾನ್ ಮುಂತಾದ ದೇಶಗಳಲ್ಲಿ ಬಿಡುಗಡೆ ಆಗಲಿದೆ




ಎಂದು ಚಿತ್ರತಂಡ ಮಾಹಿತಿ ಹಂಚಿಕೊಂಡಿದೆ. 'ಬಿಗ್ ಬಾಸ್' ಖ್ಯಾತಿಯ ಸಂಗೀತಾ ಶೃಂಗೇರಿ ಅವರು ಈ ಸಿನಿಮಾದಲ್ಲಿ ಒಂದು ಪ್ರಮುಖ ಪಾತ್ರ ಮಾಡಿದ್ದಾರೆ.

ಇದು ಕಿರಣ್ ರಾಜ್ ನಿರ್ದೇಶನದ ಮೊದಲ ಸಿನಿಮಾ. 2022ರ ಜೂನ್ 10ರಂದು ಭಾರತದ 5 ಭಾಷೆಗಳಲ್ಲಿ ಬಿಡುಗಡೆಯಾಗಿ ಎಲ್ಲ ವರ್ಗದ ಪ್ರೇಕ್ಷಕರನ್ನು ಭಾವನಾತ್ಮಕವಾಗಿ ಈ ಸಿನಿಮಾ ಸೆಳೆದಿಕೊಂಡಿತ್ತು. ಅನೇಕ ಪ್ರಶಸ್ತಿಗಳನ್ನ ಬಾಚಿಕೊಂಡ ಈ ಸಿನಿಮಾಗೆ ರಾಷ್ಟ್ರ ಪ್ರಶಸ್ತಿ ಕೂಡ ಸಿಕ್ಕಿದೆ. ರಾಜ್ ಬಿ. ಶೆಟ್ಟಿ ಕೂಡ '777 ಚಾರ್ಲಿ' ಸಿನಿಮಾದಲ್ಲಿ ನಟಿಸಿದ್ದಾರೆ. ನೋಬಿಲ್ ಪೌಲ್ ಸಂಗೀತ ನೀಡಿದ್ದಾರೆ.



# ಯಾರೂ ಊಹಿಸದ ಡೇಟ್ ಅನೌನ್ಸ್ ಮಾಡಿದ ಡಿಸ್ನಿ

ಮಲಯಾಳಂನ ಸೂಪರ್ ಹಿಟ್ ಸಿನಿಮಾ 'ಮಂಜುಮ್ಮೇಲ್ ಬಾಯ್ಸ್' ಚಿತ್ರ ರಿಲೀಸ್ ಆಗಿದ್ದು ಫೆಬ್ರವರಿ 22ರಂದು. ಇದಾಗಿ ಎರಡು ತಿಂಗಳೇ ಕಳೆದಿವೆ. ಸಿನಿಮಾ ಬಾಕ್ಸ್ ಆಫೀಸ್ ನಲ್ಲಿ ದೊಡ್ಡ ಮಟ್ಟದ ಗಳಿಕೆ ಮಾಡಿದೆ. 200 ಕೋಟಿ ರೂಪಾಯಿ ಗಳಿಕೆ ಮಾಡಿದ ಮೊದಲ ಮಲಯಾಳಂ ಸಿನಿಮಾ ಎನ್ನುವ ಖ್ಯಾತಿಯೂ ಈ ಚಿತ್ರಕ್ಕೆ ಸಿಕ್ಕಿದೆ. ವಿಶೇಷ ಎಂದರೆ ಈ ಚಿತ್ರ ಈಗ ಒಟಿಟಿಗೆ ಕಾಲಿಡುತ್ತಿದೆ. ಆದರೆ, ಯಾರೂ ಊಹಿಸದ ರಿಲೀಸ್ ದಿನಾಂಕವನ್ನು ಡಿಸ್ನಿ ಪ್ಲಸ್ ಹಾಟ್ ಸ್ಟಾರ್ ತಿಳಿಸಿದೆ.

'ಮಂಜುಮ್ಮೇಲ್ ಬಾಯ್ಸ್' ಪಕ್ಕಾ ಫ್ರೆಂಡ್ ಶಿಪ್ ಕಥೆ. ಇದರ ಜೊತೆಗೆ ಒಂದಷ್ಟು ಅಡ್ವೆಂಚರ್ ಕೂಡ ಇದೆ. ಕೊಡೈಕೆನಲ್ ನಲ್ಲಿರುವ 'ಗುಣ ಕೇವ್'ನಲ್ಲಿ ನಡೆದ ಒಂದು ಶಾಕಿಂಗ್ ಘಟನೆಯನ್ನು ಇಟ್ಟುಕೊಂಡು ಸಿನಿಮಾ ಮಾಡಲಾಗಿದೆ. 2006ರಲ್ಲಿ ಇಲ್ಲಿಗೆ ಒಂದು ಗೆಳೆಯರ ತಂಡ ಟ್ರಿಪ್ ತೆರಳಿರುತ್ತದೆ. ಈ ಪ್ರವಾಸಿ ಸ್ಥಳದಲ್ಲಿರುವ ಡೆವಿಲ್ಸ್ ಕಿಚನ್ ಎಂಬ ಕಂದಕದಲ್ಲಿ ಓರ್ವ ಬೀಳುತ್ತಾನೆ. ಆತನ ರಕ್ಷಿಸೋ ಕಥೆಯೇ 'ಮಂಜುಮ್ಮೇಲ್ ಬಾಯ್ಸ್'.



'ಮಂಜುಮ್ಮೇಲ್ ಬಾಯ್ಸ್' ಒಟಿಟಿ

ಈ ಸಿನಿಮಾ ಈಗ ಒಟಿಟಿಯಲ್ಲಿ ಪ್ರಸಾರ ಕಾಣುತ್ತಿದೆ. ಸಿನಿಮಾಗಳು ರಿಲೀಸ್ ಆಗೋದು ಸಾಮಾನ್ಯವಾಗಿ ಶುಕ್ರವಾರ. ಥಿಯೇಟರ್ ಮಾತ್ರವಲ್ಲದೆ ಒಟಿಟಿಗಳೂ ಈ ತಂತ್ರ ಉಪಯೋಗಿಸುತ್ತಿವೆ. ಈ ಕಾರಣದಿಂದಲೇ ಮೇ 3ರಂದು 'ಮಂಜುಮ್ಮೇಲ್ ಬಾಯ್ಸ್' ಒಟಿಟಿಯಲ್ಲಿ ಪ್ರಸಾರ ಕಾಣಲಿದೆ ಎಂದು ಹೇಳಲಾಗಿತ್ತು. ಆದರೆ, ಇದಕ್ಕೆ ಟ್ವಿಸ್ಟ್ ನೀಡಲಾಗಿದೆ. ಮೇ 5 (ಭಾನುವಾರ) ಸಿನಿಮಾ ಡಿಸ್ನಿ ಪ್ಲಸ್ ಹಾಟ್ ಸ್ಟಾರ್ ನಲ್ಲಿ ಪ್ರಸಾರ ಕಾಣಲಿದೆ.

'ಮಂಜುಮ್ಮೇಲ್ ಬಾಯ್ಸ್' ಸಿನಿಮಾ ಈವರೆಗೆ 236 ಕೋಟಿ ರೂಪಾಯಿ ಗಳಿಕೆ ಮಾಡಿದೆ. ಸುಮಾರು 20 ಕೋಟಿ ರೂಪಾಯಿ ಬಜೆಟ್ ನಲ್ಲಿ ಈ ಚಿತ್ರ ಸಿದ್ಧವಾಗಿದೆ ಎನ್ನಲಾಗಿದೆ. ಚಿದಂಬರಂ ಅವರು ಈ ಚಿತ್ರ ನಿರ್ದೇಶನ ಮಾಡಿದ್ದಾರೆ. ಸೌಬಿನ್ ಶಾಹಿರ್ ಈ ಚಿತ್ರದಲ್ಲಿ ಮುಖ್ಯ ಪಾತ್ರದ ಜೊತೆಗೆ ಸಿನಿಮಾ ನಿರ್ಮಾಣ ಕೂಡ ಮಾಡಿದ್ದಾರೆ. ಶ್ರೀನಾಥ್ ಬಾಶಿ, ಬಾಲು ವರ್ಗೀಶ್ ಮೊದಲಾದವರು ಈ ಚಿತ್ರದಲ್ಲಿ ನಟಿಸಿದ್ದಾರೆ.

# ಬೆಂಗಳೂರಿನ ಮತಗಟ್ಟೆಯಲ್ಲಿ ಜೀವ ಉಳಿಸಿದ ನಾರಾಯಣ ಹೆಲ್ತ್ ಸಿಟಿಯ ವೈದ್ಯರು

**ಬೆಂಗಳೂರು:** ವೈದ್ಯಕೀಯ ಪರಿಣಿತಿ ಮತ್ತು ತ್ವರಿತ ಕ್ರಮದ ಮಹತ್ತರ ಸಂಯೋಜನೆಯಲ್ಲಿ ಬೊಮ್ಮಸಂದ್ರದ ನಾರಾಯಣ ಹೆಲ್ತ್ ಸಿಟಿಯ ನೆಫ್ರಾಲಜಿಸ್ಟ್ ಡಾ.ಗಣೇಶ್ ಶ್ರೀನಿವಾಸ ಪ್ರಸಾದ್ ಮತದಾನಕ್ಕಾಗಿ ಕಾಯುತ್ತಿರುವಾಗ ಹೃದಯಾಘಾತಕ್ಕೆ ಒಳಗಾದ ಮಹಿಳೆಯ ಜೀವ ಉಳಿಸಿ ''ಜೀವರಕ್ಷಕ''ರಾಗಿದ್ದಾರೆ.



ಈ ಘಟನೆಯು ಜೆಪಿ ನಗರ 8ನೇ ಹಂತದಲ್ಲಿ ನಡೆದಿದ್ದು ಮತದಾರರು ತಮ್ಮ ಹಕ್ಕು ಚಲಾಯಿಸಲು ಕಾಯುತ್ತಿರುವಾಗ ನಡೆದಿದೆ. ಡಾ. ಪ್ರಸಾದ್ ತಮ್ಮ ಮತದಾನಕ್ಕೆ ಕಾಯುತ್ತಿದ್ದಾಗ ಐವತ್ತರ ವಯಸ್ಸಿನ ಮಹಿಳೆಯು ಬೆಳಿಗ್ಗೆ 9ರ ಸಮಯದಲ್ಲಿ ಕ್ಯೂನಲ್ಲಿ ನಿಂತಿರುವಾಗ ನೀರು ಕುಡಿಯಲು ಪ್ರಯತ್ನಿಸಿ ಕುಸಿದುಬಿದ್ದರು.

ತಕ್ಷಣವೇ ಗಮನಿಸಿದ ಡಾ.ಪ್ರಸಾದ್ ಮತ್ತು ಕ್ಯೂನಲ್ಲಿರುವ ಜನರು ಮಹಿಳೆ ಕೆಳಕ್ಕೆ ಬೀಳುವ ಮುನ್ನವೇ ಹಿಡಿದುಕೊಂಡರು. ಈ ಸೂಕ್ಷ್ಮ ಕ್ಷಣ ಕುರಿತು ಡಾ.ಪ್ರಸಾದ್, ''ನಾನು ಆಕೆಯ ನಾಡಿಯನ್ನು ಗಮನಿಸಿದೆ ಮತ್ತು ಅದು ಅತ್ಯಂತ ಕಡಿಮೆ ಇರುವುದನ್ನು ಕಂಡುಕೊಂಡೆ. ಆಕೆ ಕಣ್ಣುಗಳನ್ನು ಮೇಲಕ್ಕೆ ತಿರುಗಿಸುತ್ತಿದ್ದಳು. ಆಕೆಯ ದೇಹ ಯಾವುದೇ ಪ್ರತಿಕ್ರಿಯೆನೀಡುತ್ತಿರಲಿಲ್ಲ ಮತ್ತು ಆಕೆ ಉಸಿರಿಗಾಗಿ ಕಷ್ಟಪಡುತ್ತಿದ್ದಳು. ನಾನು ತಕ್ಷಣವೇ ಸಿಪಿಆರ್(ಕಾರ್ಡಿಯೊ ಪಲ್ಮನರಿ ರಿಸಸಿಟೇಷನ್) ನಡೆಸಿದೆ ಮತ್ತು ಆಕೆಯ ಪರಿಸ್ಥಿತಿ ಸುಧಾರಿಸಿತು'' ಎಂದರು.

ತ್ವರಿತ ಮತ್ತು ಪರಿಣಾಮಕಾರಿ ಸಿಪಿಆರ್ ಮಹಿಳೆಯ ಪರಿಸ್ಥಿತಿಯನ್ನು ಸ್ಥಿರಗೊಳಿಸುವಲ್ಲಿ ಹಾಗೂ ಮತ್ತಷ್ಟು ವೈದ್ಯಕೀಯ ನೆರವು ಒದಗಿಸುವವರೆಗೆ ಸುಧಾರಿಸಿತು. ಚುನಾವಣಾ ಕರ್ತವ್ಯದಲ್ಲಿದ್ದವರು ಮಹಿಳೆಗೆ ಜ್ಯೂಸ್ ನೀಡಿದರು ನಂತರ ಕೇವಲ ಐದೇ ನಿಮಿಷದಲ್ಲಿ ಆಂಬುಲೆನ್ಸ್ ಬಂದಿತು.

ಮಹಿಳೆಯನ್ನು ತಕ್ಷಣವೇ ಆಸ್ಪತ್ರೆಗೆ ಸಾಗಿಸಲಾಯಿತು, ಆಕೆ ಅಲ್ಲಿ ಅಗತ್ಯ ವೈದ್ಯಕೀಯ ಚಿಕಿತ್ಸೆ ಪಡೆದರು. ಈ ಘಟನೆ ಕುರಿತು ಡಾ.ಪ್ರಸಾದ್ ಸಕಾಲಿಕ ಮಧ್ಯಪ್ರವೇಶದ ಪ್ರಾಮುಖ್ಯತೆಯ ಕುರಿತು ಹೇಳಿದರು, ''ಚಿಕಿತ್ಸೆ ತಡವಾಗಿದ್ದಲ್ಲಿ ನಾವು ಆಕೆಯನ್ನು ಕಳೆದುಕೊಳ್ಳುವ ಸಂಭವನೀಯತೆ ಇತ್ತು. ಸಮೂಹವಾಗಿ ನಾವು ರೋಗಿಗಳಿಗೆ ಅವರ ಆರೋಗ್ಯಸೇವಾಪ್ರಯಾಣದಾದ್ಯಂತ ಆರೈಕೆ ಮಾಡಲು ಬದ್ಧರಾಗಿದ್ದೇವೆ. ಪ್ರಾಮಾಣಿಕ ಮತ್ತು ಪರಿಣಾಮಕಾರಿ ಪ್ರಥಮ ಚಿಕಿತ್ಸೆಯ

ಮೂಲಕ ರೋಗಿಯ ಜೀವ ಉಳಿಸುವ ಅವಕಾಶ ಲಭಿಸಿದ್ದಕ್ಕೆ ನಾನು ಕೃತಜ್ಞನಾಗಿದ್ದೇನೆ. ಅಸಾಧಾರಣ ವೈದ್ಯಕೀಯಆರೈಕೆಯು ಆಸ್ಪತ್ರೆಯ ಗೋಡೆಗಳನ್ನು ಮೀರಿ ವಿಸ್ತರಿಸುವಲ್ಲಿ ನಮ್ಮ ಬದ್ಧತೆಯಿದೆ ಮತ್ತು ನಾವು ಸೇವೆ ಒದಗಿಸುವವರಸ್ವಾಸ್ಥ್ಯ ದೃಢೀಕರಿಸುವುದಕ್ಕೆ ನಮ್ಮ ಕ್ರೋಢೀಕೃತ ಪ್ರಯತ್ನಗಳಿಗೆ ನಾವು ಹೆಮ್ಮೆ ಪಡುತ್ತೇವೆ'' ಎಂದರು.ಮಹಿಳೆಗೆ ಮತದಾನ ಮಾಡುವ ಅವಕಾಶ ತಪ್ಪಿ ಹೋಗಿದ್ದರೂ ಆಕೆಯ ಜೀವ ಉಳಿಯಿತು, ಅದಕ್ಕೆ ನಾರಾಯಣ ಹೆಲ್ತ್ ಸಿಟಿಯ ಡಾ. ಪ್ರಸಾದ್ ಅವರ ಬದ್ಧತೆ ಮತ್ತು ಪರಿಣಿತಿ ಕಾರಣವಾಗಿದೆ. ಈ ಘಟನೆಯು ತುರ್ತು ಸಂದರ್ಭದಲ್ಲಿ ಸಿಪಿಆರ್ ವಹಿಸುವ ಪ್ರಮುಖ ಪಾತ್ರಕ್ಕೆ ರಿಮೈಂಡರ್ ಆಗಿದ್ದು ವಿಸ್ತಾರ ಜ್ಞಾನ ಮತ್ತುಜೀವ ಉಳಿಸುವ ತಂತ್ರಗಳ ಲಭ್ಯತೆಯ ಪ್ರಾಮುಖ್ಯತೆಯನ್ನು ಎತ್ತಿ ತೋರಿಸಿದೆ.ನಾರಾಯಣ ಹೆಲ್ತ್ ಸಿಟಿಯು ಅಸಾಧಾರಣ ವೈದ್ಯಕೀಯ ಆರೈಕೆಯ ಬದ್ಧತೆಯನ್ನು ಮರು ದೃಢೀಕರಿಸುತ್ತದೆ ಮತ್ತುಡಾ.ಪ್ರಸಾದ್ ಅವರನ್ನು ಸಂಕಷ್ಟದ ಸಮಯದಲ್ಲಿ ಅವರ ತಕ್ಷಣದ ನೆರವಿಗೆ ಪ್ರಶಂಸಿಸುತ್ತದೆ.

## ಮೇ 7 ರಂದು 2 ನೇ ಹಂತದ ಮತದಾನ: ಈ ಜಿಲ್ಲೆಗಳಲ್ಲಿ ಸರ್ಕಾರಿ ರಜೆ ಘೋಷಣೆ!

**ಬೆಂಗಳೂರು:** ರಾಜ್ಯದಲ್ಲಿ ಮೊದಲ ಹಂತದ ಮತದಾನ ಯಶಸ್ವಿಯಾಗಿ ನಡೆದ ಬೆನ್ನಲ್ಲೇ ಎರಡನೇ ಹಂತದ ಮತದಾನಕ್ಕೆ ಸಿದ್ಧತೆ ನಡೆಸಲಾಗಿದೆ. ಕರ್ನಾಟಕ ಸೇರಿ 13 ರಾಜ್ಯಗಳ 89 ಕ್ಷೇತ್ರಗಳಲ್ಲಿ ಮತದಾರರು ಮತ ಚಲಾಯಿಸಲಿದ್ದಾರೆ. ಕರ್ನಾಟಕದಲ್ಲಿಯೂ ಲೋಕಸಭೆ ಚುನಾವಣೆಯ ಮೊದಲ ಹಂತದ ಮತದಾನ ಪ್ರಕ್ರಿಯೆ ಇಂದು ಅಂತ್ಯಗೊಂಡಿದ್ದು, ಎರಡನೇ ಹಂತದ ಮತದಾನ ಪ್ರಕ್ರಿಯೇ ಮುಂದಿನ ತಿಂಗಳು ಅಂದರೆ ಮೇ 7 ರಂದು ನಡೆಯಲಿದೆ. ಇದಕ್ಕಾಗಿ ಚುನಾವಣಾ ಆಯೋಗ ಸಿದ್ಧತೆ ನಡೆಸುತ್ತಲೇ ಇದೆ. ರಾಜ್ಯದಲ್ಲಿ ಎರಡನೇ ಹಂತದ ಲೋಕಸಭಾ ಚುನಾವಣೆ ಹಿನ್ನಲೆ. ಇದೀಗ ಮತದಾನದ ದಿನದಂದು ಸಾರ್ವತ್ರಿಕ ರಜೆ ಘೋಷಿಸಲು ಆದೇಶ ಹೊರಡಿಸಲಾಗಿದೆ. ರಾಜ್ಯದಲ್ಲಿ ಮೇ 7 ರಂದು ಲೋಕಸಭೆ ಚುನಾವಣೆ 14 ಕ್ಷೇತ್ರಗಳಲ್ಲಿ ನಡೆಯಲಿದೆ. ಇದರಲ್ಲಿ ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ಬಿಜಾಪುರ, ಗುಲ್ಬರ್ಗಾ, ರಾಯಚೂರು, ಬೀದರ್, ಕೊಪ್ಪಳ. ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರಕನ್ನಡ, ದಾವಣಗೆರೆ, ಶಿವಮೊಗ್ಗ ಜಿಲ್ಲೆಗಳು ಸೇರಿವೆ. ಈ ಮಧ್ಯೆ ರಾಜ್ಯದ ಎರಡನೇ ಹಂತದ ಮತದಾನ ರಾಯಚೂರಿನಲ್ಲೂ ನಡೆಯಲಿದ್ದು, ಈ ಹಿನ್ನಲೆ ಮತದಾನದ ದಿನದಂದು ಸಾರ್ವತ್ರಿಕ ರಜೆ ಘೋಷಿಸಿಲು ಆದೇಶ ಹೊರಡಿಸಿದ್ದು, ಈ ಬಗ್ಗೆ ರಾಯಚೂರು ಜಿಲ್ಲಾಧಿಕಾರಿ ಚಂದ್ರಶೇಖರ ನಾಯಕ್ ರಜೆ ನೀಡುವಂತೆ ಆದೇಶ ನೀಡಿದ್ದಾರೆ. ಈ ಆದೇಶದ ಅನ್ವಯ ಮೇ 07 ರಂದು ವೇತನ ಸಹಿತ ರಜೆ ನೀಡುವಂತೆ ಡಿಸಿ ಹೇಳಿದ್ದಾರೆ.

## ಮತಯಂತ್ರದೊಂದಿಗೆ ಮತಗಟ್ಟೆ ಅಧಿಕಾರಿ ನಾಪತ್ತೆ

**ರಾಮನಗರ:** ಮತದಾನ ಮುಗಿದ ಬಳಿಕ ಮತಯಂತ್ರವನ್ನು ಕಾರಿನಲ್ಲಿ ತೆಗೆದುಕೊಂಡು ಹೋದ ಮತಗಟ್ಟೆ ಅಧಿಕಾರಿ ನಾಪತ್ತೆಯಾಗಿ ಗಂಟೆಗಳ ಬಳಿಕ ಪ್ರತ್ಯಕ್ಷವಾಗಿರುವುದು ಹಲವು ಅನುಮಾನುಗಳಿಗೆ ದಾರಿ ಮಾಡಿಕೊಟ್ಟಿದೆ. ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ರಾಂಪುರ ಗ್ರಾಮದ ಮತಗಟ್ಟೆ ಸಂಖ್ಯೆ 46ರಲ್ಲಿ ಸಂಜೆ 6 ಗಂಟೆ ವೇಳೆಗೆ ಮತದಾನ ಮುಕ್ತಾಯಗೊಂಡಿತು.

ಆದರೆ ಗ್ರಾಮದ ಮತಗಟ್ಟೆಯ ಬಳಿ ಬಸ್ ಹೋಗುವುದಕ್ಕೆ ಸಾಧ್ಯವಿಲ್ಲದ ಕಾರಣ ಜೀಪಿನ ಮೂಲಕ ಮತಯಂತ್ರವನ್ನು ತಂದು ಗ್ರಾಮದ ಮುಂಭಾಗ ಬಸ್ಗೆ ತಲುಪಿಸುವ ವ್ಯವಸ್ಥೆ ಮಾಡಲಾಗಿತ್ತು. ಮತದಾನ ಮುಗಿಯುತ್ತಿದ್ದಂತೆ ಮತಗಟ್ಟೆ ಸಂಖ್ಯೆ 46ರ ಸಿಬ್ಬಂದಿ ಪೊಲೀಸರನ್ನು ಕರೆದುಕೊಳ್ಳದೆ ಏಕಾಏಕಿ ಮತಯಂತ್ರ ತೆಗೆದುಕೊಂಡು ಅಲ್ಲಿಂದ ಜೀಪಿನಲ್ಲಿ ಹೊರಟಿದ್ದಾರೆ. ಆದರೆ, ಅವರು ಮತಯಂತ್ರವನ್ನು ಬಸ್ಸಿಗೆ ತಲುಪಿಸದೇ ನಾಪತ್ತೆಯಾಗಿದ್ದರು. ಇದರಿಂದ ಅನುಮಾನಗೊಂಡ ಗ್ರಾಮಸ್ಥರು ಈ ಬಗ್ಗೆ ಪ್ರಶ್ನೆ ಮಾಡಿದಾಗ, ಸ್ಥಳೀಯ ಸಿಬ್ಬಂದಿ ಅವರಿಗೆ ಕರೆ ಮಾಡಿದ್ದಾರೆ. ಆದರೆ, ಆ ಅಧಿಕಾರಿ ದೂರವಾಣಿ ಕರೆ ಸ್ವೀಕರಿಸದ ಕಾರಣ ಗ್ರಾಮಸ್ಥರು ಮತ್ತಷ್ಟು ಅನುಮಾನಗೊಂಡಿದ್ದಾರೆ. ಕೊನೆಗೆ ತಡವಾಗಿ ಗ್ರಾಮದ ಬಸ್ ಬಳಿಗೆ ಮತಯಂತ್ರದೊಂದಿಗೆ ಅಧಿಕಾರಿ



ಬಂದಿದ್ದಾರೆ.

ಈ ವೇಳೆ ಗ್ರಾಮಸ್ಥರು ಅಧಿಕಾರಿ ಮೇಲೆ ಅನುಮಾನ ವ್ಯಕ್ತಪಡಿಸಿ ನಾವು ಮತಯಂತ್ರ ತೆಗೆದುಕೊಂಡು ಹೋಗಲು ಬಿಡುವುದಿಲ್ಲ ಎಂದು ಪಟ್ಟು ಹಿಡಿದು ಬಸ್ ಅಡ್ಡಹಾಕಿ ಪ್ರತಿಭಟನೆ ನಡೆಸಿದರು. ಗ್ರಾಮಸ್ಥರು ಪ್ರತಿಭಟನೆಗೆ ಮುಂದಾಗುತ್ತಿದ್ದಂತೆ ಸ್ಥಳಕ್ಕಾಗಮಿಸಿದ ತಹಸೀಲ್ದಾರ್, ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಯಾವುದೇ ನಿಯಮ ಉಲ್ಲಂಘನೆಯಾಗಿಲ್ಲ. ಮತಯಂತ್ರವನ್ನು ಸ್ಟ್ರಾಂಗ್ ರೂಂಗೆ ಕಳುಹಿಸಿಕೊಡಲಾಗುವುದು ಎಂದರು. ಆದರೂ, ಪ್ರತಿಭಟನೆ ತೀವ್ರಗೊಂಡಾಗ ಪೊಲೀಸರು ಲಾಠಿ ಚಾರ್ಜ್ ಮಾಡಿ ಪರಿಸ್ಥಿತಿ ನಿಯಂತ್ರಿಸಿದರು. ಬಳಿಕ ಮತಯಂತ್ರವನ್ನು ಸ್ಟ್ರಾಂಗ್ ರೂಂಗೆ ಕಳುಹಿಸಿಕೊಡಲಾಯಿತು.

# ಅಭ್ಯರ್ಥಿಗಳ ಭವಿಷ್ಯ ಸ್ಟ್ರಾಂಗ್ ರೂಂನಲ್ಲಿ ಭದ್ರ



**ಚಾಮರಾಜನಗರ:** ಚಾಮರಾಜನಗರ ಮೀಸಲು ಲೋಕಸಭಾ ಚುನಾವಣೆಗೆ ಮತದಾನ ಮುಕ್ತಾಯಗೊಂಡಿದ್ದು ಚಾಮರಾಜನಗರದ ಹೊರವಲಯದ ಬೇಡರಪುರ ಬಳಿ ಇರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಮತಯಂತ್ರಗಳು ಸ್ಟ್ರಾಂಗ್ ರೂಂನಲ್ಲಿ ಭದ್ರವಾಗಿವೆ.

ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಚಾಮರಾಜನಗರ ಜಿಲ್ಲೆಯ ಚಾಮರಾಜನಗರ, ಕೊಳ್ಳೇಗಾ ಲ, ಗುಂಡ್ಲುಪೇಟೆ, ಹನೂರು ವಿಧಾನಸಭಾ ಕ್ಷೇತ್ರ ಹಾಗೂ ಮೈಸೂರು ಜಿಲ್ಲೆಗೆ ಬರುವ ಎಚ್.ಡಿ.ಕೋಟೆ, ವರುಣಾ, ನಂಜನಗೂಡು, ಟಿ.ನರಸೀಪುರ ಕ್ಷೇತ್ರಗಳ ಮತಯಂತ್ರಗಳನ್ನು ಮತದಾನ ಮುಗಿದ ಬಳಿಕ ಬೇಡರಪುರ ಬಳಿ ಇರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿರುವ ಮಸ್ಟರಿಂಗ್ ಕೇಂದ್ರದ ಸ್ಟ್ರಾಂಗ್ ರೂಂನಲ್ಲಿ ಇರಿಸಲಾಗಿದ್ದು ಬಿಗಿ ಪೊಲೀಸ್ ಭದ್ರತೆ ಒದಗಿಸಲಾಗಿದೆ.

ಜೂ.4 ರಂದು ಮತ ಎಣಿಕೆ ನಡೆಯಲಿದ್ದು ಈಗಾಗಲೇ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದ್ದು ಇಂಜಿನಿಯರಿಂಗ್ ಕಾಲೇಜಿನ ಮೈಸೂರು, ಚಾಮರಾಜನಗರ ಮುಖ್ಯರಸ್ತೆಯ ಮುಖ್ಯಗೇಟ್ ಬಳಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಿದ್ದು ಸ್ಟ್ರಾಂಗ್ ರೂಂ ಬಳಿಯೂ ಬಂದೋಬಸ್ತ್ ಮಾಡಿದೆ. ಅಲ್ಲದೆ ಸಿಸಿ ಕ್ಯಾಮರಾಗಳನ್ನು ಅಳವಡಿಸಿ ಭದ್ರತೆ ಒದಗಿಸಲಾಗಿದ್ದು ಸ್ಟ್ರಾಂಗ್ ರೂಂಗೆ ಮುದ್ರೆ ಹಾಕಲಾಗಿದೆ. ಮತ ಎಣಿಕೆಯಂದು ಸ್ಟ್ರಾಂಗ್ ರೂಂ ತೆರೆಯಲಾಗುತ್ತದೆ.

ಚುನಾವಣೆಗೆ ಸ್ಪರ್ಧಿಸಿದ್ದ 14 ಅಭ್ಯರ್ಥಿಗಳ ಭವಿಷ್ಯ ಮತಯಂತ್ರದಲ್ಲಿ ಅಡಗಿದ್ದು ಇವಿಎಂ, ಮತಪತ್ರ, ಅಂಚೆ ಮತಪತ್ರಗಳನ್ನು ಒಳಗೊಂಡ ಮತ ಪೆಟ್ಟಿಗೆಗಳು, ವಿವಿ ಪ್ಯಾಟ್ಗಳು ಹಾಗೂ ಚುನಾವಣಾ ದಾಖಲೆಗಳನ್ನು ಪೊಲೀಸ್ ಬಿಗಿ ಭದ್ರತೆಯಲ್ಲಿ ಇರಿಸಲಾಗಿದೆ.

## ರಿಲ್ಯಾಕ್ಸ್ ಮೂಡ್‌ಗೆ ಅಭ್ಯರ್ಥಿಗಳು

**ಲೋಕಸಭಾ ಚುನಾವಣೆ ಘೋಷಣೆಯಾದಾಗಿನಿಂದ ನಿರಂತರವಾಗಿ ಚುನಾವಣಾ ಪ್ರಚಾರದಲ್ಲಿ ತೊಡಗಿದ್ದ ಕಾಂಗ್ರೆಸ್, ಬಿಜೆಪಿ, ಬಿಎಸ್ಪಿ ಸೇರಿದಂತೆ ಇತರೆ ಹಲವು ಪಕ್ಷಗಳ ಅಭ್ಯರ್ಥಿಗಳು ಮತದಾನ ಮುಗಿದ ಬಳಿಕ ರಿಲ್ಯಾಕ್ಸ್ ಮೂಡ್ ಜಾರಿದರು. ಹಲವು ಅಭ್ಯರ್ಥಿಗಳು ತಮ್ಮ ಮನೆಗಳಲ್ಲಿಯೇ ತಮ್ಮ ಕುಟುಂಬದವರ ಜೊತೆ ಕಾಲ ಕಳೆದರು. ಅಲ್ಲದೆ ಮನೆಗೆ ಬಂದ ತಮ್ಮ ಪಕ್ಷದ ಮುಖಂಡರು, ಕಾರ್ಯಕರ್ತರೊಂದಿಗೆ ಸೋಲು, ಗೆಲುವು, ಮತದಾನ ಪ್ರಕ್ರಿಯೆ ಕುರಿತು ಚರ್ಚಿಸಿದರು.**



ಮತದಾನ

ಚಾಮರಾಜನಗರ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ಮುಖ್ಯ ಸಂಚಾಲಕಿ ಹಾಗೂ ಸ್ವಾಮಿ ವಿವೇಕಾನಂದ ರಾಜ್ಯ ಸದ್ಭಾವನಾ ಪ್ರಶಸ್ತಿ ಪುರಸ್ಕೃತರಾದ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ ಹಾಗೂ ಬಿಕೆ ಮತೀಜೀ ಮತದಾನ ಮಾಡಿ ಸಂಭ್ರಮಿಸಿದರು

# ಇಂಡಿಗನತ್ತ ಮೆಂದಾರೆ ಮತಗಟ್ಟೆ ಧ್ವಂಸ ವಿಚಾರಣೆ

**ಚಾಮರಾಜನಗರ/ಹನೂರು.** ಮಹದೇಶ್ವರ ಬೆಟ್ಟ ಸಮೀಪದ ಇಂಡಿಗನತ್ತ ಮೆಂದಾರೆ ಮತಗಟ್ಟೆ ಧ್ವಂಸ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹದೇಶ್ವರ ಬೆಟ್ಟ ಪೊಲೀಸರು ಇದೂವರೆಗೂ ಮಹಿಳೆಯರು ಸೇರಿದಂತೆ ಒಟ್ಟು 40 ಕ್ಕೂ ಹೆಚ್ಚು ಮಂದಿಯನ್ನು ವಶಕ್ಕೆ ತೆಗೆದುಕೊಂಡು ವಿಚಾರಣೆ ನಡೆಸುತ್ತಿದ್ದಾರೆ.

ಮತದಾನ ದಿನದಂದು ಮಹದೇಶ್ವರ ಬೆಟ್ಟ ಗ್ರಾಮ ಪಂಚಾಯ್ತಿ ಪರಿಮಿತಿಯ ಇಂಡಿಗನತ್ತ ಮೆಂದಾರೆ ಮತಗಟ್ಟೆ 146 ರಲ್ಲಿ ಮತದಾರರು ಮೂಲಭೂತ ಸೌಕರ್ಯಕ್ಕಾಗಿ ಮತದಾನ ಬಹಿಷ್ಕಾರ ಮಾಡಿದ್ದರು. ಈ ನಡುವೆ ಅಧಿಕಾರಿಗಳು ಮತಚಲಾಯಿಸುವಂತೆ ಮನವೊಲಿಕೆ ಮಾಡಿದ ಯತ್ನ ವಿಫಲವಾದಾಗ ಕೆಲವರು ಮತಚಲಾಯಿಸಲು ತೆರಳಿದರು. ಇದರಿಂದ ಕಂಗಲಾದ ಗ್ರಾಮಸ್ಥರು ಮತಗಟ್ಟೆಗೆನುಗ್ಗಿ ಮತಯಂತ್ರ ಧ್ವಂಸ ಮಾಡಿದ್ದಲ್ಲದೆ, ಸಿಬ್ಬಂದಿಗಳ ಮೇಲೆ ಹಲ್ಲೆ ನಡೆಸಿ ಹತ್ಯೆ ಮಾಡಲು ಬಂದಿದ್ದರು ಎಂದು ಗ್ರಾಮಸ್ಥರ ಮೇಲೆ ಮಹದೇಶ್ವರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾದ ಹಿನ್ನಲೆಯಲ್ಲಿ ಸುಮಾರು 40 ಮಂದಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಮತಗಟ್ಟೆ ಮೇಲೆ ದಾಳಿ ಧ್ವಂಸ ಪ್ರಕರಣದಲ್ಲಿ ತಹಸೀಲ್ದಾರ್ ಗುರುಪ್ರಸಾದ್, ಪೊಲೀಸ್ ಇನ್ಸ್ ಪೆಕ್ಟರ್ ಜಗದೀಶ್, ಮತಗಟ್ಟೆ ಅಧಿಕಾರಿ ಬಸವಣ್ಣ, ಗ್ರಾಮಲೆಕ್ಕಿಗ ವಿನೋದ್, ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಕಿರಣ್ ಕುಮಾರ್ ಸೇರಿದಂತೆ 15 ಮಂದಿ ಸರ್ಕಾರಿ ನೌಕರರ ಮೇಲೆ ಹಲ್ಲೆ ನಡೆದಿದ್ದು, ತಹಸೀಲ್ದಾರ್ ಹಾಗೂ ಚುನಾವಣಾಧಿಕಾರಿಗಳು ಪ್ರತ್ಯೇಕ ದೂರು ದಾಖಲಿಸಿ, ಸುಮಾರು 300 ಮಂದಿಯ ಮೇಲೆ ಪ್ರಕರಣ ದಾಖಲು ಮಾಡಿಸಿದ್ದಾರೆ. ಭಾರತೀಯ ದಂಡ ಸಂಹಿತೆ ಕಲಂ: 143,147,148,341,342,324 353, 332,307,354,427436,447 ರೆವಿ149 ಐಪಿಸಿ ದಾಖಲಾಗಿದೆ. ಈ ನಡುವೆ ಶನಿವಾರ ಇಂಡಿಗನತ್ತ ಗ್ರಾಮಕ್ಕೆ ಜಿಲ್ಲಾ ಪರಿಶಿಷ್ಟ ವರ್ಗ ಕಲ್ಯಾಣಾಧಿಕಾರಿ ಮಂಜುಳಾ ಮತ್ತು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳು ಭೇಟಿ ನೀಡಿ, ಗ್ರಾಮಸ್ಥರಿಗೆ ಆತ್ಮಸ್ಥೈರ್ಯ ತುಂಬಿ, ರಕ್ಷಣೆಗೆ ಇಲಾಖೆ ಕಟಿಬದ್ಧವಾಗಿದೆ ಎಂದು ಹೇಳಿ ಗ್ರಾಮಸ್ಥರಿಂದ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ದೂರು ಕೊಡಿಸಲಾಗುತ್ತಿದೆ. ಇದರ ನಡುವೆ ಸೋಲಿಗ ಸಮುದಾಯದವರು ಮಹದೇಶ್ವರ ಬೆಟ್ಟದ ಮುಂದೆ ಪ್ರತಿಭಟನೆ ನಡೆಸಿ ಅಮಾಯಕ ಗುಡ್ಡಗಾಡು ಜನರ ಮೇಲೆ ಪ್ರಕರಣ ದಾಖಲು ಮಾಡಿ ಕಿರುಕುಳ ನೀಡಲಾಗುತ್ತಿದೆ ಎಂದು ಆರೋಪಿಸಿ ಧರಣಿ ನಡೆಸಿದರು. ಪ್ರಕರಣ ನಡೆದು 24 ಗಂಟೆಯಾದ ಬಳಿಕ ಇಂಡಿಗನತ್ತ ಮೆಂದಾರೆ ಗ್ರಾಮದಲ್ಲಿ ಪುರುಷರೆಲ್ಲರೂ ತಲೆ ಮರೆಸಿಕೊಂಡಿದ್ದರೆ ಮನೆಯ ಮುಂದೆ ಕುಳಿತ್ತಿರುವ ಮಹಿಳೆಯರನ್ನು ಪೊಲೀಸರು ವಿಚಾರಣೆಯ ನೆಪದಲ್ಲಿ ವಶಕ್ಕೆ ಪಡೆದುಕೊಂಡಿದ್ದಾರೆ. ಇಂಡಿಗನತ್ತ ಮೆಂದಾರೆ ಇದೀಗ ಅಕ್ಷರಶಃ ಜನರಿಲ್ಲದೆ ಬಿಕೋ ಎನ್ನುತ್ತಿದೆ.

ಅಂತಿಮ ಮತದಾನದ ವಿವರ

# ಚಾ.ನಗರ ಶೇ 76.81 ಮತದಾನ

**ಚಾಮರಾಜನಗರ:** ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ 22-ಚಾಮರಾಜನಗರ (ಪ.ಜಾ) ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಶೇ.76.81 ರಷ್ಟು ಮತದಾನವಾಗಿದ್ದು, ಅಂತಿಮ ಮತದಾನ ವಿವರ ಇಂತಿದೆ.

ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 8,78,702 ಪುರುಷರು, 8,99,501 ಮಹಿಳೆಯರು, 107 ಇತರರು ಸೇರಿದಂತೆ ಒಟ್ಟು 17,78,310 ಮತದಾರರಿದ್ದಾರೆ. ಈ ಪೈಕಿ 6,82,961 ಪುರುಷರು, 6,82,952 ಮಹಿಳೆಯರು, 31 ಇತರೆ ಮಂದಿ ಸೇರಿದಂತೆ ಒಟ್ಟು 13,65,944 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ.

ಹೆಚ್.ಡಿ. ಕೋಟೆ ವಿಧಾನಸಭಾ ಕ್ಷೇತ್ರದಲ್ಲಿ 1,14,041 ಪುರುಷರು, 1,14,560 ಮಹಿಳೆಯರು, 12 ಇತರರು ಸೇರಿದಂತೆ ಒಟ್ಟು 2,28,613 ಮತದಾರರಿದ್ದಾರೆ. ಇವರಲ್ಲಿ 88,146 ಪುರುಷರು, 87,738 ಮಹಿಳೆಯರು, 7 ಮಂದಿ ಇತರರು ಸೇರಿದಂತೆ ಒಟ್ಟು 1,75,891 ಮತದಾರರು ಮತದಾನ ಮಾಡಿದ್ದಾರೆ.

ನಂಜನಗೂಡು ವಿಧಾನಸಭಾ ಕ್ಷೇತ್ರದಲ್ಲಿ 1,10,369 ಪುರುಷರು, 1,12,381 ಮಹಿಳೆಯರು, 7 ಇತರರು ಸೇರಿದಂತೆ ಒಟ್ಟು 2,22,757 ಮತದಾರರಿದ್ದಾರೆ. ಈ ಪೈಕಿ 86,450 ಪುರುಷರು, 85,112 ಮಹಿಳೆಯರು, 3 ಮಂದಿ ಇತರರು ಸೇರಿದಂತೆ ಒಟ್ಟು 1,71,565 ಮತದಾರರು ಮತ ಚಲಾಯಿಸಿದ್ದಾರೆ.

ವರುಣ ವಿಧಾನಸಭಾ ಕ್ಷೇತ್ರದಲ್ಲಿ 1,19,545 ಪುರುಷರು, 1,21,391 ಮಹಿಳೆಯರು, 13 ಇತರರು ಸೇರಿದಂತೆ ಒಟ್ಟು 2,40,949 ಮತದಾರರಿದ್ದಾರೆ. ಇವರಲ್ಲಿ 95,228 ಪುರುಷರು, 93,806 ಮಹಿಳೆಯರು, 6 ಇತರರು ಸೇರಿದಂತೆ ಒಟ್ಟು 1,89,040 ಮತದಾರರು ಮತ ಚಲಾಯಿಸಿದ್ದಾರೆ.

ಟಿ.ನರಸೀಪುರ ವಿಧಾನಸಭಾ ಕ್ಷೇತ್ರದಲ್ಲಿ 1,03,121 ಪುರುಷರು, 1,06,413 ಮಹಿಳೆಯರು, 13 ಇತರರು ಸೇರಿದಂತೆ ಒಟ್ಟು 2,09,547 ಮತದಾರರಿದ್ದಾರೆ. ಇವರಲ್ಲಿ



77,851 ಪುರುಷರು, 78,061 ಮಹಿಳೆಯರು, 1 ಇತರರು ಸೇರಿದಂತೆ ಒಟ್ಟು 1,55,913 ಮತದಾರರು ಮತ ಚಲಾಯಿಸಿದ್ದಾರೆ. ಹನೂರು ವಿಧಾನಸಭಾ ಕ್ಷೇತ್ರದಲ್ಲಿ 1,12,880 ಪುರುಷರು, 1,11,793 ಮಹಿಳೆಯರು, 10 ಇತರರು ಸೇರಿದಂತೆ ಒಟ್ಟು 2,24,683 ಮತದಾರರಿದ್ದಾರೆ. ಇವರಲ್ಲಿ 80,972 ಪುರುಷರು, 80669 ಮಹಿಳೆಯರು, 3 ಇತರರು ಸೇರಿದಂತೆ ಒಟ್ಟು 1,61,644 ಮತದಾರರು ಮತ ಚಲಾಯಿಸಿದ್ದಾರೆ.

ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದಲ್ಲಿ 1,08,056 ಪುರುಷರು, 1,11,988 ಮಹಿಳೆಯರು, 21 ಇತರರು ಸೇರಿದಂತೆ ಒಟ್ಟು 2,20,065 ಮತದಾರರಿದ್ದಾರೆ. ಇವರಲ್ಲಿ 81,512 ಪುರುಷರು, 82,279 ಮಹಿಳೆಯರು, 8 ಇತರರು ಸೇರಿದಂತೆ ಒಟ್ಟು 1,63,799 ಮತದಾರರು ಮತ ಚಲಾಯಿಸಿದ್ದಾರೆ. ಚಾಮರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ 1,04,903 ಪುರುಷರು, 1,10,517 ಮಹಿಳೆಯರು, 15 ಇತರರು ಸೇರಿದಂತೆ ಒಟ್ಟು 2,15,435 ಮತದಾರರಿದ್ದಾರೆ. ಇವರಲ್ಲಿ 84,293 ಪುರುಷರು, 85,701 ಮಹಿಳೆಯರು, 1 ಇತರರು ಸೇರಿದಂತೆ ಒಟ್ಟು 1,69,995 ಮತದಾರರು ಮತ ಚಲಾಯಿಸಿದ್ದಾರೆ.

ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದಲ್ಲಿ 1,05,787 ಪುರುಷರು, 1,10,458 ಮಹಿಳೆಯರು, 16 ಇತರರು ಸೇರಿದಂತೆ ಒಟ್ಟು 2,16,261 ಮತದಾರರಿದ್ದಾರೆ. ಇವರಲ್ಲಿ 88,509 ಪುರುಷರು, 89,586 ಮಹಿಳೆಯರು, 2 ಇತರರು ಸೇರಿದಂತೆ ಒಟ್ಟು 1,78,097 ಮತದಾರರು ಮತ ಚಲಾಯಿಸಿದ್ದಾರೆ ಎಂದು 22-ಚಾಮರಾಜನಗರ (ಪ.ಜಾ) ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕೋಲಾರ ಲೋಕಸಭಾ ಚುನಾವಣೆಗೆ ರಾಜ್ಯದಲ್ಲಿ ಇಂದು ಮೊದಲ ಹಂತದ ಮತದಾನದ ಸಂದರ್ಭದಲ್ಲಿ ಮೈತ್ರಿ ಅಭ್ಯರ್ಥಿ ಮಲ್ಲೇಶ್ ಬಾಬು ಸ್ವಗ್ರಾಮ ಕುಂಬಾರಳ್ಳಿಯಲ್ಲಿ ಮತ ಚಲಾಯಿಸಿದರು.

## ಚೌಡೇಶ್ವರಿ ದೇವಾಲಯ ಜಾತ್ರಾ ಮಹೋತ್ಸವ ಪ್ರಾರಂಭ

**ತಿಪಟೂರು :** ತಿಪಟೂರು ತಾಲ್ಲೂಕಿನ ದಸರೀಘಟ್ಟ ಗ್ರಾಮದ ಆದಿಚುಂಚನಗಿರಿ ಶಾಖಾಮಠದ ಚೌಡೇಶ್ವರಿ ದೇವಸ್ಥಾನದ ಜಾತ್ರಾ ಮಹೋತ್ಸವವು ಏ.28 ರ ಭಾನುವಾರದಿಂದ ಪ್ರಾರಂಭವಾಗಲಿದೆ ಎಂದು ದೇವಾಲಯದ ಚಂದ್ರಶೇಖರನಾಥ ಸ್ವಾಮೀಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಏ.28 ರಂದು ಬೆಳಿಗ್ಗೆ 6 ಗಂಟೆಗೆ ಅಮ್ಮನವರಿಗೆ ಅಭಿಷೇಕ, ಸಹಸ್ರನಾಮ ಅರ್ಚನೆ, ಪೂಜೆ, ಮಹಾಮಂಗಳಾರತಿ, ರಾತ್ರಿ 9ಕ್ಕೆ ಕಳಸ ಸ್ಥಾಪನೆ, ಪ್ರಥಮ ಶಾಸ್ತ್ರ ನಡೆಯಲಿದೆ. ಏ.29 ಸೋಮವಾರ ಅಭಿಷೇಕ, ಸಹಸ್ರನಾಮ ಅರ್ಚನೆ, ಪೂಜೆ, ಮಹಾಮಂಗಳಾರತಿ, ಏ.30ರ ಮಂಗಳವಾರ ಅಭಿಷೇಕ, ಮಧ್ಯಾಹ್ನ 10.30ಕ್ಕೆ ರಥಕ್ಕೆ ಕಳಸ ಸ್ಥಾಪನೆ, ರಾತ್ರಿ 7 ಗಂಟೆಗೆ ಚೌಡೇಶ್ವರಿ ಅಮ್ಮನ ಉತ್ಸವ, ಮೇ.1 ರಂದು ಗ್ರಾಮದ ರಾಜಬೀದಿಗಳಲ್ಲಿ ಚೌಡೇಶ್ವರಿ ಅಮ್ಮನ ಕುದುರೆ ಉತ್ಸವ, ರಾತ್ರಿ 8 ಕ್ಕೆ ಚೌಡೇಶ್ವರಿ ಅಮ್ಮನವರ ಮಹಾರಥೋತ್ಸವ ನೆರವೇರಲಿದ್ದು, ನಂತರ ಸಾಂಸ್ಕೃತಿಕ ಕಾರ್ಯಕ್ರಮ ಭರತನಾಟ್ಯ ನಡೆಯಲಿದೆ. ಮೇ.2 ರಂದು ಸಂಜೆ ಅಮ್ಮನವರ ಸಿಡಿ ಮಹೋತ್ಸವ ನೆರವೇರಲಿದೆ ಎಂದು ತಿಳಿಸಿದ್ದಾರೆ.



## ಇಂದು ಕುರುಕ್ಷೇತ್ರ ನಾಟಕ ಪ್ರದರ್ಶನ

**ವಿಜಯಪುರ:** ಹೋಬಳಿಯ ಹುರುಳುಗುರ್ಕಿ ಗ್ರಾಮದಲ್ಲಿ ಏಪ್ರಿಲ್ 28ರ ಭಾನುವಾರ ರಾತ್ರಿ 9:00 ಕ್ಕೆ ಶ್ರೀರಂಗನಾಥ ಸ್ವಾಮಿ ಕೃಪಾಪೋಷಿತ ನಾಟಕ ಮಂಡಳಿ ವತಿಯಿಂದ ಕುರುಕ್ಷೇತ್ರ ಅಥವಾ ಶ್ರೀ ಕೃಷ್ಣ ಸಂಧಾನ ನಾಟಕವನ್ನು ಏರ್ಪಡಿಸಲಾಗಿದೆ ಎಂದು ವೆಂಕಟಗಿರಿಕೋಟೆ ಗ್ರಾಮ ಪಂಚಾಯಿತಿ ಸದಸ್ಯರಾದ ಹುರಳುಗುರ್ಕಿ ಎಚ್. ಶ್ರೀನಿವಾಸ್ ತಿಳಿಸಿದರು. ಶ್ರೀನಿವಾಸ್ ರವರು ಮಾತನಾಡುತ್ತಾ, ಮಾತಿಗೆ ಬೆಲೆ ಮನುಷ್ಯನಿಗೆ ಕಲೆ ಎನ್ನುವ ಹಾಗೆ ನಾಟಕ ಜೀವನ ಒಂದು ಕಲೆಯಾಗಿದ್ದು, ಹುರುಳುಗುರ್ಕಿ ಹಾಗೂ ಸುತ್ತಮುತ್ತಲ ಗ್ರಾಮಸ್ಥರು ನಾಟಕಕ್ಕೆ ಆಗಮಿಸುವ ಮೂಲಕ ಕಲಾವಿದರನ್ನು ಪ್ರೋತ್ಸಾಹಿಸಬೇಕೆಂದು ತಿಳಿಸಿದರು. ಕುರುಕ್ಷೇತ್ರ ನಾಟಕವನ್ನು ಮಾಜಿ ಸಚಿವ ಕೆ ಸುಧಾಕರ್ ರವರು ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಯಲಹಂಕ ಶಾಸಕರಾದ ಎಸ್ ಆರ್ ವಿಶ್ವನಾಥ್, ಮಾಜಿ ಶಾಸಕರುಗಳಾದ ನಿಸರ್ಗ ನಾರಾಯಣಸ್ವಾಮಿ, ಜಿ ಚಂದ್ರಣ್ಣ, ಪಿಳ್ಳ ಮುನಿಶ್ಯಾಮಪ್ಪ, ಆವತಿ ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಎಂ. ಶಾಂತ್ ಕುಮಾರ್ ಭಾಗವಹಿಸಲಿರುವರು.



### ಹಾರ್ಮೋನಿಯಂ ಸೋಲೋ ಕಾರ್ಯಕ್ರಮ

**ಮೈಸೂರು ಜಿಲ್ಲೆ ಕೇರ್ಗಳ್ಳಿ ನಿನಾದ ಗೃಹ ಸಂಗೀತ ಸರಣಿಯ 14ನೇ ಕಾರ್ಯಕ್ರಮದಲ್ಲಿ ಮುಂಬೈ ನ ಪಂ.ಸುಧೀರ್ ನಾಯಕ್ ಅವರು ಹಾರ್ಮೋನಿಯಂ ಸೋಲೋ ಕಾರ್ಯಕ್ರಮ ನಡೆಸಿಕೊಟ್ಟರು. ಅವರಿಗೆ ತಬಲಾದಲ್ಲಿ ಶ್ರೀ ವಿಘ್ನೇಶ್ ಕಾಮತ್, ಹಾರ್ಮೋನಿಯಂ ಸಂಗತ್ ನಲ್ಲಿ ಶ್ರೀ ಪ್ರಸಾದ್ ಕಾಮತ್, ಸ್ವರ ಮಂಡಲದಲ್ಲಿ ಶ್ರೀ ರಾಮ್ ಮೋಹನ್ ರಾವ್ ಸಹಕರಿಸಿದರು.**

# ಮರು ಮತದಾನ ನಡೆಸಲು ಚುನಾವಣಾ ಆಯೋಗ ತೀರ್ಮಾನ

**ಚಾಮರಾಜನಗರ:** ಶುಕ್ರವಾರ ನಡೆದ ಮತದಾನದ ಸಂದರ್ಭದಲ್ಲಿ ಘರ್ಷಣೆಯಿಂದಾಗಿ ಮತಗಟ್ಟೆ ಮೇಲೆ ಕಲ್ಲು ತೂರಾಟ, ಇವಿಎಂ ಹಾನಿಗೊಳಗಾದ ಹನೂರು ತಾಲ್ಲೂಕಿನ ಇಂಡಿಗನತ್ತ ಗ್ರಾಮದಲ್ಲಿ ಸೋಮವಾರ (ಏ.29) ಮರು ಮತದಾನ ನಡೆಸಲು ಚುನಾವಣಾ ಆಯೋಗ ತೀರ್ಮಾನಿಸಿದೆ.

ಬೆಳಿಗ್ಗೆ 7ರಿಂದ ಸಂಜೆ 6 ಗಂಟೆಯವರೆಗೆ ಮತದಾನ ನಡೆಯಲಿದೆ. ಈ ಮತಗಟ್ಟೆ ವ್ಯಾಪ್ತಿಯಲ್ಲಿ 528 ಮತದಾರರಿದ್ದಾರೆ. ಶುಕ್ರವಾರ ಇಲ್ಲಿ ಒಂಬತ್ತು ಮಂದಿಯಷ್ಟೇ ಮತದಾನ ಮಾಡಿದ್ದರು.

ಮತದಾನ ಬಹಿಷ್ಕಾರದ ವಿಚಾರದಲ್ಲಿ ಇಂಡಿಗನತ್ತ, ಮೆಂದಾರೆ ಗ್ರಾಮಸ್ಥರು ಹಾಗೂ ಪೊಲೀಸರ ನಡುವೆ ಉಂಟಾದ ಘರ್ಷಣೆ ಸಂದರ್ಭದಲ್ಲಿ ಉದ್ರಿಕ್ತರು, ಇಂಡಿಗನತ್ತ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ತೆರೆಯಲಾಗಿದ್ದ ಮತಗಟ್ಟೆಯ ಮೇಲೆ ಕಲ್ಲು ತೂರಾಟ ನಡೆಸಿದ್ದು ಮಾತ್ರವಲ್ಲದೇ ಒಳಗ್ಗೆ ನುಗ್ಗಿ ಇನ್ನಿತರ ಪರಿಕರಗಳನ್ನು ಕೆಳಕ್ಕೆ ಎಸೆದು ಹಾನಿ ಮಾಡಿದ್ದರು. ಇವಿಎಂಗೆ ಬೆಂಕಿ ಹಚ್ಚಲೂ ಯತ್ನಿಸಿದ್ದರು.

ಘಟನೆಗೆ ಸಂಬಂಧಿಸಿದಂತೆ ಜಿಲ್ಲಾ ಚುನಾವಣಾಧಿಕಾರಿ ಸಿ.ಟಿ. ಶಿಲ್ಪಾ ನಾಗ್ ಹಾಗೂ ಸಾಮಾನ್ಯ ವೀಕ್ಷಕ ಪಾರ್ಥ ಗುಪ್ತ ಅವರು ಚುನಾವಣಾ ಆಯೋಗಕ್ಕೆ ವರದಿ ಸಲ್ಲಿಸಿದ್ದರು. ಈ ವರದಿಯ ಆಧಾರದಲ್ಲಿ ಪ್ರಜಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 58 (2) ಮತ್ತು 58 ಎ(2) ಅಡಿಯಲ್ಲಿ ಮರು ಮತದಾನ ನಡೆಸಲು ತೀರ್ಮಾನಿಸಲಾಗಿದೆ ಎಂದು ಚುನಾವಣಾ ಆಯೋಗವು ರಾಜ್ಯ ಮುಖ್ಯ ಚುನಾವಣಾ ಅಧಿಕಾರಿಯವರಿಗೆ ಬರೆದಿರುವ ಪತ್ರದಲ್ಲಿ ತಿಳಿಸಿದೆ.



## 41 ಮಂದಿ ವಿರುದ್ಧ ಎಫ್ಐಆರ್

**ಈ ಮಧ್ಯೆ, ಶುಕ್ರವಾರ ನಡೆದ ಘರ್ಷಣೆಗೆ ಸಂಬಂಧಿಸಿದಂತೆ ಪೊಲೀಸರು 41 ಗ್ರಾಮಸ್ಥರು ಹಾಗೂ 250 ಇತರರ ವಿರುದ್ಧ ಎಫ್ಐಆರ್ ದಾಖಲಿಸಿದ್ದಾರೆ. ಗ್ರಾಮದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದ್ದು, ಶುಕ್ರವಾರ ತನಿಖಾಧಿಕಾರಿಗಳು ಸ್ಥಳ ಮಹಜರು ನಡೆಸಿದ್ದಾರೆ.**

# ಇಂದು ಮಹಿಳಾ ಸಂಘಂದ ಮಹಿಳಾ ದಿನಾಚರಣೆ

**ವಿಜಯಪುರ:** ಪಟ್ಟಣದ ಅಯೋಧ್ಯಾನಗರ ಶಿವಾಚಾರ ನಗರ್ತ ಮಹಿಳಾ ಸಂಘದ ವತಿಯಿಂದ ಏಪ್ರಿಲ್ 28ರ ಭಾನುವಾರದಂದು ಸಂಜೆ 4 ಗಂಟೆಗೆ ಶ್ರೀ ನಗರೇಶ್ವರ ಸ್ವಾಮಿ ಪ್ರಾರ್ಥನಾ ಮಂದಿರದಲ್ಲಿ ಅಕ್ಕಮಹಾದೇವಿ ಜಯಂತಿ ಹಾಗೂ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಏರ್ಪಡಿಸಲಾಗಿದೆ ಎಂದು ಸಂಘದ ಅಧ್ಯಕ್ಷರಾದ ಲೀಲಾ ವತಿ ರುದ್ರಮೂರ್ತಿ ರವರು ಪ್ರಕಟಣೆಯಲ್ಲಿ ತಿಳಿಸಿರುವರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಲೀಲಾ ವತಿ ರುದ್ರ ಮೂರ್ತಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಮಿಲೇನಿಯಂ ಶಾಲೆಯ ಸಂಸ್ಥಾಪಕ ಸದಸ್ಯರಾದ ರೂಪ ಶ್ರೀಧರ್ ಭಾಗವಹಿಸಲಿದ್ದು, ಕಾರ್ಯಕ್ರಮದಲ್ಲಿ ಕುಮಾರಿ ಅರ್ಪಿತಾ ದಿನೇಶ್ ರವರು ನಾಡಿ ಚಿಕಿತ್ಸೆಯ ಮಹತ್ವವನ್ನು ತಿಳಿಸಲಿರುವರು.

ವಿಜಯಪುರ ಪಟ್ಟಣದ ನಿವಾಸಿ ಕಳೆದ ಸಾಲಿನಲ್ಲಿ ದ್ವಿತೀಯ ಪಿಯುಸಿಯಲ್ಲಿ ರಾಜ್ಯಕ್ಕೆ ನಾಲ್ಕನೇ ರ್ಯಾಂಕ್ ಪಡೆದ ಪ್ರೇರಣನಾಗರಾಜ್ ವಿದ್ಯಾರ್ಥಿನಿಯನ್ನು ಅಭಿನಂದಿಸಲಿದ್ದು, ಜನಾಂಗದ ಮಹಿಳೆಯರಿಗಾಗಿ ಹಲವು ವಿಧದ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ ಎಂದು ತಿಳಿಸಿರುವರು

# 2025ರ ವೇಳೆಗೆ ಮಲೇರಿಯ ಸಂಪೂರ್ಣ ನಿವಾರಣೆ ಗುರಿ

**ವಿಜಯಪುರ:** ದೇಶದಲ್ಲಿ 2025ರ ವೇಳೆಗೆ ಮಲೇರಿಯ ಸಂಪೂರ್ಣ ನಿವಾರಣೆ ಗುರಿಯನ್ನು ಸಾಧಿಸುವ ಸಲುವಾಗಿ 2024ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಹೆಚ್ಚು ಸಮಾನತೆಯ ಜಗತ್ತಿಗೆ ಮಲೇರಿಯಾ ವಿರುದ್ಧ ಹೋರಾಟವನ್ನು ತೀವ್ರಗೊಳಿಸೋಣ ಎಂಬ ಘೋಷವಾಕ್ಯ ಬಿಡುಗಡೆಗೊಳಿಸಲಾಗಿದೆ ಎಂದು ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದ ವೈದ್ಯರಾದ ಡಾಕ್ಟರ್ ರಮ್ಯ ಶ್ರೀರವರು ತಿಳಿಸಿದರು.

ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಾರ್ವಜನಿಕರಲ್ಲಿ ಮಲೇರಿಯಾ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಏರ್ಪಡಿಸಿದ್ದ ವಿಶ್ವ ಮಲೇರಿಯಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು. ಅನಾಫಿಲಿಸ್ ಸೊಳ್ಳೆಗಳಿಂದ ಮಲೇರಿಯ ರೋಗ ಹರಡುತ್ತಿದ್ದು ಇದರಿಂದ ರಕ್ಷಣೆ ಪಡೆಯುವ ಸಲುವಾಗಿ ಪ್ರತಿಯೊಬ್ಬರು ಮಲಗುವಾಗ ಸೊಳ್ಳೆ ಪರದೆ ಬಳಸುವುದು ಒಳಾಂಗಣ ಕೀಟನಾಶಕ ಸಿಂಪರಣೆ ನಿಗದಿತವಾಗಿ ಮಾಡುವುದು ಲಾರ್ವಹಾರಿ ಮೀನುಗಳನ್ನು ಬಿಡುವುದು ಕಿಟಕಿ ಮತ್ತು ಬಾಗಿಲುಗಳಿಗೆ ಕ್ರಮಗಳಿಂದ ಸೊಳ್ಳೆಗಳನ್ನು ನಿಯಂತ್ರಿಸಬಹುದಾಗಿದೆ ಎಂದು ತಿಳಿಸಿದರು.

ಮತ್ತೊಬ್ಬ ವೈದ್ಯರಾದ ಡಾ. ರಶ್ಮಿರವರು ಮಾತನಾಡಿ ಅನಾಫಿಲಿಸ್ ಸೊಳ್ಳೆಗಳು ಶುದ್ಧ ನೀರು ಇರುವ ಜಾಗಗಳಲ್ಲಿ ಹೆಚ್ಚು ಉತ್ಪತ್ತಿಯಾಗುತ್ತದೆ ಇವು ಕುಂಟೆ ಕೆರೆ ಜೋಕು ಪ್ರದೇಶ ಓವರ್ ಹೆಡ್ ಟ್ಯಾಂಕ್ ಬಾವಿ ಕಲ್ಲಿನ ಕ್ವಾರಿ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳು ತೆಂಗಿನ ಚಿಪ್ಪುಗಳು ಹೆಚ್ಚು ಉತ್ಪತ್ತಿಯಾಗುವ ಸಂಭವವಿರುತ್ತದೆ ಎಂದು ಯಾರಿಗೆ ಆದರೂ ಚಳಿ ಜ್ವರ ನಡುಕ ತಲೆನೋವು ವಾಕರಿಕೆ ವಾಂತಿ ಸ್ನಾಯು ನೋವು ಮುಂತಾದ ಲಕ್ಷಣಗಳು ಕಂಡುಬಂದಲ್ಲಿ ಕೂಡಲೇ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಚಿಕಿತ್ಸೆ ಪಡೆದುಕೊಳ್ಳಬೇಕೆಂದು



ತಿಳಿಸಿದರು ಈ ಸಂದರ್ಭದಲ್ಲಿ ವೈದ್ಯರುಗಳಾದ ಡಾ. ರಮೇಶ್ ಡಾ. ಶ್ರೀಧರ್ ಡಾ. ಉದಯ್ ಹಿರಿಯ ಆರೋಗ್ಯ ಸಹಾಯಕರುಗಳಾದ ಸುನೀತ ನಯನ ಅರುಂಧತಿ ಲ್ಯಾಬ್ ಟೆಕ್ನೀಷಿಯನ್ ಮಂಜುನಾಥ್ ಆಸ್ಪತ್ರೆಯ ಸಹಾಯಕ ಸಿಬ್ಬಂದಿ ವರ್ಗದ ವರ್ಗದ ಕಲಾವತಿ ವರಲಕ್ಷ್ಮಿ ಪೃಥ್ವಿರಾಜ್ ಲೋಕೇಶ್ ಮಂಜುರತ್ನಮ್ಮ ಮತ್ತಿತರರು ಉಪಸ್ಥಿತರಿದ್ದರು ಇಮೇಲ್ ನಲ್ಲಿ ಫೋಟೋ ಕಳುಹಿಸಲಾಗಿದೆ

ಮಲೇರಿಯಾ ವಿರುದ್ಧದ ಹೋರಾಟವನ್ನು ತೀವ್ರಗೊಳಿಸುವ ಮೂಲಕ ಹೆಚ್ಚು ಸಮಾಧಾನತೆಯನ್ನು ಜಗತ್ತಿನಲ್ಲಿ ಸಾರೋಣ ಡಾ ಮಿಶ್ರೀ ರಮ್ಯ ಶ್ರೀ ವಿಜಯಪುರ ದೇಶದಲ್ಲಿ 2025ರ ವೇಳೆಗೆ ಮಲೇರಿಯ ಸಂಪೂರ್ಣ ನಿವಾರಣೆ ಗುರಿಯನ್ನು ಸಾಧಿಸುವ ಸಲುವಾಗಿ 2024ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಹೆಚ್ಚು ಸಮಾನತೆಯ ಜಗತ್ತಿಗೆ ಮಲೇರಿಯಾ ವಿರುದ್ಧ ಹೋರಾಟವನ್ನು ತೀವ್ರಗೊಳಿಸೋಣ ಎಂಬ ಘೋಷವಾಕ್ಯ ಬಿಡುಗಡೆಗೊಳಿಸಲಾಗಿದೆ ಎಂದು ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದ ವೈದ್ಯರಾದ ಡಾಕ್ಟರ್ ರಮ್ಯ ಶ್ರೀರವರು ತಿಳಿಸಿದರು.

ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಾರ್ವಜನಿಕರಲ್ಲಿ ಮಲೇರಿಯಾ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಏರ್ಪಡಿಸಿದ್ದ ವಿಶ್ವ ಮಲೇರಿಯಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು. ಅನಾಫಿಲಿಸ್ ಸೊಳ್ಳೆಗಳಿಂದ ಮಲೇರಿಯ ರೋಗ ಹರಡುತ್ತಿದ್ದು ಇದರಿಂದ ರಕ್ಷಣೆ ಪಡೆಯುವ ಸಲುವಾಗಿ ಪ್ರತಿಯೊಬ್ಬರು ಮಲಗುವಾಗ ಸೊಳ್ಳೆ ಪರದೆ ಬಳಸುವುದು ಒಳಾಂಗಣ ಕೀಟನಾಶಕ ಸಿಂಪರಣೆ ನಿಗದಿತವಾಗಿ ಮಾಡುವುದು ಲಾರ್ವಹಾರಿ ಮೀನುಗಳನ್ನು ಬಿಡುವುದು ಕಿಟಕಿ ಮತ್ತು ಬಾಗಿಲುಗಳಿಗೆ ಕ್ರಮಗಳಿಂದ ಸೊಳ್ಳೆಗಳನ್ನು ನಿಯಂತ್ರಿಸಬಹುದಾಗಿದೆ ಎಂದು ತಿಳಿಸಿದರು.

ಮತ್ತೊಬ್ಬ ವೈದ್ಯರಾದ ಡಾ. ರಶ್ಮಿರವರು ಮಾತನಾಡಿ ಅನಾಫಿಲಿಸ್ ಸೊಳ್ಳೆಗಳು ಶುದ್ಧ ನೀರು ಇರುವ ಜಾಗಗಳಲ್ಲಿ ಹೆಚ್ಚು ಉತ್ಪತ್ತಿಯಾಗುತ್ತದೆ ಇವು ಕುಂಟೆ ಕೆರೆ ಜೋಕು ಪ್ರದೇಶ ಓವರ್ ಹೆಡ್ ಟ್ಯಾಂಕ್ ಬಾವಿ ಕಲ್ಲಿನ ಕ್ವಾರಿ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳು ತೆಂಗಿನ ಚಿಪ್ಪುಗಳು ಹೆಚ್ಚು ಉತ್ಪತ್ತಿಯಾಗುವ ಸಂಭವವಿರುತ್ತದೆ ಎಂದು ಯಾರಿಗೆ ಆದರೂ ಚಳಿ ಜ್ವರ ನಡುಕ ತಲೆನೋವು ವಾಕರಿಕೆ ವಾಂತಿ ಸ್ನಾಯು ನೋವು ಮುಂತಾದ ಲಕ್ಷಣಗಳು ಕಂಡುಬಂದಲ್ಲಿ ಕೂಡಲೇ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಚಿಕಿತ್ಸೆ ಪಡೆದುಕೊಳ್ಳಬೇಕೆಂದು ತಿಳಿಸಿದರು ಈ ಸಂದರ್ಭದಲ್ಲಿ ವೈದ್ಯರುಗಳಾದ ಡಾ. ರಮೇಶ್ ಡಾ. ಶ್ರೀಧರ್ ಡಾ. ಉದಯ್ ಹಿರಿಯ ಆರೋಗ್ಯ ಸಹಾಯಕರುಗಳಾದ ಸುನೀತ ನಯನ ಅರುಂಧತಿ ಲ್ಯಾಬ್ ಟೆಕ್ನೀಷಿಯನ್ ಮಂಜುನಾಥ್ ಆಸ್ಪತ್ರೆಯ ಸಹಾಯಕ ಸಿಬ್ಬಂದಿ ವರ್ಗದ ವರ್ಗದ ಕಲಾವತಿ ವರಲಕ್ಷ್ಮಿ ಪೃಥ್ವಿರಾಜ್ ಲೋಕೇಶ್ ಮಂಜುರತ್ನಮ್ಮ ಮತ್ತಿತರರು ಉಪಸ್ಥಿತರಿದ್ದರು ಇಮೇಲ್ ನಲ್ಲಿ ಫೋಟೋ ಕಳುಹಿಸಲಾಗಿದೆ

# ವಿಭೂತಿಪುರ ಕೆರೆಯ ಹೂಳು ತೆಗೆಯದ ಬಿಬಿಎಂಪಿ ವಿರುದ್ಧ ಪರಿಸರವಾದಿಗಳ ಆಕ್ರೋಶ

**ಬೆಂಗಳೂರು:** ವಿಭೂತಿಪುರ ಕೆರೆಯ ಹೂಳು ತೆಗೆಯುವ, ಕೊಳಚೆ ನೀರು ಸಂಸ್ಕರಿಸುವ ಮತ್ತು ಕೆರೆಗೆ ನೀರು ತುಂಬಿಸುವ ಕುರಿತು ಸುಳ್ಳು ಭರವಸೆಗಳನ್ನು ನೀಡಿದ್ದಕ್ಕಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಕೆರೆ ವಿಭಾಗದ ವಿರುದ್ಧ ಕಾರ್ಯಕರ್ತರು ಮತ್ತು ಪರಿಸರವಾದಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ. ವಿಭೂತಿಪುರ ಕೆರೆಯ ಹೂಳು ತೆಗೆದು ಮಾರ್ಚ್ ಅಂತ್ಯದೊಳಗೆ ಶುದ್ಧೀಕರಿಸಿದ ನೀರು ಬಿಡುವುದಾಗಿ ಬಿಬಿಎಂಪಿ ಭರವಸೆ ನೀಡಿತ್ತು. ಆದರೆ, ಇದುವರೆಗೆ ಏನೂ ಮಾಡಿಲ್ಲ ಎಂದು ತಲ ಕಾವೇರಿ ಲೇಔಟ್ ಮತ್ತು ಬಸವನಗರದ ಕೆರೆ ಕಾರ್ಯಕರ್ತರು ಆರೋಪಿಸಿದ್ದಾರೆ.

ಪರಿಸರ ಕಾರ್ಯಕರ್ತೆ ಸತ್ಯವಾಣಿ ಶ್ರೀಧರ್ ಮಾತನಾಡಿ, ತಾವು ಮತ್ತು ಇತರ ಕೆಲವು ಸ್ವಯಂಸೇವಕರು ಕೆರೆಗೆ ಕಾಯಕಲ್ಪ ನೀಡಲು ಮತ್ತು ಸಂಸ್ಕರಿಸಿದ ನೀರಿನಿಂದ ಕೆರೆಯನ್ನು ತುಂಬಿಸಲು ಬಿಬಿಎಂಪಿ ಕೆರೆ ಇಲಾಖೆ ಮತ್ತು ಸ್ಥಳೀಯ ಎಂಜಿನಿಯರ್ ಗಳೊಂದಿಗೆ ಮಾತುಕತೆ ನಡೆಸಿದ್ದೇವೆ. ಆದರೆ, ನಮ್ಮ ಮನವಿ ನನೆಗುದಿಗೆ ಬಿದ್ದಿದೆ ಎಂದರು. 'ಕೆರೆಯ ಹೂಳು ತೆಗೆದು ನೀರು ತುಂಬಿಸುವುದರಿಂದ 45 ಎಕರೆ ವಿಸ್ತೀರ್ಣದ ಕೆರೆಯು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬೋರ್‌ವೆಲ್ ರೀಚಾರ್ಜ್‌ಗೆ ಸಹಾಯ ಮಾಡುತ್ತದೆ. ಅದಕ್ಕಾಗಿಯೇ ನಾವು ಅಧಿಕಾರಿಗಳನ್ನು ಹೂಳು ತೆಗೆಯಲು, ಒಳಚರಂಡಿ ಸಂಸ್ಕರಣಾ ಘಟಕವನ್ನು (ಎಸ್‌ಟಿಪಿ) ಸ್ಥಾಪಿಸಲು ಮತ್ತು ಒತ್ತುವರಿಯನ್ನು ತೆರವುಗೊಳಿಸಲು ಒತ್ತಾಯಿಸುತ್ತಿದ್ದೇವೆ. ಸಾಕಷ್ಟು ಪ್ರಯತ್ನಗಳ ಹೊರತಾಗಿಯೂ, ಬಿಬಿಎಂಪಿ ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ' ಎಂದು ಸತ್ಯವಾಣಿ ಹೇಳಿದರು.

# ಮಣಕೀಕೆರೆ ಶ್ರೀ ಕರಿಯಮ್ಮದೇವಿ ಜಾತ್ರಾ ಮಹೋತ್ಸವ

**ತಿಪಟೂರು :** ತಾಲೂಕಿನ ಹೊನ್ನವಳ್ಳಿ ಹೋಬಳಿ ಮಣಕೀಕೆರೆ ಗ್ರಾಮದೇವತೆ ಶ್ರೀ ಕರಿಯಮ್ಮದೇವಿ, ಶ್ರೀ ಆಂಜನೇಯಸ್ವಾಮಿ, ಶ್ರೀ ಮಂಕಮ್ಮದೇವಿಯವರ ಜಾತ್ರಾ ಮಹೋತ್ಸವವು ಏ. 28ರಿಂದ ಮೇ. 3ರವರೆಗೆ ನಡೆಯಲಿದೆ. ಏ.28ರಂದು ಮದುವಣಗಿತ್ತಿ ಉತ್ಸವ, ಪುಷ್ಪಾಲಂಕಾರ, ಮದ್ದಿನ ಸೇವೆ, 29ರಂದು ಮೊದಲೋತ್ಸವ, 30ರಂದು ಆರತಿ ಬಾನ, ಶ್ರೀದೇವಿಯವರಿಗೆ ಭೂಕೈಲಾಸ ಉತ್ಸವ, ದೀಪಾಲಂಕಾರ, ಮೇ. 1ರಂದು ಶ್ರೀ ಕರಿಯಮ್ಮದೇವಿ ಹಾಗೂ ಆಂಜನೇಯಸ್ವಾಮಿಗೆ ಗಂಗಾಸ್ನಾನ, ರಾಜಹಂಸ ದರ್ಬಾರ್ ಅಲಂಕಾರದ ಉತ್ಸವ, ಪುಷ್ಪಾಲಂಕಾರ, ಸಂಜೆ ಸಂಗೀತ ರಸ ಸಂಜೆ ಕಾರ್ಯಕ್ರಮ ನಂತರ ಅಮೋಘ ಬಾಣ ಬಿರುಸು ಮದ್ದಿನ ಪ್ರದರ್ಶನ ನಡೆಯಲಿದೆ. ಮೇ.2ರಂದು ರಥೋತ್ಸವ ಹಾಗೂ ಉಯ್ಯಾಲೋತ್ಸವ ನಡೆಯಲಿದ್ದು ನಂತರ ಭಕ್ತಾದಿಗಳಿಂದ ಪ್ರಸಾದ, ಮಜ್ಜಿಗೆ, ಸಿಹಿ ವಿತರಣೆ ಅನ್ನದಾಸೋಹ ಏರ್ಪಡಿಸಲಾಗಿದೆ. ಅಂದು ರಾತ್ರಿ ಕಲ್ಪಶ್ರೀ ಕಲಾವಿದರ ಸಂಘದ ವತಿಯಿಂದ ಕುರುಕ್ಷೇತ್ರ ಪೌರಾಣಿಕ ನಾಟಕ ಪ್ರದರ್ಶನವಾಗಲಿದೆ. ಮೇ.3ರಂದು ಸಿಡಿ ಅಡ್ಡಪಲ್ಲಕ್ಕಿ ಉತ್ಸವ ಹಾಗೂ ಮಹಾಮಂಗಳಾರತಿ ನಡೆಯಲಿದೆ.

# ಸಂಜೆ ಟಿಪ್ಸ್

## ಉಚಿತ ಏಸಿ ತಪಾಸಣಾ ಶಿಬಿರ ಆರಂಭಿಸಿದ ನಿಸ್ಸಾನ್

ನಿಸ್ಸಾನ್ ಮೋಟಾರ್ ಇಂಡಿಯಾ ದೇಶಾದ್ಯಂತ ಇರುವ ತನ್ನ ಗ್ರಾಹಕರಿಗೆ ಎರಡು ತಿಂಗಳ ಕಾಲ ಉಚಿತ ಏಸಿ ತಪಾಸಣಾ ಶಿಬಿರವನ್ನು ಆಯೋಜಿಸಿದೆ. ಆ ಮೂಲಕ ಗ್ರಾಹಕ ತೃಪ್ತಿಯನ್ನು ಬಯಸು ತನ್ನ ಬದ್ಧತೆಯನ್ನು ಸಾರಿದೆ. ನಿಸ್ಸಾನ್ ಉಚಿತ ಏಸಿ ತಪಾಸಣಾ ಶಿಬಿರ ಏಪ್ರಿಲ್ 15ರಿಂದಲೇ ಆರಂಭಗೊಂಡಿದ್ದು ಜೂನ್ 15ರವರೆಗೆ ನಡೆಯಲಿದೆ. ನಿಸ್ಸಾನ್ ಗ್ರಾಹಕರು ವಿವಿಧ ಶ್ರೇಣಿಗಳ ಸರ್ವೀಸ್ ಗಳು ಮತ್ತು ರಿಯಾಯಿತಿ ಪಡೆಯುವ ಭಾರತದಾದ್ಯಂತ ಇರುವ ಎಲ್ಲಾ ನಿಸ್ಸಾನ್ ಅಧಿಕೃತ ಸರ್ವೀಸ್ ವರ್ಕ್ ಶಾಪ್ ಗಳಲ್ಲಿ ಈ ಸೌಲಭ್ಯ ಲಭ್ಯವಿದೆ. ನಿಸ್ಸಾನ್ನ ನುರಿತ ಮತ್ತು ತರಬೇತಿ ಪಡೆದ ಸರ್ವೀಸ್ ಉದ್ಯೋಗಿಗಳು ನಿಸ್ಸಾನ್ ನಿಜವಾದ ಬಿಡಿಭಾಗಗಳನ್ನು ಬಳಸಿಕೊಂಡು ಏಸಿ ತಪಾಸಣೆ ಶಿಬಿರವನ್ನು ನಡೆಸಿಕೊಡುತ್ತಾರೆ.

ಎಲ್ಲಾ ನಿಸ್ಸಾನ್ ಮತ್ತು ಡಾಟ್ಸನ್ ವಾಹನ ಮಾಲೀಕರು ನಿಸ್ಸಾನ್ ಒನ್ ಆ?ಯಪ್ ಅಥವಾ ನಿಸ್ಸಾನ್ ಮೋಟಾರ್ ಇಂಡಿಯಾ ವೆಬ್ಸೈಟ್ (ತಿತಿತಿ.ಟ ಚಿಟ.ಟ) ಮೂಲಕ ತಪಾಸಣೆ ಪಡೆಯಲು ಸರ್ವೀಸ್ ಅಪಾಯಿಂಟ್ಮೆಂಟ್ ಅನ್ನು ಪಡೆಯಬಹುದು. ಇದರಿಂದಾಗಿ ಗ್ರಾಹಕರು ಯಾವುದೇ ತೊಂದರೆ ಇಲ್ಲದೆ ನಿಸ್ಸಾನ್ ಮಾಲೀಕತ್ವವನ್ನು ಅನುಭವಿಸುವ ಸೌಕರ್ಯ ಪಡೆಯುವುದಲ್ಲದೆ, ಈ ಉಪಕ್ರಮವು ಬ್ರಾಂಡ್ ಮೇಲೆ ಗ್ರಾಹಕರು ಇಟ್ಟಿರುವ ವಿಶ್ವಾಸಕ್ಕೆ ಸಣ್ಣ ಪ್ರಮಾಣದ ಕೊಡುಗೆಯೂ ಆಗಿದೆ. ಈ ಸರ್ವೀಸ್ ಶಿಬಿರಗಳು ಎಲ್ಲಾ ನಿಸ್ಸಾನ್ ಮತ್ತು ಡಾಟ್ಸನ್ ಬ್ರಾಂಡ್ ವಾಹನಗಳಿಗೆ ಸರ್ವೀಸ್ ಒದಗಿಸುವ ಕಂಪನಿಯ ವ್ಯಾಪಕವಾದ 120 ಸರ್ವೀಸ್ ವರ್ಕ್ ಶಾಪ್ ಗಳಲ್ಲಿಯೂ ನಡೆಯಲಿದೆ.

ಶಿಬಿರವು ಉಚಿತ ಕಾರ್ ಟಾಪ್ ವಾಶ್ ಅನ್ನು ಕೂಡ ಒಳಗೊಂಡಿದೆ. ಜೊತೆಗೆ ಸಮಗ್ರ 20-ಪಾಯಿಂಟ್ ತಪಾಸಣೆಯನ್ನು ಮಾಡಲಾಗುತ್ತದೆ. ಪಿಎಂಎಸ್ (ಪೀರಿಯಾಡಿಕಲ್ ಮೇಂಟನೆನ್ಸ್ ಸರ್ವೀಸ್) ಆಯ್ಕೆ ಮಾಡುವ ಗ್ರಾಹಕರಿಗೆ ಉಚಿತ ಪಿಕ್-ಅಪ್ ಮತ್ತು ಡ್ರಾಪ್ ಸೌಲಭ್ಯ ಕೂಡ ನೀಡಲಾಗುತ್ತದೆ. ಹೆಚ್ಚುವರಿಯಾಗಿ, ಗ್ರಾಹಕರು ಶೇ.20ರವರೆಗೆ ಭಾಗಗಳು/ಪರಿಕರಗಳ ಮೇಲೆ ರಿಯಾಯಿತಿ (ಡೀಲರ್ ತೀರ್ಮಾನದ ಪ್ರಕಾರ) ಪಡೆಯಬಹುದು. ಕಾರ್ಮಿಕ ಶುಲ್ಕಗಳ ಮೇಲೆ 20% ವರೆಗೆ ಮತ್ತು ಮೌಲ್ಯವರ್ಧಿತ ಸೇವೆಗಳ ಮೇಲೆ (ವಿಎಎಸ್) 10% ವರೆಗೆ ರಿಯಾಯಿತಿ ಪಡೆಯಬಹುದು. ಕಂಪನಿಯು ಎಲ್ಲಾ ನಿಸ್ಸಾನ್ ಮತ್ತು ಡಾಟ್ಸನ್ ವಾಹನಗಳು ಈ ವಿಶೇಷ ಕೊಡುಗೆಗಳ ಲಾಭವನ್ನು ಪಡೆಯಬೇಕು ಮತ್ತು ಅದರಿಂದ ವಾಹನಗಳ ಕಾರ್ಯಕ್ಷಮತೆ ಉತ್ತಗೊಳಿಸಬೇಕು, ವಾಹನಗಳು ಆಯುಷ್ಯ ಹೆಚ್ಚಿಸಬೇಕು ಎಂದು ಹೇಳಿದೆ.

## ಮಾವಿನಕಾಯಿ ಪುಳಿಯೊಗರೆ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಅನ್ನ- 1 ಬಟ್ಟಲು, ಮಾವಿನಕಾಯಿ- ತುರಿದದ್ದು ಸ್ವಲ್ಪ, ಒಣಕೊಬ್ಬರಿ- 1 ಚಮಚ, ಬಿಳಿ ಎಳ್ಳು- 1/4 ಚಮಚ, ಜೀರಿಗೆ- 1/4 ಚಮಚ, ಮೆಂತ್ಯೆ- 1/4 ಚಮಚ, ಉದ್ದಿನಬೇಳೆ- 1/4 ಚಮಚ, ಕಡಲೆಬೇಳೆ- 1/4 ಟೀ ಚಮಚ, ಕಾಳುಮೆಣಸು- ಸ್ವಲ್ಪ, ಒಣ ಮೆಣಸಿನ ಕಾಯಿ-4-5, ಕರಿಬೇವು-ಸ್ವಲ್ಪ, ಬಿಳಿ ಎಳ್ಳು 1/4 ಟೀ ಚಮಚ, ಒಣಮೆಣಸಿನಕಾಯಿ-2, ಕರಿಬೇವು-ಸ್ವಲ್ಪ, ಇಂಗು-ಚಿಟಿಕೆ, ಕಡಲೆ-ಬೇಳೆ ಸ್ವಲ್ಪ, ಉದ್ದಿನ ಬೇಳೆ-ಸ್ವಲ್ಪ, ಕಡಲೆಕಾಯಿ ಬೀಜ-ಸ್ವಲ್ಪ, ಅರಿಶಿಣ-ಸ್ವಲ್ಪ, ಸಾಸಿವೆ-ಸ್ವಲ್ಪ, ಎಣ್ಣೆ - 3 ಚಮಚ, ಉಪ್ಪು- ರುಚಿಗೆ ತಕ್ಕಷ್ಟು, ಕೊತ್ತಂಬರಿ ಸೊಪ್ಪು- ಸ್ವಲ್ಪ.

### ಮಾಡುವ ವಿಧಾನ

ಮೊದಲು ಬಾಣಲೆಗೆ ಒಣಕೊಬ್ಬರಿ, ಬಿಳಿ ಎಳ್ಳು, ಜೀರಿಗೆ, ಮೆಂತ್ಯ, ಉದ್ದಿನಬೇಳೆ, ಕಡಲೆಬೇಳೆ, ಕಾಳುಮೆಣಸು, ಒಣ ಮೆಣಸಿನಕಾಯಿ, ಕರಿಬೇವು ಎಲ್ಲವನ್ನೂ ಸೇರಿಸಿ ಚೆನ್ನಾಗಿ ಹುರಿಯಬೇಕು. ತಣ್ಣಗಾದ ನಂತರ ಮಿಕ್ಸಿಯಲ್ಲಿ ರುಬ್ಬಿ ಪುಡಿ ಮಾಡಿಕೊಳ್ಳಬೇಕು. ನಂತರ ಅದೇ ಮಿಕ್ಸಿಗೆ ತುರಿದ ಮಾವಿನ ಕಾಯಿ ಹಾಗೂ ಸ್ವಲ್ಪ ನೀರು ಸೇರಿಸಿ ರುಬ್ಬಿಕೊಂಡು ಮಿಶ್ರಣ ತಯಾರಿಸಿಕೊಳ್ಳಬೇಕು. ಬಳಿಕ ಒಗ್ಗರಣೆ ಮಾಡಲು ಬಾಣಲಿಗೆ ಎಣ್ಣೆ, ಸಾಸಿವೆ, ಒಣ ಮೆಣಸು, ಕಡಲೆ ಬೇಳೆ, ಕಡಲೆಬೀಜ, ಉದ್ದಿನ ಬೇಳೆ ಹಾಕಿ ಬೇಯಿಸಬೇಕು. ಕೆಂಪಗಾದ ನಂತರ ಬಿಳಿ ಎಳ್ಳು, ಅರಿಶಿಣ, ರುಬ್ಬಿಕೊಂಡ ಮಾವಿನಕಾಯಿ ಮಿಶ್ರಣವನ್ನು ಹಾಕಿ ಚೆನ್ನಾಗಿ ಕುದಿಸಿ. ಮಿಶ್ರಣ ಬೆಂದ ಮೇಲೆ ಕರಿ ಬೇವು ಹಾಕಿ ಕೈಯಾಡಿಸಿ. ನಂತರ ಉಪ್ಪು, ಅನ್ನ ಹಾಕಿ ಕಲಸಿಕೊಳ್ಳಿ. ಬಳಿಕ ಕೊತ್ತಂಬರಿ ಸೊಪ್ಪನ್ನು ಹಾಕಿ ಮಿಶ್ರಣ ಮಾಡಿದರೆ, ರುಚಿಕರವಾದ ಮಾವಿನಕಾಯಿ ಪುಳಿಯೋಗರೆ ಸವಿಯಲು ಸಿದ್ಧ.



## ರಾಮಾಯಣ ಚಿತ್ರದ ಪೋಟೋ ವೈರಲ್

ಬಾಲಿವುಡ್ ನಿರ್ದೇಶಕ ನಿತೇಶ್ ತಿವಾರಿ ರಾಮಾಯಣ ಚಿತ್ರದ ಚಿತ್ರೀಕರಣ ಆರಂಭಿಸಿದ್ದಾರೆ. ಚಿತ್ರೀಕರಣ ಆರಂಭವಾಗಿದ್ದು, ಸೆಟ್ ನಿಂದ ರಾಮ ಸೀತೆಯ ಪಾತ್ರದಲ್ಲಿ ಯಾರು ಕಾಣಿಸಿಕೊಳ್ಳುತ್ತಾರೆ ಎನ್ನುವ ಕುತೂಹಲ ಎಲ್ಲರಿಗೂ ಇತ್ತು, ಇದೀಗ ಆ ಕುತೂಹಲ ಏನು ಎನ್ನುವುದು ಹೊರ ಬಿದ್ದಿದೆ. ಶೂಟಿಂಗ್ ಸೆಟ್ ನಿಂದ ರಾಮ ಸೀತೆ ಪಾತ್ರದಲ್ಲಿ ಯಾರು ನಟಿಸುತ್ತಿದ್ದಾರೆ ಎಂದು ಹೊರ ಬಿದ್ದಿದೆ. ರಾಮ ಪಾತ್ರದಲ್ಲಿ ರಣಬೀರ್ ಹಾಗೂ ಸೀತೆಯ ಪಾತ್ರದಲ್ಲಿ ಸಾಯಿ ಪಲ್ಲವಿ ಕಾಣಿಸಿಕೊಂಡಿದ್ದಾರೆ. ಚಿತ್ರದ ಸೆಟ್ನಿಂದ ಅವರ ಫಸ್ಟ್ ಲುಕ್ ಆನ್ಲೈನ್ನಲ್ಲಿ ಲೀಕ್ ಆಗಿದ್ದು, ಅಭಿಮಾನಿಗಳು ಮತ್ತು ನೆಟಿಜನ್ಗಳಲ್ಲಿ ಸಾಕಷ್ಟು ಕೋಲಾಹಲಕ್ಕೆ ಕಾರಣವಾಗಿದೆ. ರಣಬೀರ್ ಹಾಗೂ ಸಾಯಿ ಪಲ್ಲವಿ ಇಬ್ಬರು ಸಾಂಪ್ರದಾಯಿಕ ಉಡುಗೆಯಲ್ಲಿ ಕಾಣಿಸಿಕೊಂಡಿದ್ದಾರೆ ಮತ್ತು ಸಾಯಿ ಪಲ್ಲವಿ ಸೀರೆಯಲ್ಲಿ ಅಪ್ಪಟ ಸೀತೆಯ ಹಾಗೆಯೇ ಕಾಣಿಸಿದ್ದಾರೆ. ಈ ಸಿನಿಮಾದಲ್ಲಿ ಪ್ರಮುಖ ನಟರಾದ ರಣಬೀರ್ ಕಪೂರ್, ಸಾಯಿ ಪಲ್ಲವಿ, ಮತ್ತು ಯಶ್ ಹೊರತುಪಡಿಸಿ , ಅರುಣ್ ಗೋವಿಲ್ ರಾಜ ದಶರಥನಾಗಿ, ಲಾರಾ ದತ್ತಾ ಕೈಕೇಯಿಯಾಗಿ, ಸನ್ನಿ ಡಿಯೋಲ್ ಹನುಮಾನ್ ಆಗಿ, ಸಾಕ್ಷಿ ತನ್ವರ್ ಮಂಡೋದರಿಯಾಗಿ ಮತ್ತು ನವೀನ್ ಪೋಲಿಶೆಟ್ಟಿ ಲಕ್ಷ್ಮಣನಾಗಿ ನಟಿಸಲಿದ್ದಾರೆ.11 ಕೋಟಿ ಮೌಲ್ಯದ ಸೆಟ್ನಲ್ಲಿ ಅಯೋಧ್ಯೆಯನ್ನು ಮರುಸೃಷ್ಟಿಸಲಾಗಿದೆ. ಅರಮನೆ ಮತ್ತು ಬೀದಿಗಳು ಎಲ್ಲವೂ ಸಂಪೂರ್ಣವಾಗಿ ಅಯೋಧ್ಯೆಯನ್ನು ಹೋಲುವ ಹಾಗೆಯೆ ಸೆಟ್ ತಯಾರಾಗಿದೆ. ಈ ರಾಮಾಯಣ ಸಿನಿಮಾವನ್ನು ನಿರ್ದೇಶಕ ನಿತೇಶ್ ತಿವಾರಿ ಮೂರು ಭಾಗಗಳಲ್ಲಿ ತಯಾರಿಸುವ ಯೋಜನೆಯನ್ನು ಹೊಂದಿದ್ದಾರೆ. ಬಹು ನಿರೀಕ್ಷೆ ಹುಟ್ಟಿಸಿರುವ ನಿತೇಶ್ ತಿವಾರಿ ಅಭಿನಯದ 'ರಾಮಾಯಣ' ಸಿನಿಮಾದ ಶೂ ಟಿಂಗ್ ಸೆಟ್ನಿಂದ ರಣಬೀರ್ ಹಾಗೂ ಸಾಯಿ ಪಲ್ಲವಿ ಲುಕ್ ಲೀಕ್ ಆಗಿ ವೈರಲ್ ಆಗಿದೆ.ಈಗಾಗಲೇ ಹಲವು ಬಾರಿ ಸಿನಿಮಾದ ಫೋಟೊಗಳು ಲೀಕ್ ಆಗಿವೆ. ಇನ್ನೂ ಸಿನಿಮಾದ ದೃಶ್ಯಗಳು ಹಾಗೂ ಫೋಟೋಗಳು ಲೀಕ್ ಆಗದಂತೆ ಚಿತ್ರತಂಡ ಕ್ರಮ ಕೈಗೊಂಡರು ಇದೀಗ ಮತ್ತೇ ವೈರಲ್ ಆಗಿರುವುದು ಚಿತ್ರತಂಡಕ್ಕೆ ಬೇಸರ ತಂದಿದೆ.ಇನ್ನೂ ಈ ಚಿತ್ರದಲ್ಲಿ ಕೆಜಿಎಫ್ ಹೀರೋ ನಟ ರಾಕಿಂಗ್ ಸ್ಟಾರ್ ಯಶ್ ಅವರು ರಾವಣನಾಗಿ ಅಭಿನಯಿಸಲಿದ್ದಾರೆಂಬ ಸುದ್ದಿ ಜೋರಾಗಿಯೇ ಹರಿದಾಡುತ್ತಿದೆ. ಆದರೆ ಈ ಬಗ್ಗೆ ಚಿತ್ರತಂಡವಾಗಲೀ ಯಶ್ ಕೂಡಾ ಸ್ಪಷ್ಟಣೆಯನ್ನು ನೀಡಿಲ್ಲ. ಇನ್ನೂ ಚಿತ್ರದ ರಾಮನ ಲುಕ್ಗಾಗಿ ನಟ ರಣಬೀರ್ ಅವರು ಕಠಿಣ ತರಬೇತಿಯನ್ನು ಪಡೆದು ಸಖತ್ ಫಿಟ್ ಆಗಿ ಕಾಣಿಸಿಕೊಂಡಿದ್ದಾರೆ.

## ಪೇರಲ ಹಣ್ಣಿನ ಜ್ಯೂಸ್ ಪ್ರಯೋಜನಗಳಿವು!



### ಹೆಲ್ತ್ ಟಿಪ್ಸ್

ಪೇರಲ ಹಣ್ಣುಗಳನ್ನು ಸೇವಿಸುವುದು ಆರೋಗ್ಯಕ್ಕೆ ಹಲವು ಪ್ರಯೋಜನಗಳನ್ನು ನೀಡುತ್ತದೆ. ಪೇರಲ ಹಣ್ಣು ಪೋಷಕಾಂಶಗಳ ಆಗರವಾಗಿದೆ. ಪೇರಲ ಹಣ್ಣಿಗೆ ಹೆಚ್ಚಿನ ಮಹತ್ವ ನೀಡಬೇಕು. ಪೇರಲ ಹಣ್ಣುಗಳು ಉತ್ಕರ್ಷಣ ನಿರೋಧಕಗಳು, ಜೀವಸತ್ವಗಳು ಮತ್ತು ಖನಿಜಗಳಿಂದ ಸಮೃದ್ಧವಾಗಿವೆ. ಪೇರಲ ಅತ್ಯಗತ್ಯ ಪೋಷಕಾಂಶಗಳಿಂದ ಸಮೃದ್ಧವಾಗಿರುವ ಹಣ್ಣು. ಇದನ್ನು ನಿಯಮಿತವಾಗಿ ಸೇವಿಸಿದರೆ ಅನೇಕ ಆರೋಗ್ಯ ಸಮಸ್ಯೆಗಳವನ್ನು ಗುಣಪಡಿಸುತ್ತದೆ. ಮೆದುಳಿನ ಬೆಳವಣಿಗೆಗೆ ಸಹಾಯ ಮಾಡುತ್ತದೆ. ಪೇರಲ ಮೆದುಳಿನ ಆರೋಗ್ಯವನ್ನು ಕಾಪಾಡಲು ಅಗತ್ಯವಿರುವ ಎಲ್ಲಾ ಜೀವಸತ್ವಗಳನ್ನು ಹೊಂದಿರುತ್ತದೆ. ಪೇರಲ ಹಣ್ಣು ವಿಟಮಿನ್ ಬಿ 3 ಮತ್ತು ವಿಟಮಿನ್ ಬಿ 6 ಅನ್ನು ಹೊಂದಿರುತ್ತವೆ. ಪೇರಲ ಹಣ್ಣು ಮೆದುಳಿಗೆ ರಕ್ತದ ಹರಿವನ್ನು ಸುಧಾರಿಸುತ್ತದೆ. ಪೇರಲ ಹಣ್ಣು ನರಗಳಿಗೆ ವಿಶ್ರಾಂತಿ ನೀಡುತ್ತದೆ. ಪೇರಲದಲ್ಲಿರುವ ವಿಟಮಿನ್ ಸಿ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ವಿಟಮಿನ್ ಸಿ ನೈಸರ್ಗಿಕ ಆಂಟಿಹಿಸ್ಟಾಮೈನ್ ಆಗಿದೆ. ಉರಿಯೂತದ ಪ್ರಕ್ರಿಯೆಯಲ್ಲಿ ಬಿಡುಗಡೆಯಾಗುವ ಹಿಸ್ಟಮೈನ್ಗಳು ಎಂಬ ಅಣುಗಳ ಪ್ರಮಾಣವನ್ನು ಕಡಿಮೆ ಮಾಡುವ ಮೂಲಕ ಇದು ಉಸಿರಾಟದ ಅಲರ್ಜಿಯನ್ನು ನಿಯಂತ್ರಿಸುತ್ತದೆ.ಪೇರಲಹಣ್ಣಿನಲ್ಲಿ ಮೆಗ್ನೀಸಿಯಮ್ ಸಮೃದ್ಧವಾಗಿದೆ. ಇದು ನರಗಳು ಮತ್ತು ಸ್ನಾಯುಗಳನ್ನು ವಿಶ್ರಾಂತಿ ಮಾಡಲು ಸಹಾಯ ಮಾಡುವ ಪ್ರಮುಖ ಪೋಷಕಾಂಶವಾಗಿದೆ. ಒತ್ತಡದ ವಿರುದ್ಧ ಹೋರಾಡುವವರಿಗೆ ಪೇರಲ ಹಣ್ಣು ಕೂಡ ಉತ್ತಮವಾಗಿದೆ. ಪೇರಲದಲ್ಲಿ ತಾಮ್ರವಿದ್ದು ಥೈರಾಯ್ಡ್ ಹಾರ್ಮೋನ್ ಮಟ್ಟವನ್ನು ಸುಧಾರಿಸುತ್ತದೆ. ಥೈರಾಯ್ಡ್ ಗ್ರಂಥಿಯು ಉತ್ತಮವಾಗಿ ಕಾರ್ಯನಿರ್ವಹಿಸಲು ಸಹಾಯ ಮಾಡುತ್ತದೆ. ತಾಮ್ರವು ಹಾರ್ಮೋನುಗಳ ಉತ್ಪಾದನೆ ಮತ್ತು ಹೀರಿಕೊಳ್ಳುವಿಕೆಗೆ ಅಗತ್ಯವಾದ ಪ್ರಮುಖ ಖನಿಜವಾಗಿದೆ. ಪೇರಲ ಹಣ್ಣಿನಲ್ಲಿ ಫೋಲಿಕ್ ಆಮ್ಲ ಅಥವಾ ವಿಟಮಿನ್ ಬಿ 9 ಸಮೃದ್ಧವಾಗಿದೆ. ಮಗುವಿನ ನರಮಂಡಲದ ಬೆಳವಣಿಗೆಗೆ ಇದು ಪ್ರಮುಖ ಪೋಷಕಾಂಶವಾಗಿದೆ. ಆದ್ದರಿಂದ, ಗರ್ಭಿಣಿಯರು ತಮ್ಮ ಮಕ್ಕಳನ್ನು ನರವೈಜ್ಞಾನಿಕ ಅಸ್ವಸ್ಥತೆಗಳಿಂದ ರಕ್ಷಿಸಲು ಆಗಾಗ್ಗೆ ತೆಗೆದುಕೊಳ್ಳಬೇಕು.

## ಗುಡ್ ನೈಟ್ ಅಧ್ಯಯನ



ಸೊಳ್ಳೆಗಳಿಂದಾಗಿ ಅಡಚಣೆಯಾಗುವ ನಿದ್ರೆಯಿಂದಾಗಿ ಜನರು ಒತ್ತಡಕ್ಕೆ ಒಳಗಾಗುವುದರಿಂದ ಭಾರತದ ಅರ್ಧಕ್ಕಿಂತ ಹೆಚ್ಚು (58%) ಉತ್ಪಾದಕತೆಯ ಮೇಲೆ ಪರಿಣಾಮ ಬೀರುತ್ತಿದೆ. ಮುಂಬರುವ ವಿಶ್ವ ಮಲೇರಿಯಾ ದಿನಕ್ಕೆ (ಏಪ್ರಿಲ್ 25) ಮುನ್ನುಡಿಯಾಗಿ ಈ ನಿರ್ಣಾಯಕ ಬಹಿರಂಗಪಡಿಸುವಿಕೆಯು ಗೋದ್ರೇಜ್ ಕನ್ಸ್ಯೂಮರ್ ಪ್ರಾಡಕ್ಟ್ಸ್ ಲಿಮಿಟೆಡ್ನ (ಉಅಕಐ)ಭಾರತದ ಪ್ರಮುಖ ಮನೆಬಳಕೆಯ ಕೀಟನಾಶಕ ಬ್ರಾಂಡ್ ಗುಡ್ ನೈಟ್ ಬಿಡುಗಡೆ ಮಾಡಿದ ಸಮೀಕ್ಷೆಯ ವರದಿಯು ಬಹಿರಂಗಪಡಿಸಿದೆ. 'ಒಂದು ಸೊಳ್ಳೆ, ಲೆಕ್ಕವಿಲ್ಲದಷ್ಟು ಬೆದರಿಕೆಗಳು' ಎಂಬ ಶೀರ್ಷಿಕೆಯ ಈ ಅಖಿಲ ಭಾರತ ಮಟ್ಟದ ಸಮೀಕ್ಷೆಯನ್ನು ಗುಡ್ ನೈಟ್ ಆಯೋಜಿಸಿದ್ದು ಮಾರುಕಟ್ಟೆ ಸಂಶೋಧನಾ ಸಂಸ್ಥೆ ಯೂಗೋವ್ ಸಮೀಕ್ಷೆ ನಡೆಸಿದೆ. ಈ ಸಮೀಕ್ಷೆಯಲ್ಲಿ ಸಾರ್ವಜನಿಕ ವರ್ತನೆಗಳನ್ನು ಅಧ್ಯಯನ ಮಾಡಿ ಸೊಳ್ಳೆಯಿಂದ ಹರಡುವ ರೋಗಗಳ ಅಪಾಯಗಳನ್ನು ಗಣನೆಗೆ ತೆಗೆದುಕೊಂಡಿದೆ.

**ಸೊಳ್ಳೆಗಳಿಂದ ಉಂಟಾಗುವ ನಿದ್ರಾಹೀನತೆಯಿಂದಾಗಿ ದಕ್ಷಿಣ ಭಾರತದ ಅರ್ಧಕ್ಕಿಂತ ಹೆಚ್ಚು ಉತ್ಪಾದಕತೆಯ ಮೇಲೆ ಪರಿಣಾಮ**

ಈ ಸಮೀಕ್ಷೆಯ ವರದಿಯು ಭಾರತದ ನಾಲ್ಕು ಪ್ರದೇಶಗಳಾದ ಉತ್ತರ (ಮಧ್ಯ ವಲಯ ರಾಜ್ಯಗಳು ಸೇರಿದಂತೆ) ದಕ್ಷಿಣ, ಪಶ್ಚಿಮ ಮತ್ತು ಪೂರ್ವದ ಜನತೆಯನ್ನು ಒಳಗೊಂಡಿತ್ತು. ಗುಡ್ ನೈಟ್ ವರದಿಯು 62% ಪುರುಷರು ಮತ್ತು 53% ಮಹಿಳೆಯರು ಸೊಳ್ಳೆಗಳಿಂದಾಗಿ ತೊಂದರೆಗೊಳಗಾದ ನಿದ್ರೆಯಿಂದಾಗಿ ತಮ್ಮ ಉತ್ಪಾದಕತೆಯ ಮೇಲೆ ಪರಿಣಾಮ ಬೀರುತ್ತಿದೆ ಎಂದು ಹೇಳಿದ್ದಾರೆ. ಇದು ವಿಶೇಷವಾಗಿ ಭಾರತದ ಇತ್ತೀಚಿನ ಆರ್ಥಿಕ ಉಲ್ಬಣದ ಹಿನ್ನೆಲೆಯಲ್ಲಿ ಕಳವಳಕಾರಿಯಾಗಿದೆ, ಅಲ್ಲಿ ಆರೋಗ್ಯಕರ ಕಾರ್ಯಪಡೆಯು ಅತ್ಯುನ್ನತವಾಗಿದೆ. ಉದ್ಯಮದ ವರದಿಗಳ ಪ್ರಕಾರ, ಮಲೇರಿಯಾದಂತಹ ಸೊಳ್ಳೆ ಮಾತ್ರ ಹರಡುವ ರೋಗಗಳಿಂದ ಭಾರತದ ಆರ್ಥಿಕ ಹೊರೆ ಸುಮಾರು 16000 ಕೋಟಿ ರೂಪಾಯಿಗಳಷ್ಟು ಆಗಿದೆ. ವಿವಿಧ ಅಂದಾಜುಗಳ ಪ್ರಕಾರ, ಸರಿಸುಮಾರು 75% ನಷ್ಟು ಆರ್ಥಿಕ ಹೊರೆ ಭಾರತೀಯರು ಗಳಿಸಿದ ಆದಾಯದ ನಷ್ಟ ಮತ್ತು ಚಿಕಿತ್ಸೆಯ ವೆಚ್ಚಗಳ ಸಮತೋಲನವನ್ನು ಪ್ರತಿನಿಧಿಸುತ್ತದೆ.

ಭೌಗೋಳಿಕ ವಲಯವಾರು, ಕರ್ನಾಟಕ, ಕೇರಳ, ತಮಿಳುನಾಡು, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳನ್ನು ಒಳಗೊಂಡಿರುವ ದಕ್ಷಿಣ ಭಾರತವು ನಿದ್ರಾಹೀನತೆಯ ಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದೆ, 57% ಜನರು ಸೊಳ್ಳೆಗಳಿಂದ ಉಂಟಾಗುವ ನಿದ್ರಾಹೀನತೆಯಿಂದಾಗಿ ತಮ್ಮ ಉತ್ಪಾದಕತೆಯ ಮೇಲೆ ಪರಿಣಾಮ ಬೀರುತ್ತಿದೆ ಎಂದು ಭಾವಿಸುತ್ತಾರೆ. ಪಶ್ಚಿಮ ಪ್ರದೇಶವು 67%, ಉತ್ತರ ಭಾರತವು 56% ಮತ್ತು ಪೂರ್ವ ಪ್ರದೇಶವು 49% ರಷ್ಟು ಪರಿಣಾಮ ಬೀರಿದೆ.

ಈ ಕುರಿತು ಮಾತನಾಡಿದ ಗೋದ್ರೇಜ್ ಕನ್ಸ್ಯೂಮರ್ ಪ್ರಾಡಕ್ಟ್ಸ್ ಲಿಮಿಟೆಡ್ (ಜಿಸಿಪಿಎಲ್)ನ ಭಾರತದ ಮುಖ್ಯ ಮಾರುಕಟ್ಟೆ ಅಧಿಕಾರಿ ಅಶ್ವಿನ್ ಮೂರ್ತಿ, ಅವರು ಗುಡ್ ನೈಟ್ನ 'ಒನ್ ಮಾಸ್ಕ್ವಿಟೋ, ಕೌಂಟ್ಲೆಸ್ ಥ್ರೆಟ್ಸ್' ರಾಷ್ಟ್ರವ್ಯಾಪಿ ಸಮೀಕ್ಷೆಯ ವರದಿಯಾಗಿದ್ದು, ಇದು ಸಾರ್ವಜನಿಕರ ವರ್ತನೆಗಳನ್ನು ಪರಿಶೀಲಿಸುತ್ತದೆ ಮತ್ತು ಸೊಳ್ಳೆ-ಹರಡುವ ರೋಗಗಳಿಗೆ ಸಂಬಂಧಿಸಿದ ಅಪಾಯಗಳನ್ನು ಮೌಲ್ಯಮಾಪನ ಮಾಡುತ್ತದೆ. ಇಂತಹ ಉಪಕ್ರಮಗಳ ಮೂಲಕ, ಭಾರತದಲ್ಲಿ ಸೊಳ್ಳೆ ಸಮಸ್ಯೆಯ ಬಗ್ಗೆ ಜಾಗೃತಿ ಮೂಡಿಸುವುದು, ಕುಟುಂಬಗಳಿಗೆ ಕಾರ್ಯನಿರ್ವಹಿಸಲು ಅನುವು ಮಾಡಿಕೊಡುವುದು ಮತ್ತು ದೇಶಕ್ಕೆ ಕೈಗೆಟುಕುವ ಮತ್ತು ನವೀನ ಪರಿಹಾರಗಳನ್ನು ಒದಗಿಸುವುದು ನಮ್ಮ ಗುರಿಯಾಗಿದೆ. ಭಾರತದಲ್ಲಿ, ವಾರ್ಷಿಕವಾಗಿ 40 ದಶಲಕ್ಷಕ್ಕೂ ಹೆಚ್ಚು ನಾಗರಿಕರು ಮಲೇರಿಯಾ, ಡೆಂಗ್ಯೂ ಮುಂತಾದ ಸೊಳ್ಳೆಗಳಿಂದ ಹರಡುವ ರೋಗಗಳಿಂದ ಬಳಲುತ್ತಿದ್ದಾರೆ. ಇದರಿಂದಾಗಿ ಅನಾರೋಗ್ಯ, ಆರೋಗ್ಯ ವೆಚ್ಚಗಳು ಮತ್ತು ಕಡಿಮೆ ಉತ್ಪಾದಕತೆಯಿಂದಾಗಿ ಕೆಲಸ, ಶಾಲೆ, ಸಾಮಾಜಿಕ ಮತ್ತು ವೃತ್ತಿಪರ ಬದ್ಧತೆಗಳಿಂದ ದೂರವಿರುವುದು ಇವೆಲ್ಲವೂ ಆರ್ಥಿಕ ನಷ್ಟಕ್ಕೆ ಕಾರಣವಾಗುತ್ತವೆ. ಭಾರತೀಯ ಆರ್ಥಿಕತೆಯ ಉತ್ಪಾದಕತೆಯನ್ನು ಕಾಪಾಡಿಕೊಳ್ಳಲು ಮತ್ತು ಜಿಡಿಪಿ ಬೆಳವಣಿಗೆಯನ್ನು ಹೆಚ್ಚಿಸಲು ನೆಲದ ಮೇಲೆ ಸ್ಥಿರವಾದ ಮತ್ತು ಆರೋಗ್ಯಕರ ಕಾರ್ಯಪಡೆಯ ಅಗತ್ಯವಿದೆ. ಸೊಳ್ಳೆಗಳಿಂದ ಹರಡುವ ರೋಗಗಳ ಹೆಚ್ಚುತ್ತಿರುವ ಬಾಧೆಯನ್ನು ಪರಿಹರಿಸುವುದು ಇದನ್ನು ಪರಿಹರಿಸುವ ಪ್ರಾಯೋಗಿಕ ಮಾರ್ಗಗಳಲ್ಲಿ ಒಂದಾಗಿದೆ ಎಂದು ಹೇಳಿದರು.

ಗುಡ್ ನೈಟ್ ಸಮೀಕ್ಷೆಯ ಮತ್ತೊಂದು ಗಮನಾರ್ಹ ಒಳನೋಟವೆಂದರೆ ಸೊಳ್ಳೆಗಳು ಜನರ ನಿದ್ರಾಹೀನತೆಗೆ ಗಮನಾರ್ಹ ಕೊಡುಗೆ ನೀಡುತ್ತವೆ. ಭಾರತದಾದ್ಯಂತ, ಸರಾಸರಿ, ಪ್ರತಿ ಇಬ್ಬರು ವಯಸ್ಕರಲ್ಲಿ ಒಬ್ಬರು (50%) ಸೊಳ್ಳೆಗಳನ್ನು ತಮ್ಮ ನಿದ್ರಾಹೀನತೆಗೆ ಮುಖ್ಯ ಕಾರಣವೆಂದು ಗುರುತಿಸಿದ್ದಾರೆ. ಕುತೂಹಲಕಾರಿಯಾಗಿ, ಪಶ್ಚಿಮ ಭಾರತ (56%) ಈ ಹೇಳಿಕೆಯನ್ನು ಒಪ್ಪುತ್ತದೆ, ನಂತರ ಉತ್ತರ (52%) ದಕ್ಷಿಣ (47%) ಮತ್ತು ಪೂರ್ವ (42%). ಇದಲ್ಲದೆ, ಪುರುಷರು (54%) ಮಹಿಳೆಯರಿಗೆ ಹೋಲಿಸಿದರೆ ಈ ಅಭಿಪ್ರಾಯವನ್ನು ಒಪ್ಪಿಕೊಳ್ಳಲು ಶೇಕಡಾ 46 ಕ್ಕೂ ಹೆಚ್ಚು ಜನರು ಒಲವು ತೋರುತ್ತಾರೆ.

## ಕಣ್ಣಿನ ಊತ ಕಡಿಮೆ ಮಾಡಲು ಮನೆಮದ್ದು

### ಬ್ಯೂಟಿ ಟಿಪ್ಸ್



ಕೆಲವೊಮ್ಮೆ ಕಣ್ಣಿನಲ್ಲಿ ಊತ ಕಾಣಿಸಿಕೊಳ್ಳುತ್ತದೆ. ಇದ್ರಿಂದಾಗಿ ಮನೆಯಿಂದ ಹೊರ ಹೋಗುವುದೂ ಕಷ್ಟವಾಗುತ್ತದೆ. ಇದಕ್ಕೆ ಅನೇಕ ಕಾರಣಗಳಿವೆ. ಸುಸ್ತು, ಬಹಳ ಹೊತ್ತು ಕಂಪ್ಯೂಟರ್ ಅಥವಾ ಟಿವಿ, ಮೊಬೈಲ್ ನೋಡುತ್ತಿದ್ದರೆ, ಅನಿದ್ರೆ ಇವೆಲ್ಲವೂ ಕಾರಣವಾಗುತ್ತದೆ. ನಿಮಗೂ ಆಗಾಗ ಕಣ್ಣಿನ ಊತ ಕಾಡುತ್ತಿದ್ದರೆ ಈ ಮನೆ ಮದ್ದನ್ನು ಬಳಸಿ ಸುಲಭವಾಗಿ ಕಣ್ಣಿನ ಊತಕ್ಕೆ ಗುಡ್ ಬೈ ಹೇಳಿ.

**ಸೌತೆಕಾಯಿ:** ಸೌತೆಕಾಯಿ ಕೇವಲ ಕಣ್ಣಿನ ಊತವನ್ನು ಮಾತ್ರ ಕಡಿಮೆ ಮಾಡುವುದಿಲ್ಲ. ಜೊತೆಗೆ ಕಣ್ಣು ಹೊಳಪು ಪಡೆಯುತ್ತದೆ. ಕಣ್ಣುಗಳು ಫ್ರೆಶ್ ಆಗುತ್ವೆ. ಸೌತೆಕಾಯಿಯನ್ನು ಕತ್ತರಿಸಿ 8-10 ನಿಮಿಷಗಳ ಕಾಲ ಕಣ್ಣಿನ ಮೇಲಿಟ್ಟುಕೊಳ್ಳಿ. ಇದ್ರಿಂದ ಊತ ಕಡಿಮೆಯಾಗುತ್ತದೆ.

**ಆಲೂಗಡ್ಡೆ:** ಆಲೂಗಡ್ಡೆಯನ್ನು ಮಿಕ್ಸಿ ಮಾಡಿ ರಸ ತೆಗೆದುಕೊಳ್ಳಿ. ನಂತ್ರ ಅದಕ್ಕೆ ಎಣ್ಣೆ ಬೆರೆಸಿ ಕಣ್ಣಿನ ಸುತ್ತ ಹಚ್ಚಿಕೊಳ್ಳಿ.

**ನೀರು:** ನೀರು ಎಲ್ಲ ರೋಗಕ್ಕೂ ಮದ್ದು. ಪ್ರತಿದಿನ 8-10 ಗ್ಲಾಸ್ ನೀರು ಕುಡಿಯಿರಿ. ಇದ್ರಿಂದ ಕಣ್ಣಿನ ಊತ ಕಡಿಮೆಯಾಗುತ್ತದೆ. ಬೆಚ್ಚಗಿನ ನೀರು ಅಥವಾ ಹಾಲಿನಿಂದ ಕಣ್ಣನ್ನು ತೊಳೆದುಕೊಳ್ಳಿ.

**ಆಲೋವೇರಾ ಜೆಲ್:** ಆಲೋವೇರಾ ಜೆಲ್ ಕಣ್ಣಿಗೆ ಬಹಳ ಪ್ರಯೋಜನಕಾರಿ. ಆಲೋವೇರಾ ಎಲೆಯನ್ನು ಕಟ್ ಮಾಡಿ ಜೆಲ್ ತೆಗೆದು ಅದನ್ನು ಕಣ್ಣಿನ ಮೇಲ್ಭಾಗಕ್ಕೆ ಹಚ್ಚಿಕೊಳ್ಳಿ.

**ಜೇನುತುಪ್ಪ:** ಒಂದು ಚಮಚ ಜೇನುತುಪ್ಪಕ್ಕೆ ನೆಲ್ಲಿಕಾಯಿ ರಸವನ್ನು ಬೆರೆಸಿ ಎರಡು ಬಾರಿ ಕಣ್ಣನ್ನು ತೊಳೆಯಿರಿ. ಇದ್ರಿಂದ ಉರಿ ಕಡಿಮೆಯಾಗುತ್ತದೆ. ಕಣ್ಣಿನಲ್ಲಿರುವ ಸೋಂಕು ಕೂಡ ದೂರವಾಗುತ್ತದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಬಂಧುಗಳಿಂದ ತೊಂದರೆ, ಫ್ಯಾಶನ್ ಡಿಸೈನಿಂಗ್ ಮಾಡುವವರಿಗೆ ಶುಭ.

**ವೃಷಭ:** ಪ್ರಯಾಣದಲ್ಲಿ ಎಚ್ಚರಿಕೆ, ತಂದೆ ಆರೋಗ್ಯದಲ್ಲಿ ಸಮಸ್ಯೆ, ಉದ್ಯೋಗಸ್ಥ ಮಹಿಳೆಯರಿಗೆ ಶುಭ.

**ಮಿಥುನ:** ಕುಟುಂಬದಲ್ಲಿ ಕಲಹ, ಮೋಜು-ಮಸ್ತಿಗಳಿಂದ ತೊಂದರೆ, ಧಾರ್ಮಿಕ ಕಾರ್ಯಗಳಿಂದ ಶುಭ.

**ಕರ್ಕಾಟಕ:** ಪುಸ್ತಕ ಪ್ರಕಾಶಕರಿಗೆ ಬೇಡಿಕೆ, ಕೃಷಿಕರು ಮೋಸ ಹೋಗುವ ಸಂಭವ, ಉಸಿರಾಟದ ಸಮಸ್ಯೆ ಇರುವವರು ಎಚ್ಚರ.

**ಸಿಂಹ:** ಸಾಂಪ್ರದಾಯಿಕ ಕೃಷಿಕರಿಗೆ ಶುಭ, ಸ್ವಂತ ಉದ್ಯಮದಲ್ಲಿ ನಷ್ಟ, ಆಹಾರ ವ್ಯತ್ಯಾಸದಿಂದ ಸಮಸ್ಯೆ.

**ಕನ್ಯಾ:** ಕಲಾವಿದರಿಗೆ ಅವಕಾಶಗಳು ಲಭ್ಯ, ಉದ್ಯೋಗ ಸ್ಥಳದಲ್ಲಿ ಆತಂಕ, ಮಕ್ಕಳ ಜೀವನದಲ್ಲಿ ಏರುಪೇರು.

**ತುಲಾ:** ಭಾಷಣಕಾರರಿಗೆ ಗೌರವ ದೊರೆಯುತ್ತದೆ, ಅಧಿಕಾರಿಗಳಿಂದ ನೋವು ಮತ್ತು ನಿರಾಸೆ, ಅಧಿಕ ಖರ್ಚು.

**ವೃಶ್ಚಿಕ:** ಒತ್ತಡದಿಂದ ನಿದ್ರಾಭಂಗ, ಬಂಧು-ಬಾಂಧವರೊಂದಿಗೆ ಶತ್ರುತ್ವ, ವಾಣಿಜ್ಯ ರಂಗದಲ್ಲಿರುವವರಿಗೆ ಆದಾಯ.

**ಧನಸ್ಸು:** ವಿದ್ಯಾರ್ಥಿಗಳಿಗೆ ಅಧ್ಯಯನದಲ್ಲಿ ಹಿನ್ನಡೆ, ಬಟ್ಟೆ ಉದ್ಯಮದವರಿಗೆ ಶುಭ, ಗೃಹ ನಿರ್ಮಾಣದಲ್ಲಿ ಯೋಚಿಸಿ ಮುನ್ನಡೆಯಿರಿ.

**ಮಕರ:** ಕೋರ್ಟ್ ಕಚೇರಿ ವ್ಯವಹಾರಗಳಲ್ಲಿ ಮುನ್ನಡೆ, ಮಕ್ಕಳಿಗಾಗಿ ಹಣವ್ಯಯ, ಸಾಕು ಪ್ರಾಣಿಗಳಿಂದ ತೊಂದರೆ.

**ಕುಂಭ:** ಸೇವಾ ಮನೋಭಾವದಿಂದ ಕೆಲಸಗಳಲ್ಲಿ ಶುಭ, ಅತಿಯಾದ ಮಾತಿನಿಂದ ಅವಮಾನ, ಆಭರಣ ವ್ಯಾಪಾರಿಗಳಿಗೆ ಶುಭ.

**ಮೀನ:** ಸಿವಿಲ್ ಕಾಂಟ್ರಾಕ್ಟರ್ ಗಳಿಗೆ ಶುಭ, ಉದ್ಯೋಗದಲ್ಲಿ ನಿರಾಸಕ್ತಿ, ಮಿತ್ರರಿಂದ ಹಿನ್ನಡೆ.

## ವಿಶ್ವ ಪಿನ್ಹೋಲ್ ಫೋಟೋಗ್ರಫಿ ದಿನ



ವಿಶ್ವ ಪಿನ್ಹೋಲ್ ಛಾಯಾಗ್ರಹಣ ದಿನವು ವಾರ್ಷಿಕವಾಗಿ ಏಪ್ರಿಲ್ನಲ್ಲಿ ಕೊನೆಯ ಭಾನುವಾರದಂದು ಬರುತ್ತದೆ ಮತ್ತು ಈ ವರ್ಷ ಇದನ್ನು ಏಪ್ರಿಲ್ 28 ರಂದು ಆಚರಿಸಲಾಗುತ್ತದೆ. ಈ ದಿನವು ಪಿನ್ಹೋಲ್ ಛಾಯಾಗ್ರಹಣದ ಕಲೆಯನ್ನು ಹವ್ಯಾಸ ಅಥವಾ ವೃತ್ತಿಯನ್ನಾಗಿ ಆಯ್ಕೆ ಮಾಡುವ ಮೂಲಕ ಅನ್ವೇಷಿಸುವ ಗುರಿಯನ್ನು ಹೊಂದಿದೆ. ಈ ವಿಶಿಷ್ಟ ಮತ್ತು ಪುರಾತನ ಪ್ರಕಾರದ ಛಾಯಾಗ್ರಹಣದ ಬಗ್ಗೆ ಇನ್ನಷ್ಟು ತಿಳಿದುಕೊಳ್ಳಲು ಆರಂಭಿಕರಿಗೆ ಸಹಾಯ ಮಾಡಲು ತಜ್ಞರು ವಿಭಿನ್ನ ತಂತ್ರಗಳನ್ನು ಹಂಚಿಕೊಳ್ಳುತ್ತಾರೆ. ಪಿನ್ಹೋಲ್ ಫೋಟೋಗ್ರಫಿಯ ಸಾರವನ್ನು ಉತ್ತೇಜಿಸಲು ವಿಶ್ವ ಪಿನ್ಹೋಲ್ ಫೋಟೋಗ್ರಫಿ ದಿನವನ್ನು ರಚಿಸಲಾಗಿದೆ. ಪಿನ್ಹೋಲ್ ಛಾಯಾಗ್ರಹಣದಲ್ಲಿ ತೊಡಗಿಸಿಕೊಳ್ಳಲು ಮತ್ತು ಕೆಲವು ಅದ್ಭುತ ಚಿತ್ರಗಳನ್ನು ತೆಗೆದುಕೊಳ್ಳಲು ಜನರನ್ನು ಪ್ರೋತ್ಸಾಹಿಸಲಾಗುತ್ತದೆ. ವಿಶ್ವ ಪಿನ್ಹೋಲ್ ಛಾಯಾಗ್ರಹಣ ದಿನವು ಹೇಗೆ ಪ್ರಾರಂಭವಾಯಿತು ಎಂಬುದರ ಇತಿಹಾಸವು ಅಸ್ಪಷ್ಟವಾಗಿದೆ, ಆದರೆ ಹೆಚ್ಚಿನ ಮೂಲಗಳು ಇದು ಏಪ್ರಿಲ್ 2001 ರಲ್ಲಿ ಪ್ರಾರಂಭವಾಯಿತು ಎಂದು ಹೇಳುತ್ತದೆ. ಆದಾಗ್ಯೂ, ಪಿನ್ಹೋಲ್ ಛಾಯಾಗ್ರಹಣದ ಇತಿಹಾಸವು ಹೆಚ್ಚು ವಿಸ್ತಾರವಾಗಿದೆ ಮತ್ತು ಶತಮಾನಗಳ ಹಿಂದಿನದು. ಪಿನ್ಹೋಲ್ ಛಾಯಾಗ್ರಹಣದ ಮೊದಲ ವಿವರಣೆಯು ಸ್ಕಾಟಿಷ್ ಸಂಶೋಧಕ ಡೇವಿಡ್ ಬ್ರೂಸ್ಟರ್ನ ದಿ ಸ್ಟಿರಿಯೊಸ್ಕೋಪ್ಸ್ ಎಂಬ ಪುಸ್ತಕದಲ್ಲಿ 1856 ರ ಹಿಂದಿನದು, ಆದರೆ ಪಿನ್ಹೋಲ್ನ ತತ್ವವು ಯುಗಗಳಿಂದಲೂ ತಿಳಿದಿದೆ. 4 ನೇ ಶತಮಾನದಲ್ಲಿ, ಅರಿಸ್ಟಾಟಲ್ ಮರದ ಎಲೆಗಳ ನಡುವಿನ ತೆರೆಯುವಿಕೆಯ ಮೂಲಕ ಹೊಳೆಯುವ ಬೆಳಕು ನೆಲದ ಮೇಲೆ ಸೂರ್ಯನ ಪ್ರಕ್ಷೇಪಣವನ್ನು ನೀಡುತ್ತದೆ ಎಂದು ಉಲ್ಲೇಖಿಸಿದ್ದಾನೆ. 14 ನೇ ಶತಮಾನದಲ್ಲಿ, ವಿವಿಧ ವಿಜ್ಞಾನಿಗಳು ಸೌರ ಗ್ರಹಣಗಳು ಮತ್ತು ಬೆಳಕಿನ ತರಂಗಾಂತರಗಳನ್ನು ಅಧ್ಯಯನ ಮಾಡಲು ಈ ತಂತ್ರವನ್ನು ಬಳಸಲಾರಂಭಿಸಿದರು. ಲಿಯೊನಾರ್ಡೊ ಡಾ ವಿನ್ಸಿಯಿಂದ ಕಲೆಯಲ್ಲಿ ಪಿನ್ಹೋಲ್ ಬಳಕೆ 15 ನೇ ಶತಮಾನದಲ್ಲಿ ನಡೆಯಿತು, ಅವರು ಪಾರದರ್ಶಕ ಪರದೆಯಿಂದ ಚಿತ್ರವನ್ನು ಹೇಗೆ ಕಂಡುಹಿಡಿಯಬಹುದು ಎಂಬುದನ್ನು ವಿವರಿಸಿದರು. ವಿಜ್ಞಾನಿಗಳು ತಮ್ಮ ಪಿನ್ಹೋಲ್ ದೂರದರ್ಶಕಗಳ ಮೂಲಕ ಸೂರ್ಯನನ್ನು ನೇರವಾಗಿ ನೋಡಿದಾಗ ಕುರುಡುತನದಿಂದ ಬಳಲುತ್ತಿದ್ದಾರೆ. ಕಣ್ಣಿನ ಹಾನಿಯನ್ನು ತಡೆಗಟ್ಟುವ ಸಲುವಾಗಿ, ಅವರು ಸೂರ್ಯನ ಯೋಜಿತ ಚಿತ್ರವನ್ನು ಅಧ್ಯಯನ ಮಾಡಲು ಕ್ಯಾಮೆರಾ ಅಬ್ಸ್ಕ್ಯೂರಾವನ್ನು ಬಳಸಲು ಪ್ರಾರಂಭಿಸಿದರು. ಅಂತಿಮವಾಗಿ, 1839 ರಲ್ಲಿ, ಡಾಗ್ಯುರೋಟೈಪ್ ರೂಪದಲ್ಲಿ ಛಾಯಾಗ್ರಹಣದ ಅಧಿಕೃತ ಆವಿಷ್ಕಾರವು ನಡೆಯಿತು ಮತ್ತು ಅತ್ಯಂತ ಪ್ರಸಿದ್ಧವಾದ ಪಿನ್ಹೋಲ್ ಚಿತ್ರವನ್ನು 1890 ರಲ್ಲಿ ಜಾರ್ಜ್ ಡೇವಿಸನ್ ತೆಗೆದರು.

# ಭಾರತೀಯವಾಯುಪಡೆಗೆ ಯ್ಯಾಂಪೇಜ್ ಮಿಸೈಲ್ ಸೇರ್ಪಡೆ!



**ದೆಹಲಿ:** ಭಾರತೀಯ ವಾಯುಪಡೆ ಇದೀಗ ಯುದ್ಧ ವಿಮಾನಗಳ ಫ್ಲೀಟ್‌ಗಳಿಗೆ ಒಂದಿಷ್ಟು ಶಕ್ತಿ ತುಂಬೋ ಕೆಲಸ ಮಾಡಿದೆ. ಇಸ್ರೇಲ್ ಪಡೆಗಳು ಹೆಚ್ಚಾಗಿ ಬಳಸೋ ಯ್ಯಾಂಪೇಜ್ ಲಾಂಗ್-ರೇಂಜ್ ಸೂಪರ್‌ಸಾನಿಕ್ ಏರ್-ಟು-ಗ್ರೌಂಡ್ ಮಿಸೈಲ್‌ಗಳನ್ನ ವಾಯು ಪಡೆಗೆ ಹೊಸತಾಗಿ ಸೇರಿಸಿಕೊಂಡಿದೆ.

ಸುಮಾರು 200 ಕಿಮೀ ದೂರದ ಟಾರ್ಗೆಟ್‌ಗಳನ್ನ ಹೊಡೆದುರುಳಿಸೋ ಸಾಮರ್ಥ್ಯ ಈ ಮಿಸೈಲ್ ಹೊಂದಿದೆ ಎನ್ನಲಾಗ್ತಿದೆ. ಹೈ-ಸ್ಪೀಡ್ ಲೋ ಡ್ರ್ಯಾಗ್-ಮಾರ್ಕ್ 2 ಮಿಸೈಲ್ ಅಂತ ಕರೆಯಲಾಗೋ ಈ ಕ್ಷಿಪಣಿಯನ್ನ ಇಸ್ರೇಲ್ ವಾಯು ಪಡೆ ಸಾಕಷ್ಟು ಬಾರಿ ಉಪಯೋಗಿಸಿದೆ. ಅದು ಕೂಡ ಇತ್ತೀಚೆಗೆ ಇರಾನ್ ವಿರುದ್ಧ ನಡೆಸಲಾದ ದಾಳಿಯಲ್ಲಿ ಇದನ್ನ ಬಳಸಿದೆ ಅಂತೇಳಲಾಗ್ತಿದೆ. ಇನ್ನು ಈ ರಾಂಪೇಜ್ ಕ್ಷಿಪಣಿಯನ್ನ ಭಾರತೀಯ ವಾಯು ಪಡೆ ರಷ್ಯಾ ಮೂಲದ ಏರ್ಕ್ರಾಫ್ಟ್ ಫ್ಲೀಟ್‌ನಲ್ಲಿ ಸೇರಿಸಿದೆ. ಈ ಫ್ಲೀಟ್‌ನಲ್ಲಿ Su-30 MKI, MiG-29 ಮತ್ತು Jaguarಗಳಂತಹ ಫೈಟರ್ ಜೆಟ್‌ಗಳಿವೆ. ಜೊತೆಗೆ ಈ ಕ್ಷಿಪಣಿಯನ್ನ ಒಉ-29ಏ ಅನ್ನೋ ನೇವಲ್ ಫೈಟರ್ ಜೆಟ್‌ಗಳೊಂದಿಗೂ ಸೇರಿಸಲಾಗಿದೆ. ಈ ಮಿಸೈಲ್ ನಿಯೋಜನೆಯಿಂದ ಕಮ್ಯುನಿಕೇಷನ್ ಸೆಂಟರ್ಸ್ ಮತ್ತು ರೇಡಾರ್ ಸ್ಟೇಷನ್‌ಗಳಂತಹ ಟಾರ್ಗೆಟ್‌ಗಳನ್ನ ಕೂಡ ಉಡಾಯಿಸಬಹುದಾಗಿದೆ.

# ಭಾರತದತ್ತ ಸಾಗುತ್ತಿದ್ದ ಹಡಗಿನ ಮೇಲೆ ಹೌದಿಗಳ ಕ್ಷಿಪಣಿ ದಾಳಿ

**ಸನಾ:** ಕೆಂಪು ಸಮುದ್ರದಲ್ಲಿ ಪ್ರಯಾಣಿಸುತ್ತಿದ್ದ 'ಅಂಡ್ರೊಮೆಡ ಸ್ಟಾರ್' ಟ್ಯಾಂಕರ್ ಹಡಗಿನ ಮೇಲೆ ಮೂರು ಕ್ಷಿಪಣಿ ದಾಳಿ ನಡೆಸಿರುವುದಾಗಿ ಯೆಮನ್ನ ಹೌದಿಗಳು ಶನಿವಾರ ಹೇಳಿದ್ದಾರೆ. ಪನಾಮಾದ ಧ್ವಜ ಹೊಂದಿರುವ 'ಅಂಡ್ರೊಮೆಡ ಸ್ಟಾರ್' ಟ್ಯಾಂಕರ್(ತೈಲ ಸಾಗಿಸುವ ಹಡಗು) ಬ್ರಿಟನ್ ಸಂಸ್ಥೆಯ ಮಾಲಕತ್ವ ಹೊಂದಿದೆ ಎಂದು ಹೌದಿಗಳ ಹೇಳಿಕೆ ತಿಳಿಸಿದೆ. ಆದರೆ ಹಡಗಿನ ಈಗಿನ ಮಾಲಕ ಸೀಶೆಲ್ಸ್‌ನಲ್ಲಿ ನೋಂದಾವಣೆ ಮಾಡಿಕೊಂಡಿದ್ದು ರಶ್ಯಕ್ಕೆ ಸಂಬಂಧಿಸಿದ ತೈಲವನ್ನು ರಶ್ಯದಿಂದ ಗುಜರಾತ್ನ ವದಿನಾರ್ ಬಂದರಿಗೆ ಸಾಗಿಸುತ್ತಿತ್ತು ಎಂದು ವರದಿಯಾಗಿದೆ. ದಾಳಿಯಲ್ಲಿ ಯಾರಿಗೂ ಗಾಯವಾಗಿಲ್ಲ. ಆದರೆ ಹಡಗಿಗೆ ಹಾನಿಯಾಗಿದೆ ಎಂದು ಅಮೆರಿಕದ ಸೆಂಟ್ರಲ್ ಕಮಾಂಡ್ ಮಾಹಿತಿ ನೀಡಿದೆ.



## ಅಮೆರಿಕದ ಚುನಾವಣೆಯ ಮೇಲೆ ಪ್ರಭಾವ ಬೀರಲು ಚೀನಾ ಪ್ರಯತ್ನ: ಬ್ಲಿಂಕೆನ್

**ವಾಷಿಂಗ್ಟನ್:** ಅಮೆರಿಕದಲ್ಲಿ ಈ ವರ್ಷ ನಡೆಯಲಿರುವ ಅಧ್ಯಕ್ಷೀಯ ಚುನಾವಣೆಯಲ್ಲಿ ಹಸ್ತಕ್ಷೇಪ ನಡೆಸಲು ಮತ್ತು ಪ್ರಭಾವ ಬೀರಲು ಚೀನಾ ಪ್ರಯತ್ನಿಸಿರುವುದಕ್ಕೆ ಪುರಾವೆಗಳಿವೆ



ಎಂದು ಅಮೆರಿಕದ ವಿದೇಶಾಂಗ ಸಚಿವ ಆಂಟೊನಿ ಬ್ಲಿಂಕನ್ ಹೇಳಿದ್ದಾರೆ. ಕಳೆದ ನವೆಂಬರ್ ನಲ್ಲಿ ಸ್ಯಾನ್ಫ್ರಾನ್ಸಿಸ್ಕೋದಲ್ಲಿ ನಡೆದ ಶೃಂಗಸಭೆಯಲ್ಲಿ ಚೀನಾ ಅಧ್ಯಕ್ಷ ಕ್ಸಿಜಿಂಪಿಂಗ್‌ರನ್ನು ಭೇಟಿಯಾಗಿದ್ದ ಅಮೆರಿಕ ಅಧ್ಯಕ್ಷ ಜೋ ಬೈಡನ್ 20244 ಚುನಾವಣೆಯಲ್ಲಿ ಹಸ್ತಕ್ಷೇಪ ನಡೆಸದಂತೆ ಸಂದೇಶ ನೀಡಿದ್ದರು. ಹಸ್ತಕ್ಷೇಪ ಮಾಡುವುದಿಲ್ಲ ಎಂದು ಕ್ಸಿಜಿಂಪಿಂಗ್ ವಾಗ್ದಾನ ನೀಡಿದ್ದರು. ಆದರೆ ಚುನಾವಣೆಯ ಮೇಲೆ ಪ್ರಭಾವ ಬೀರುವ ಮತ್ತು ಮಧ್ಯಪ್ರವೇಶಿಸುವ ಪ್ರಯತ್ನಗಳ ಪುರಾವೆಗಳು ಲಭಿಸಿವೆ. ಈ ಪ್ರಯತ್ನಗಳು ಸ್ಥಗಿತಗೊಂಡಿರುವುದನ್ನು ಖಚಿತಪಡಿಸಿಕೊಳ್ಳಲು ನಾವು ಬಯಸುತ್ತಿದ್ದೇವೆ. ನಮ್ಮ ಚುನಾವಣೆಯಲ್ಲಿ ಚೀನಾದ ಯಾವುದೇ ಹಸ್ತಕ್ಷೇಪ ಸ್ವೀಕಾರಾರ್ಹವಲ್ಲ ಎಂದು ಬ್ಲಿಂಕೆನ್ ಹೇಳಿರುವುದಾಗಿ ಮಾಧ್ಯಮಗಳು ವರದಿ ಮಾಡಿವೆ.

## ರಫಾ ಕಾರ್ಯಾಚರಣೆಗೂ ಮುನ್ನ ಒತ್ತೆಯಾಳು ಒಪ್ಪಂದಕ್ಕೆ ಅಂತಿಮ ಅವಕಾಶ : ಇಸ್ರೇಲ್



**ಟೆಲ್ ಅವೀವ್:** ಗಾಝಾ ಪಟ್ಟಿಯ ರಫಾ ನಗರದ ಮೇಲೆ ದೀರ್ಘ ಯೋಜಿತ ಪದಾತಿ ದಳದ ಕಾರ್ಯಾಚರಣೆ ಆರಂಭಕ್ಕೂ ಮುನ್ನ ಕದನ ವಿರಾಮ ಮಾತುಕತೆ ಹಾಗೂ ಒತ್ತೆಯಾಳು ಬಿಡುಗಡೆಯ ಕುರಿತ ಒಪ್ಪಂದಕ್ಕೆ ಬರಲು ಅಂತಿಮ ಅವಕಾಶವನ್ನು ನೀಡುತ್ತಿದ್ದೇವೆ ಎಂದು ಇಸ್ರೇಲ್ ಈಜಿಪ್ಟ್‌ಗೆ ಕಟ್ಟುನಿಟ್ಟಾದ ಎಚ್ಚರಿಕೆ ನೀಡಿದೆ. ಒತ್ತೆಯಾಳು ಒಪ್ಪಂದವನ್ನು ಮುಂದಿಟ್ಟುಕೊಂಡು ಹಮಾಸ್, ವಿಶೇಷವಾಗಿ ಗಾಝಾದಲ್ಲಿ ಅದರ ಮುಖಂಡ ಯಾಹ್ಯಾ ಸಿನ್ವರ್ ವಿಳಂಬ ತಂತ್ರ ಅನುಸರಿಸುವುದಕ್ಕೂ ನಮ್ಮ ಒಪ್ಪಿಗೆಯಿಲ್ಲ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ. ಇಸ್ರೇಲ್ನ ಕದನ ವಿರಾಮ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಪ್ರತಿಕ್ರಿಯಿಸುವುದಾಗಿ ಹಮಾಸ್ ಶನಿವಾರ ಹೇಳಿದೆ. 'ಎಪ್ರಿಲ್ 13ರಂದು ಈಜಿಪ್ಟ್ ಮತ್ತು ಖತರ್ ಮಧ್ಯಸ್ಥಿಕೆದಾರರಿಗೆ ಸಲ್ಲಿಸಿರುವ ಪ್ರಸ್ತಾವನೆಗೆ ಯಹೂದಿ ಆಕ್ರಮಣಕಾರರು ನೀಡಿರುವ ಅಧಿಕೃತ ಪ್ರತಿಕ್ರಿಯೆ ಇಂದು(ಎಪ್ರಿಲ್ 27) ನಮ್ಮ ಕೈಸೇರಿದೆ. ಅದನ್ನು ಕೂಲಂಕುಷವಾಗಿ ಪರಿಶೀಲಿಸಿ ನಮ್ಮ ಪ್ರತಿಕ್ರಿಯೆ ನೀಡಲಿದ್ದೇವೆ' ಎಂದು ಹಮಾಸ್ನ ಗಾಝಾ ವಿಭಾಗದ ಸಹಾಯಕ ಮುಖ್ಯಸ್ಥ ಖಲೀಲ್ ಅಲ್-ಹಯಾ ಹೇಳಿದ್ದಾರೆ. ರಫಾದ ಮೇಲೆ ಇಸ್ರೇಲ್ನ ನಿರೀಕ್ಷಿತ ಆಕ್ರಮಣ ಮತ್ತು ಹಮಾಸ್-ಇಸ್ರೇಲ್ ನಡುವೆ ಒತ್ತೆಯಾಳು ಒಪ್ಪಂದಕ್ಕೆ ಪ್ರಯತ್ನಿಸುವಸಲುವಾಗಿ ಇಸ್ರೇಲ್ನ ಉನ್ನತ ಅಧಿಕಾರಿಗಳು ಹಾಗೂ ಈಜಿಪ್ಟ್‌ನ ಉನ್ನತ ಮಟ್ಟದ ನಿಯೋಗದ ನಡುವೆ ನಡೆಯುತ್ತಿದ್ದ ಮಾತುಕತೆ ಶುಕ್ರವಾರ ಅಂತ್ಯಗೊಂಡ ಬಳಿಕ ಇಸ್ರೇಲ್ ಈ ಎಚ್ಚರಿಕೆ ಸಂದೇಶ ರವಾನಿಸಿದೆ.

## ಭಾರತ ಮೂಲದ 3 ಕಂಪನಿಗಳು ಸೇರಿದಂತೆ 12ಕ್ಕೂ ಹೆಚ್ಚು ಸಂಸ್ಥೆಗಳಿಗೆ ಅಮೆರಿಕ ನಿರ್ಬಂಧ

**ವಾಷಿಂಗ್ಟನ್:** ಇರಾನ್ ಜೊತೆ ವಹಿವಾಟು ಹೊಂದಿರುವ ಆರೋಪದ ಮೇರೆಗೆ ಭಾರತ ಮೂಲದ 3 ಕಂಪನಿಗಳು ಸೇರಿದಂತೆ 12ಕ್ಕೂ ಹೆಚ್ಚು ಸಂಸ್ಥೆಗಳಿಗೆ ಅಮೆರಿಕ ನಿರ್ಬಂಧ ಹೇರಿದೆ. ಇರಾನಿಯನ್ ಸೇನೆ ಜೊತೆ ಅಕ್ರಮ ವ್ಯಾಪಾರ ವಹಿವಾಟು ಹೊಂದಿರುವ 12ಕ್ಕೂ ಅಧಿಕ ಕಂಪನಿಗಳು, ಹಡುಗುಗಳು ಮತ್ತು ಉದ್ಯಮಿಗಳ ಮೇಲೆ ಅಮೆರಿಕ ನಿರ್ಬಂಧ ವಿಧಿಸಿದ್ದು, ಇದರಲ್ಲಿ ಭಾರತ ಮೂರು ಕಂಪನಿಗಳು ಸೇರಿವೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ರಷ್ಯಾ-ಉಕ್ರೇನ್ ಯುದ್ಧ ಸಂದರ್ಭದಲ್ಲಿ ಈ ಕಂಪನಿಗಳು, ಹಡಗುಗಳು ಮತ್ತು ವ್ಯಕ್ತಿಗಳು ಇರಾನ್ನ ಮಾನವ ರಹಿತ ವೈಮಾನಿಕ ವಾಹನ- ಡ್ರೋನ್ ಗಳನ್ನು ರಷ್ಯಾಗೆ ಪೂರೈಕೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದವು ಎಂದು ಅಮೆರಿಕದ ಆರೋಪಿಸಿದೆ. ಇರಾನ್ನ ಸಾಗರೋತ್ತರ ವ್ಯಾಪಾರ ವಹಿವಾಟು ನೋಡಿಕೊಳ್ಳುತ್ತಿರುವ ಕಂಪನಿಗಳಲ್ಲಿ ಸಹರಾ ಥಂಡರ್ ಪ್ರಮುಖವಾಗಿದ್ದು, ಈ ಕಂಪನಿಗೆ ಭಾರತೀಯ ಮೂಲದ ಮೂರು ಕಂಪನಿಗಳು ಸಹಾಯ ನೀಡುತ್ತಿವೆ. ಹೀಗಾಗಿ ಭಾರತೀಯ ಮೂಲದ ಜೆನ್ ಶಿಪ್ಪಿಂಗ್, ಪೋರ್ಟ್ ಇಂಡಿಯಾ ಪ್ರೈವೆಟ್ ಲಿಮಿಟೆಡ್ ಮತ್ತು ಸೀ ಆರ್ಟ್ ಶಿಪ್ ಮ್ಯಾನೇಜ್ಮೆಂಟ್ ಪ್ರೈವೆಟ್ ಲಿಮಿಟೆಡ್ಗೆ ಅಮೆರಿಕ ನಿರ್ಬಂಧ ವಿಧಿಸಿದೆ.





# ಈರುಳ್ಳಿ ರಫ್ತು ಮಾಡಲು ಕೇಂದ್ರ ಸರ್ಕಾರ ಅನುಮತಿ

**ನವದೆಹಲಿ:** ಬಾಂಗ್ಲಾದೇಶ, ಯುಎಇ, ಭೂತಾನ್, ಬಹ್ರೇನ್, ಮಾರಿಷಸ್ ಮತ್ತು ಶ್ರೀಲಂಕಾ ಎಂಬ ಆರು ದೇಶಗಳಿಗೆ 99,150 ಮೆಟ್ರಿಕ್ ಟನ್ ಈರುಳ್ಳಿ ರಫ್ತು ಮಾಡಲು ಸರ್ಕಾರ ಅನುಮತಿ ನೀಡಿದೆ ಎಂದು ಗ್ರಾಹಕ ವ್ಯವಹಾರಗಳ ಸಚಿವಾಲಯ ಶನಿವಾರ ತಿಳಿಸಿದೆ.

ಹಿಂದಿನ ವರ್ಷಕ್ಕೆ ಹೋಲಿಸಿದರೆ 2023-24ರಲ್ಲಿ ಖಾರಿಫ್ ಮತ್ತು ರಾಬಿ ಬೆಳೆಗಳ ಉತ್ಪಾದನೆ ಕಡಿಮೆ ಎಂದು ಅಂದಾಜಿಸಲಾಗಿರುವುದರಿಂದ ಮತ್ತು ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಬೇಡಿಕೆ ಹೆಚ್ಚಿರುವುದರಿಂದ ಸಾಕಷ್ಟು ದೇಶೀಯ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಬೆಲೆಗಳನ್ನು ನಿಯಂತ್ರಣದಲ್ಲಿಡಲು ಈರುಳ್ಳಿ ರಫ್ತು ಮೇಲೆ ನಿಷೇಧ ಹೇರಲಾಗಿದೆ.

ಈ ದೇಶಗಳಿಗೆ ಈರುಳ್ಳಿ ರಫ್ತು ಮಾಡುವ ಏಜೆನ್ಸಿಯಾದ ರಾಷ್ಟ್ರೀಯ ಸಹಕಾರಿ ರಫ್ತು ಲಿಮಿಟೆಡ್ (ಎನ್ಸಿಇಎಲ್) ದೇಶೀಯ ಈರುಳ್ಳಿಯನ್ನು ಇ-ಪ್ಲಾಟ್ಫಾರ್ಮ್ ಮೂಲಕ ಎಲ್ 1 ಬೆಲೆಯಲ್ಲಿ ರಫ್ತು ಮಾಡಲು ಪಡೆದುಕೊಂಡಿದೆ ಮತ್ತು ದೇಶದ ಸರ್ಕಾರದಿಂದ ನಾಮನಿರ್ದೇಶನಗೊಂಡ ಏಜೆನ್ಸಿಗಳಿಗೆ ಶೇಕಡಾ 100 ರಷ್ಟು ಮುಂಗಡ ಪಾವತಿ ಆಧಾರದ ಮೇಲೆ ಮಾತುಕತೆಯ ದರದಲ್ಲಿ ಪೂರೈಸಿದೆ ಎಂದು ಆಹಾರ ಸಚಿವಾಲಯದ ಹೇಳಿಕೆ ತಿಳಿಸಿದೆ.

# ಉತ್ತರ ಪತ್ರಿಕೆಯಲ್ಲಿ 'ಜೈ ಶ್ರೀ ರಾಮ್' ಬರೆದ ವಿದ್ಯಾರ್ಥಿಗಳು ಪಾಸ್



**ಲಕ್ನೋ:** ಉತ್ತರ ಪ್ರದೇಶದ ವಿಶ್ವವಿದ್ಯಾನಿಲಯದಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳು ಉತ್ತರ ಪ್ರತಿಕೆಯಲ್ಲಿ ಜೈಶ್ರೀರಾಮ ಮತ್ತು ಕ್ರಿಕೆಟಿಗರ ಹೆಸರನ್ನು ಬರೆದಿದ್ದಾರೆ. ಇದೀಗ ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ.

ಪ್ರಶ್ನೆಗೆ ಉತ್ತರ ಬರೆಯುವ ಬದಲು ಜೈ ಶ್ರೀರಾಮ್, ಕ್ರಿಕೆಟಿಗರ ಹೆಸರನ್ನು ಬರೆದಿದ್ದು, ಇದಕ್ಕೆ ಅಲ್ಲಿನ ಶಿಕ್ಷಕರು ಅಂಕವನ್ನು ನೀಡಿದ್ದಾರೆ ಎಂದು ಆರೋಪಿಸಲಾಗಿದೆ.ಹಣ ಪಡೆದು ಈ ಉತ್ತರ ಪ್ರತಿಕೆಗೆ ಅಂಕ ನೀಡಲಾಗಿದೆ ಎಂದು ಹೇಳಲಾಗಿದೆ.

ಪ್ರತಿಗಳ ಮೌಲ್ಯಮಾಪನದ ಸಮಯದಲ್ಲಿ ಆರ್‌ಟಿಐ ಪ್ರತಿಕ್ರಿಯೆಯಿಂದ ಈ ಅಕ್ರಮ ಬಹಿರಂಗಗೊಂಡಿದೆ ಎಂದು ಹೇಳಲಾಗಿದೆ. ಇಂತಹ ಉತ್ತರ ಪ್ರತಿಕೆಯನ್ನು ಮರುಮೌಲ್ಯಮಾಪನ ಮಾಡಿದಾಗ ಈ ಪ್ರಕರಣ ಬೆಳಕಿಗೆ ಬಂದಿದೆ.

ಈ ಬಗ್ಗೆ ಮಾತನಾಡಿದ ಉಪಕುಲಪತಿ ವಂದನಾ ಸಿಂಗ್ ಅವರು, ವಿದ್ಯಾರ್ಥಿಗಳಿಗೆ ಹೆಚ್ಚು ಅಂಕ ನೀಡಲಾಗಿದೆ ಎಂಬ




ಆರೋಪವಿತ್ತು. ಹಾಗಾಗಿ ನಾವು ಸಮಿತಿಯನ್ನು ರಚಿಸಿದ್ದೇವೆ. ಆ ಸಮಿತಿಯು ತನ್ನ ವರದಿಯಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚು ಅಂಕಗಳನ್ನು ನೀಡಲಾಗಿದೆ ಎಂದು ಹೇಳಿದ್ದಾರೆ.

ಇನ್ನು ಈ ಉತ್ತರ ಪ್ರತಿಕೆಯಲ್ಲಿ ಜೈ ಶ್ರೀರಾಮ ಘೋಷಣೆ ಬಗ್ಗೆ ಯಾವುದು ನಮ್ಮ ಗಮನಕ್ಕೆ ಬಂದಿಲ್ಲ ಎಂದು ಉಪಕುಲಪತಿ ವಂದನಾ ಸಿಂಗ್ ಹೇಳಿದರು. ರಾಜ್ಯಭವನಕ್ಕೂ ಈ ಬಗ್ಗೆ ಪತ್ರ ಬರೆಯಲಾಗಿದ್ದು, ತನಿಖೆ ನಡೆಸಲಾಗುವುದು ಎಂದು ಹೇಳಿದ್ದಾರೆ. ಇಂತಹ ಘಟನೆ ಪುನರಾವರ್ತನೆಯಾಗದಂತೆ ಶಿಕ್ಷಕರಿಗೆ ಎಚ್ಚರಿಕೆ ನೀಡಲಾಗಿದೆ.ಈ ಕೃತ್ಯದಲ್ಲಿ ಭಾಗಿಯಾಗಿರುವ ಶಿಕ್ಷಕರನ್ನು ವಜಾಗೊಳಿಸಲು ಸಮಿತಿ ಶಿಫಾರಸು ಮಾಡಿದ್ದೇನೆ ಎಂದಿದ್ದಾರೆ.

# ಅಬಕಾರಿ ನೀತಿ ಪ್ರಕರಣದಲ್ಲಿ ಇಡಿ ಅತ್ಯಂತ ಉತ್ತಮವಾಗಿ ವರ್ತಿಸಿದೆ : ಕೇಜ್ರಿವಾಲ್

**ನವದೆಹಲಿ:** ಆಪಾದಿತ ಅಬಕಾರಿ ನೀತಿ ಹಗರಣದಿಂದ ಉಂಟಾದ ಮನಿ ಲಾಂಡರಿಂಗ್ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯವು (ಇಡಿ) ಅತ್ಯಂತ ಉನ್ನತ ರೀತಿಯಲ್ಲಿ ವರ್ತಿಸಿದೆ ಎಂದು ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಶನಿವಾರ ಸುಪ್ರೀಂ ಕೋರ್ಟ್ಗೆ ತಿಳಿಸಿದ್ದಾರೆ.

ಪ್ರಕರಣದಲ್ಲಿ ತನ್ನ ಬಂಧನವನ್ನು ಪ್ರಶ್ನಿಸಿ ಸಲ್ಲಿಸಿದ ಅರ್ಜಿಗೆ ಸಲ್ಲಿಸಿದ ಇಡಿ ಉತ್ತರ ಅಫಿಡವಿಟ್ಗೆ ಮರುಜೋಡಣೆಯಲ್ಲಿ, ಕೇಜ್ರಿವಾಲ್ ಅವರು ಯಾವಾಗಲೂ ತನಿಖೆಗೆ ಸಹಕರಿಸಿದ್ದಾರೆ ಎಂದು



ಹೇಳಿದರು. ಆಮ್ ಆದ್ಮಿ ಪಕ್ಷದ (ಎಎಪಿ) ನಾಯಕ, ಇಡಿ, ಸುಪ್ರೀಂ ಕೋರ್ಟ್ಗೆ ಸಲ್ಲಿಸಿದ ಉತ್ತರ ಅಫಿಡವಿಟ್ನಲ್ಲಿ, ಸಮನ್ಸ್ ನೀಡಿದರೂ ತನಿಖಾಧಿಕಾರಿ (ಐಒ) ಮುಂದೆ ಹಾಜರಾಗದಿರುವುದು ಅವರ ಬಂಧನಕ್ಕೆ ಅಗತ್ಯವಾದ ಒಂದು ಕಾರಣ ಎಂದು ಹೇಳಿದೆ. ಅಂತಹ ಪ್ರಕರಣದಲ್ಲಿ, ಕಸ್ಟಡಿ ವಿಚಾರಣೆಯು ಆರೋಪಿಗಳನ್ನು ಗುಣಾತ್ಮಕವಾಗಿ ಹೆಚ್ಚು ಹೊರಹೊಮ್ಮುವಿಕೆ ಆಧಾರಿತ ವಿಚಾರಣೆಗೆ ಕಾರಣವಾಗುತ್ತದೆ ಎಂಬ ಅಭಿಪ್ರಾಯವನ್ನು ರೂಪಿಸುವಲ್ಲಿ ಐಒ ಸಮರ್ಥನೆಯಾಗಿದೆ ಎಂದು ಇಡಿ ತನ್ನ ಉತ್ತರದಲ್ಲಿ ಹೇಳಿದೆ ಎಂದು ಕೇಜ್ರಿವಾಲ್ ಹೇಳಿದರು.

# ವ್ಯಾಂಪೈಯರ್ ಫೇಶಿಯಲ್ ಮಾಡಿಸಿಕೊಂಡ ಮೂವರಿಗೆ ಹೆಚ್ಐವಿ

**ಮ್ಯಾಕ್ಸಿಕೊ:** ಸ್ಪಾದಲ್ಲಿ ವ್ಯಾಂಪೈಯರ್ ಫೇಶಿಯಲ್ ಮಾಡಿಸಿಕೊಂಡ ಮೂವರಲ್ಲಿ ಹೆಚ್ಐವಿಸೋಂಕಿಗೆ ಗುರಿಯಾಗಿದ್ದು ಮ್ಯಾಕ್ಸಿಕೊ ಆರೋಗ್ಯ ಇಲಾಖೆ ಎಚ್ಚರಿಕೆ ರವಾನಿಸಿದೆ.



ಫೇಸ್ಲಿಫ್ಟ್ ಸರ್ಜರಿ ಬದಲು ಸುಲಭವಾಗಿ ದೊರೆಯುವ ಹಾಗೇ ಕಡಿಮೆ ಖರ್ಚಿನ ಕಾಸ್ಮೆಟಿಕ್ ಇಂಜೆಕ್ಷನ್ ವಿಧಾನ ಇದಾಗಿದ್ದು ಅನೇಕರು ಈ ಫೇಶಿಯಲ್ ಟ್ರೀಟ್ಮೆಂಟ್ಗೆ ಮುಗಿಬಿದ್ದಿದ್ದಾರೆ. ಆದರೆ ಸುಲಭವಾಗಿ ಮಾಡಿಸಿಕೊಳ್ಳಬಹುದಾದರೂ ಸ್ವಲ್ಪ ಯಾಮಾರಿದರೂ ಗಂಭೀರ ಆರೋಗ್ಯ ಸಮಸ್ಯೆ ಬರುವುದು ಪಕ್ಕಾ ಆಗಿದೆ.

ಈ ಫೇಶಿಯಲ್ ಟ್ರೀಟ್ಮೆಂಟ್ನಲ್ಲಿ ಕೈಯಿಂದ ರಕ್ತ ತೆಗೆದು ಅದರಲ್ಲಿನ ಪ್ಲೇಟ್ಲೆಟ್ಸ್ ಕಣಗಳನ್ನು ಬೇರ್ಪಡಿಸಿ ಸಣ್ಣ ಮೈಕ್ರೋ ಸೂಜಿಗಳ ಮೂಲಕ ಮುಖದಲ್ಲಿ ಇಂಜೆಕ್ಟ್ ಮಾಡಲಾಗುತ್ತದೆ. ಆದರೆ ಹಲವೆಡೆ ಈ ಟ್ರೀಟ್ಮೆಂಟ್ ಮಾಡುವಾಗ ಅನೇಕವೈದ್ಯಕೀಯಸೂಚನೆಗಳನ್ನು ಕಡೆಗಣಿಸಲಾಗಿದ್ದು ಸೂಜಿಗಳನ್ನು ಶುಚಿಗೊಳಿಸದೇ, ಸ್ಟೆರೈಲ್ ಮಾಡದೇ ಬಳಸಲಾಗುತ್ತಿದ್ದು ಇದರಿಂದ ಹೆಚ್ಐವಿ ಹರಡುತ್ತಿದೆ ಎಂದು ಒಂದು ತನಿಖಾ ವರದಿಯನ್ನು ಕೂಡ ಸಿದ್ಧಪಡಿಸಲಾಗಿತ್ತು. 2018ರಲ್ಲಿ ಅಲ್ಬುಕ್ಯುರಿಕ್ಯೂ ಎಂಬ ವಿಐಪಿ ಸ್ಪಾದಲ್ಲಿ ಮೊದಲ ಕೇಸ್ ಬೆಳಕಿಗೆ ಬಂದಿತ್ತು ಬಳಿಕ ನ್ಯೂ ಮ್ಯಾಕ್ಸಿಕೋ ಆರೋಗ್ಯ ಇಲಾಖೆ ಈ ಸ್ಪಾದಲ್ಲಿ ಇಂಜೆಕ್ಷನ್ ಪಡೆದವರಿಗೆ ಉಚಿತ ಆರೋಗ್ಯ ಸೇವೆಯನ್ನೂ ನೀಡಿತ್ತು.

## ಮಿಸ್ ಯುನಿವರ್ಸ್ ಬ್ಯೂನಸ್ ಐರಿಸ್ ಕಿರೀಟ ಗೆದ್ದ 60 ವರ್ಷದ ಮಹಿಳೆ

**ಬ್ಯೂನಸ್ ಐರಿಸ್:** ಅರ್ಜೆಂಟೀನಾದಲ್ಲಿ ನಡೆದ ಮಿಸ್ ಯುನಿವರ್ಸ್ ಬ್ಯೂನಸ್ ಐರಿಸ್ ಸ್ಪರ್ಧೆಯಲ್ಲಿ 60 ವರ್ಷದ ಅಲೆಕ್ಸಾಂಡ್ರಾ ಮರೀಸಾ ರಾಡ್ರಿಗಸ್ ಪ್ರಶಸ್ತಿ ಗೆದ್ದಿದ್ದು ದಾಖಲೆ ಬರೆದಿದ್ದಾರೆ.

60 ನೇ ವಯಸ್ಸಿನಲ್ಲಿ ಮಿಸ್ ಯುನಿವರ್ಸ್ ಕಿರೀಟ ಗೆದ್ದ ಪ್ರಥಮ ಮಹಿಳೆ ಎಂಬ ಇತಿಹಾಸವನ್ನು ವೃತ್ತಿಯಲ್ಲಿ ನ್ಯಾಯವಾದಿಯಾಗಿರುವ ಅಲೆಕ್ಸಾಂಡ್ರಾ ಬರೆದಿದ್ದಾರೆ. ಸ್ಪರ್ಧೆಯಲ್ಲಿ 18ರಿಂದ 73 ವರ್ಷದವರೆಗಿನ 34 ಸ್ಪರ್ಧಿಗಳು ಭಾಗವಹಿಸಿದ್ದರು.



# ಹಿಂದು ಹುಡುಗಿಗೆ ಅಶ್ಲೀಲ ಮೆಸೇಜ್ ರವಾನೆ: ಮುಸ್ಲಿಂ ಯುವಕನಿಗೆ ಬಿತ್ತು ಧರ್ಮದೇಟು

**ಡೆಹ್ರಾಡೂನ್:** 17 ವರ್ಷದ ಅಪ್ರಾಪ್ತೆಗೆ ಮುಸ್ಲಿಂ ಯುವಕನೋರ್ವ ಅಶ್ಲೀಲ ಮೆಸೇಜ್ ಕಳುಹಿಸುತ್ತಿದ್ದನ್ನು ರೆಡ್ ಹ್ಯಾಂಡ್ ಹಿಡಿದ ಸ್ಥಳೀಯರು ಆತನಿಗೆ ತಕ್ಕ ಶಾಸ್ತಿ ಮಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಗುರುವಾರ (ಏಪ್ರಿಲ್ 25) ಈ ಘಟನೆ ನಡೆದಿದೆ. ಘಟನೆಯ ಹಿಂದೆ ಲವ್ ಜಿಹಾದ್ನ ಶಂಕೆ ವ್ಯಕ್ತವಾಗುತ್ತಿದೆ. ಹಲ್ಲೆಗೊಳಗಾದ ಮುಸ್ಲಿಂ ಯುವ ಲವ್ ಜಿಹಾದ್ಗೆ ಪ್ರಯತ್ನಿಸುತ್ತಿದ್ದ ಎನ್ನಲಾಗಿದೆ. ಈ ಪ್ರಕರಣವು ಹಲ್ದ್ವಾನಿಯ ಕೊಟ್ವಾಲಿಯಲ್ಲಿ ನಡೆದಿದೆ. ಅಲ್ಲಿ ವಾಸಿಸುವ ಮಹಿಳೆಯೊಬ್ಬರು ಏಪ್ರಿಲ್ 25ರಂದು ಪೊಲೀಸರಿಗೆ ದೂರು ನೀಡಿದ್ದು, ತನ್ನ 17 ವರ್ಷದ ಮಗಳು ಕೆಲವು ದಿನಗಳ ಹಿಂದೆ ಮೊಬೈಲ್ ಫೋನ್ ರೀಚಾರ್ಜ್ ಮಾಡಲು ಅಥರುದ್ದೀನ್ನ 'ದೆಹಲಿ ಮೊಬೈಲ್ ಶಾಪ್' ತೆರಳಿದ್ದಳು. ಬಳಿಕ ಆತ ಮಗಳ ಮೊಬೈಲ್ಗೆ ಅಶ್ಲೀಲ ಮೆಸೇಜ್ ಕಳುಹಿಸಲು ಆರಂಭಿಸಿದ್ದ ಎಂದು ಆರೋಪಿಸಿದ್ದರು. ಜತೆಗೆ ಮೆಸೇಜ್ನ ಸ್ಕ್ರೀನ್ ಶಾಟ್ ಒದಗಿಸಿದ್ದರು.

ಅಪ್ರಾಪ್ತ ಬಾಲಕಿ ಸಂದೇಶಗಳಲ್ಲಿ ಅಥರುದ್ದೀನ್ನನ್ನು ಪದೇ ಪದೆ 'ಸಹೋದರ' ಎಂದೇ ಕರೆದಿರುವುದು ಕಂಡು ಬಂದಿದೆ. ಆದಾಗ್ಯೂ ಅವನು ಆಕೆ ಸಹೋದರ ಎಂದು ಕರೆಯುವುದಕ್ಕೆ ವಿರೋಧ ವ್ಯಕ್ತಪಡಿಸಿದ್ದ. ಮಾತ್ರವಲ್ಲ ತನ್ನೊಂದಿಗೆ ಸ್ನೇಹ ಬೆಳೆಸಲು ಒತ್ತಾಯಿಸಿದ್ದ. ತನ್ನ ಕನಸಿನಲ್ಲಿ ನಿನ್ನನ್ನು ನೋಡಿದ್ದೇನೆ ಎಂದೂ ಪೂಸಿ ಹೊಡೆದಿದ್ದ. ತನ್ನನ್ನು ಸಿಖ್ ಎಂದು ಉಲ್ಲೇಖಿಸುವ ಮೂಲಕ ಅಪ್ರಾಪ್ತ ಬಾಲಕಿಯನ್ನು ಮೋಸಗೊಳಿಸಲು ಪ್ರಯತ್ನಿಸಿದ್ದಾನೆ ಎಂದು ಮಹಿಳೆ ನೀಡಿದ ದೂರಿನಲ್ಲಿ ತಿಳಿಸಿದ್ದಾರೆ. ಅನಿಲ್ ಶರ್ಮಾ ಎನ್ನುವವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ 1.39 ನಿಮಿಷಗಳ ಈ ವಿಡಿಯೊ ಹಂಚಿಕೊಂಡಿದ್ದಾರೆ.



# ರೋಬೋ ನಡೆಸಿದ ಮೂತ್ರಪಿಂಡ ಕಸಿ ಶಸ್ತ್ರ ಚಿಕಿತ್ಸೆ ಯಶಸ್ವಿ

**ನವದೆಹಲಿ:** ಮೂತ್ರಪಿಂಡ ಬಳಸಿ ವೈಫಲ್ಯದಿಂದ ಬಳಲುತ್ತಿದ್ದ 39 ವರ್ಷದ ರೋಗಿಯೊಬ್ಬರಿಗೆ ದೆಹಲಿಯ ಸಫ್ದರಜಂಗ್ ಆಸ್ಪತ್ರೆಯಲ್ಲಿ ರೊಬೊ ಬಳಸಿ ಯಶಸ್ವಿಯಾಗಿ ಅಂಗಾಂಗ ಕಸಿ ಶಸ್ತ್ರ ಚಿಕಿತ್ಸೆಯನ್ನು ನಡಿಸಿದ್ದಾರೆ.

ದಾನಿಗಳ ನಿರೀಕ್ಷೆಯಲ್ಲಿದ್ದ ಉತ್ತರ ಪ್ರದೇಶದ ಫರೂಕಾಬಾದ್ ಗ್ರಾಮದ ವ್ಯಕ್ತಿಗೆ ಅವರ ಪತ್ನಿ ಮೂತ್ರಪಿಂಡ ದಾನ ಮಾಡಿದ್ದಾರೆ. ಡಯಾಲಿಸಿಸ್ನಲ್ಲಿ ಈ ವ್ಯಕ್ತಿಗೆ ಅಂಗಾಂಗ ಕಸಿ ಶಸ್ತ್ರ ಚಿಕಿತ್ಸೆಯನ್ನು ಡಾ. ಅನೂಪ್ ಕುಮಾರ್ ನೇತೃತ್ವ ಸಫದರ್ಜಂಗ್ ಆಸ್ಪತ್ರೆ ಮತ್ತು ವಿಎಂಎಂಸಿ ವೈದ್ಯರ ತಂಡ ನಡೆಸಿದೆ. ಇದರಲ್ಲಿ ರೊಬೊಟಿಕ್ಸ್ ಹಾಗೂ ಮೂತ್ರಪಿಂಡ ಕಸಿ ಶಸ್ತ್ರ ಚಿಕಿತ್ಸಕ ತಜ್ಞರು ಇದ್ದರು.

ಕೇಂದ್ರ ಸರ್ಕಾರದ ಆಡಳಿತಕ್ಕೆ ಒಳಪಡುವ ಸರ್ಕಾರಿ ಆಸ್ಪತ್ರೆಯಲ್ಲಿ ರೊಬೊ ಬಳಿಸಿ ನಡೆಸಿದ 2ನೇ ಶಸ್ತ್ರಚಿಕಿತ್ಸೆ ಇದು ಎಂದು ಅಲ್ಲಿನ ವೈದ್ಯರು ಹೇಳಿರುವುದಾಗಿ ಎಎನ್ಐ ವರದಿ ಮಾಡಿದೆ.

ಮೂತ್ರಪಿಂಡ ಚಿಕಿತ್ಸಾ ವಿಭಾಗದ ಡಾ. ಹಿಮಾಂಶು ವರ್ಮಾ, ಅರಿವಳಿಕೆ ತಜ್ಞ ಡಾ. ಮಧು ದಯಾಳ್ , ವಿಎಂಎಂಸಿ ಪ್ರಾಧ್ಯಾಪಕ ಡಾ. ಬಿ.ಎಲ್. ಶೆರ್ವಾಲ್ ಅವರು ಇದರಲ್ಲಿ ಪಾಲ್ಗೊಂಡಿದ್ದರು ಎಂದು ಡಾ. ಅನೂಪ್ ತಿಳಿಸಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಹಿಂದಿಗೆ ಬಿಕರಿಯಾದ 'ಪುಷ್ಪ 2' ಚಿತ್ರದ ವಿತರಣಾ ಹಕ್ಕು





ದಕ್ಷಿಣದ ಸಿನಿಮಾಗಳಿಗೆ ಹಿಂದಿಯಲ್ಲಿ ಬೇಡಿಕೆ ಹೆಚ್ಚಾಗುತ್ತಿದೆ. ಕೋಟಿ ಕೋಟಿ ಮುಂಗಡ ಹಣಕೊಟ್ಟು ವಿತರಣಾ ಹಕ್ಕುಗಳನ್ನು ಖರೀದಿಸಲಾಗುತ್ತಿದೆ. ಅಲ್ಲು ಅರ್ಜುನ್ ನಟನೆಯ ಪುಷ್ಪ 2 ಸಿನಿಮಾದ ಹಕ್ಕನ್ನು ಬರೋಬ್ಬರಿ 200 ಕೋಟಿ ರೂಪಾಯಿಗೆ ಖರೀದಿಸಿದ್ದಾರಂತೆ ಅನಿಲ್ ತಡಾನಿ. ಅಧಿಕೃತವಾಗಿ ಮಾಹಿತಿಯನ್ನು ಚಿತ್ರತಂಡವಾಗಲಿ ಅಥವಾ ತಡಾನಿ ಆಗಲಿ ಹೇಳಿಕೊಳ್ಳದೇ ಇದ್ದರೂ, ಬಿಟೌನ್ ನಲ್ಲಿ ಇದು ಭಾರೀ ಸದ್ದು ಮಾಡಿದೆ. ಪುಷ್ಪ 2 ಸಿನಿಮಾ ಬಿಡುಗಡೆಯ ದಿನಾಂಕ ಸಮೀಪಕ್ಕೆ ಬರುತ್ತಿದ್ದಂತೆಯೇ ಸಿನಿಮಾ ತಲುಪಿಸಲು ನಾನಾ ರೀತಿಯ ಸಿದ್ದತೆಗಳನ್ನು ಮಾಡುತ್ತಿದೆ ಚಿತ್ರತಂಡ. ಈಗಾಗಲೇ ಫಸ್ಟ್ ಲುಕ್, ಟೀಸರ್ ರಿಲೀಸ್ ಮಾಡಿರುವ ನಿರ್ದೇಶಕರು, ಈಗ ಮೇ 1 ರಂದು ಚಿತ್ರದ ಮೊದಲ ಲಿರಿಕಲ್ ಸಾಂಗ್ ಬಿಡುಗಡೆ ಮಾಡಲು ಸಿದ್ಧತೆ ಮಾಡಿಕೊಂಡಿದ್ದಾರೆ. ಭಾರತೀಯ ಸಿನಿಮಾ ರಂಗದಲ್ಲಿ ಪುಷ್ಪ 2 ದಾಖಲೆಗೆ ಕಾರಣವಾಗುತ್ತಿದೆ. ಈ ಸಿನಿಮಾದ ಡಿಜಿಟೆಲ್ ರೈಟ್ಸ್ ಬರೋಬ್ಬರಿ 275 ಕೋಟಿ ರೂಪಾಯಿ ಸೇಲ್ ಆಗಿದೆ ಎನ್ನುವ ಮಾಹಿತಿ ಸಿಗುತ್ತಿದೆ. ಈ ಹಣ ಸಿನಿಮಾ ರಿಲೀಸ್ ಆದ ನಂತರ ಮತ್ತಷ್ಟು ಏರಿಕೆಯೂ ಆಗಲಿದೆಯಂತೆ. ಇಷ್ಟೊಂದು ಮೊತ್ತದ ಹಣವನ್ನು ಕೊಟ್ಟು ಇದೇ ಮೊದಲ ಬಾರಿಗೆ ಡಿಜಿಟೆಲ್ ಹಕ್ಕುಗಳನ್ನು ಖರೀದಿಸಲಾಗಿದೆಯಂತೆ. ಅಲ್ಲು ಅರ್ಜುನ್ ನಟನೆಯ ಪುಷ್ಪ 2 ಸಿನಿಮಾ ಇದೇ ಆಗಸ್ಟ್ 15ರಂದು ಬಿಡುಗಡೆ ಮಾಡುವುದಾಗಿ ಈಗಾಗಲೇ ಚಿತ್ರತಂಡ



ಘೋಷಣೆ ಮಾಡಿದೆ. ಅದೇ ರೀತಿಯ ಬಾಲಿವುಡ್ ನ ಹೆಸರಾಂತ ನಟ ಅಜಯ್ ದೇವಗನ್ ನಟನೆಯ ಸಿಂಗಂ ಅಗೇನ್ ಚಿತ್ರ ಕೂಡ ಅದೇ ದಿನಾಂಕದಂದು ರಿಲೀಸ್ ಆಗಬೇಕಿತ್ತು. ಆದರೆ, ಸಿಂಗಂ ಸೈಡ್ ಗೆ ಹೋಗಿದೆ ಎನ್ನುವ ಮಾಹಿತಿ ಹರಿದಾಡುತ್ತಿದೆ. ಪುಷ್ಪ 2 ಸಿನಿಮಾ ಸಾಕಷ್ಟು ಸದ್ದು ಮಾಡುತ್ತಿದೆ. ಸಿನಿ ಪಂಡಿತರ ಲೆಕ್ಕಾಚಾರದಂತೆ ಸಾವಿರಾರು ಕೋಟಿ ರೂಪಾಯಿ ವ್ಯಾಪಾರ ಮಾಡುವ ಶಕ್ತಿ ಈ ಚಿತ್ರಕ್ಕಿದೆಯಂತೆ. ಅಲ್ಲದೇ, ದೊಡ್ಡ ಮಟ್ಟದಲ್ಲಿ ಮತ್ತು ಹಲವು ಭಾಷೆಗಳಲ್ಲಿ ಈ ಚಿತ್ರವನ್ನು ತೆರೆಗೆ ತರಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಹಾಗಾಗಿ ಸಿಂಗಂ ಅಗೇನ್ ಚಿತ್ರದ ರಿಲೀಸ್ ಅನ್ನು ಮುಂದೂಡಿಕೆ ಮಾಡುವ ಯೋಚನೆ ಮಾಡಲಾಗಿದೆಯಂತೆ.

# ಜೂ.27ಕ್ಕೆ ಕಲ್ಕಿ ರಿಲೀಸ್



ಪ್ರಭಾಸ್ ನಟನೆಯ ಕಲ್ಕಿ ಸಿನಿಮಾದ ರಿಲೀಸ್ ಡೇಟ್ ಅಧಿಕೃತವಾಗಿ ಘೋಷಣೆಯಾಗಿದೆ. ಇದೇ ಜೂನ್ 27ರಂದು ವಿಶ್ವದಾದ್ಯಂತ ಸಿನಿಮಾ ರಿಲೀಸ್ ಮಾಡುವುದಾಗಿ ಚಿತ್ರತಂಡ ಸೋಷಿಯಲ್ ಮೀಡಿಯಾ ಮೂಲಕ ಹಂಚಿಕೊಂಡಿದೆ. ಜೊತೆಗೆ ಹೊಸ ಪೋಸ್ಟರ್ ಕೂಡ ರಿಲೀಸ್ ಮಾಡಿದೆ.

ಈ ಸಿನಿಮಾ ಒಂದಿಲ್ಲೊಂದು ಕಾರಣದಿಂದಾಗಿ ಸುದ್ದಿ ಆಗುತ್ತಲೇ ಇದೆ. ಈ ಬಾರಿ ಕಲಾವಿದರಿಗೆ ನೀಡಿರುವ ಸಂಭಾವನೆಯಿಂದಾಗಿ ಸಖತ್ ಸದ್ದು ಮಾಡುತ್ತಿದೆ. ಮೂಲಗಳ ಪ್ರಕಾರ ಕಲಾವಿದರಿಗಾಗಿಯೇ ಒಟ್ಟು 250 ಕೋಟಿ ರೂಪಾಯಿಗೂ ಅಧಿಕ ಖರ್ಚು ಮಾಡಿದ್ದಾರಂತೆ ನಿರ್ಮಾಪಕರು. ಅದರಲ್ಲಿ ಅತೀ ಹೆಚ್ಚು ಸಂಭಾವನೆ ಪಡೆದಿರೋದು ಚಿತ್ರ ನಾಯಕ ಪ್ರಭಾಸ್.

ಪ್ರಭಾಸ್ ಈ ಸಿನಿಮಾಗಾಗಿ ಬರೋಬ್ಬರಿ 150 ಕೋಟಿ ರೂಪಾಯಿ ಸಂಭಾವನೆ ಪಡೆದಿದ್ದಾರಂತೆ. ದೀಪಿಕಾ ಪಡುಕೋಣೆ, ಅಮಿತಾಭ್ ಬಚ್ಚನ್ ಮತ್ತು ಕಮಲ್ ಹಾಸನ್ ತಲಾ 20 ಕೋಟಿ ರೂಪಾಯಿ

## ಚಿತ್ರತಂಡದಿಂದ ಅಧಿಕೃತ ಘೋಷಣೆ



ಸಂಭಾವನೆ ಜೇಬಿಗಿಳಿಸಿಕೊಂಡಿದ್ದಾರೆ. ನಾಯಕಿ ದಿಶಾ ಪಟಾಣಿ 5 ಕೋಟಿ ರೂಪಾಯಿಗೆ ತೃಪ್ತಿ ಪಟ್ಟಿದ್ದಾರೆ. ಲಕ್ಷದಲ್ಲಿ ಸಂಭಾವನೆ ಪಡೆಯುವ ಅನೇಕ ನಟರೂ ಈ ಸಿನಿಮಾದಲ್ಲಿ ಇದ್ದಾರೆ.

ನಾಗ್ ಅಶ್ವಿನ್ ನಿರ್ದೇಶನದಲ್ಲಿ ಮೂಡಿಬರುತ್ತಿರುವ ಬಹುಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಕಲ್ಕಿ ಸಿನಿಮಾ, ಈಗಾಗಲೇ ಶೂಟಿಂಗ್‌ನಲ್ಲಿ ಬಿಜಿಯಾಗಿದೆ. ಈ ನಡುವೆ ಈಗ ಸೋಷಿಯಲ್ ಮೀಡಿಯಾದಲ್ಲಿ ಈ ಸಿನಿಮಾ ಟ್ರೆಂಡಿಂಗ್‌ನಲ್ಲಿಯೂ ಮುಂದುವರಿದಿದೆ. ಅದಕ್ಕೆ ಕಾರಣ ರಿಲೀಸ್ ಆದ ಅಮಿತಾಭ್ ಬಚ್ಚನ್ ಅವರ ಹೊಸ ಲುಕ್.

# ಕಾಸರಗೋಡಿನಲ್ಲಿ ಕಾಣಿಸಿಕೊಂಡ ನಟಿ ಸನ್ನಿ ಲಿಯೋನ್

**ಸಿನಿಮಾ ಶೂಟಿಂಗ್**





ಮಾಜಿ ನೀಲಿತಾರೆ ಸನ್ನಿ ಲಿಯೋನ್ ಕಾಸರಗೋಡಿನಲ್ಲಿ ಕಾಣಿಸಿಕೊಂಡಿದ್ದಾರೆ. ಇಲ್ಲಿನ ಸೀತಂಗೋಳಿ ಸಮೀಪದ ಶೇಣಿಯಲ್ಲಿ ನಡೆಯುತ್ತಿರುವ ಹಿಂದಿ ಸಿನಿಮಾದ ಶೂಟಿಂಗ್ ನಲ್ಲಿ ಅವರು ಭಾಗಿಯಾಗಿದ್ದಾರೆ. ಬಿರುಬಿಸಿಲನ್ನು ಲೆಕ್ಕಿಸದೇ ಚಿತ್ರೀಕರಣದಲ್ಲಿ ತೊಡಗಿಕೊಂಡಿದ್ದಾರೆ.

ಶೇಣಿಯ ಶಾಲೆ ಸಮೀಪದ ರಾಜ್ಯ ಹೆದ್ದಾರಿಯಲ್ಲಿ ಶೂಟಿಂಗ್ ನಡೆಯುತ್ತಿದ್ದು, ರಸ್ತೆಯಲ್ಲಿ ನಡೆಯುವ ದೃಶ್ಯದಲ್ಲಿ ಸನ್ನಿ ಕಾಣಿಸಿಕೊಂಡಿದ್ದಾರೆ. ಶೇಣಿಯಲ್ಲಿ ಶೂಟಿಂಗ್ ನಡೆಯುವುದು ಹೊಸದೇನೂ ಅಲ್ಲ. ಹಲವಾರು ಪರಭಾಷಾ ಚಲನಚಿತ್ರಗಳ ಚಿತ್ರೀಕರಣ ಇಲ್ಲಿ ನಡೆದಿದೆ. ಕಾಸರಗೋಡಿ ಈ ಸ್ಥಳ ಚಿತ್ರೀಕರಣಕ್ಕೆ ಹೆಸರುವಾಸಿಯಾದ ಸುಂದರ ಪ್ರದೇಶವಾಗಿದೆ. ಶೂಟಿಂಗ್ ನೋಡುವುದಕ್ಕಾಗಿ ಅನೇಕರು ಆ ಸ್ಥಳಕ್ಕೆ ಆಗಮಿಸಿದ್ದರು. ಕೇರಳ ಮತ್ತು ಕರ್ನಾಟಕದಲ್ಲಿ ಸಾಕಷ್ಟು ಅಭಿಮಾನಿಗಳನ್ನು ಹೊಂದಿದ್ದಾರೆ ಸನ್ನಿ ಲಿಯೋನ್. ಈ ಹಿಂದೆ ಕೇರಳಕ್ಕೆ ಭೇಟಿ ನೀಡಿದಾಗ ಟ್ರಾಫಿಕ್ ಜಾಮ್ ಆಗಿ ಸನ್ನಿ ಲಿಯೋನ್ ಮೇಲೆ ಪ್ರಕರಣ ಕೂಡ ದಾಖಲಾಗಿತ್ತು. ಕನ್ನಡದಲ್ಲೂ ಸನ್ನಿ ನಟಿಸಿದ್ದಾರೆ. ಕನ್ನಡದ ನಾನಾ ಸಿನಿಮಾಗಳ ಹಾಡಿಗೂ ಸನ್ನಿ ಕುಣಿದಿದ್ದಾರೆ. ದಕ್ಷಿಣದ ಸಿನಿಮಾಗಳು ಅಂದರೆ ನನಗೆ ತುಂಬಾ ಇಷ್ಟ ಎಂದು ಈಗಾಗಲೇ ಅವರು ಹೇಳಿದ್ದಾರೆ.

## ಮಿಂಚಿದ ಸಂಜು, ಧ್ರುವ್ | ವಿಕೆಟ್‌ಗಳ ಅಮೋಘ ಜಯ

# ಪ್ಲೇ ಆಫ್‌ಗೆ ರಾಜಸ್ಥಾನ್







**ಲಕ್ನೋ:** ಸಂಜು ಸ್ಯಾಮ್ಸನ್, ಧ್ರುವ್ ಜುರೆಲ್ ಸ್ಫೋಟಕ ಅರ್ಧಶತಕಗಳ ಬ್ಯಾಟಿಂಗ್ ನೆರವಿನಿಂದ ರಾಜಸ್ಥಾನ್ ರಾಯಲ್ಸ್ ತಂಡವು ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ 7 ವಿಕೆಟ್‌ಗಳ ಅಮೋಘ ಜಯ ಸಾಧಿಸಿದೆ.

ಇಲ್ಲಿನ ಏಕನಾ ಕ್ರೀಡಾಂಗಣಡಲ್ಲಿ ಮೊದಲು ಬ್ಯಾಟಿಂಗ್ ಮಾಡಿದ್ದ ಲಕ್ನೋ 5 ವಿಕೆಟ್ ನಷ್ಟಕ್ಕೆ 196 ರನ್ ಗಳಿಸಿತ್ತು. 197 ರನ್‌ಗಳ ಬೃಹತ್ ರನ್‌ಗಳ ಗುರಿ ಬೆನ್ನಟ್ಟಿದ ಆರ್‌ಆರ್ 19 ಓವರ್ ಗಳಲ್ಲೇ 199 ರನ್ ಬಾರಿಸಿ ಗೆಲುವು ಸಾಧಿಸಿದೆ. ಅಲ್ಲದೇ 9 ಪಂದ್ಯಗಳ ಪೈಕಿ 8ರಲ್ಲಿ ಗೆಲುವು ಸಾಧಿಸಿರುವ ರಾಜಸ್ಥಾನ್ ರಾಯಲ್ಸ್ ತಂಡವು 16 ಅಂಕ ಪಡೆಯುವ ಜೊತೆಗೆ ಪ್ಲೇ ಆಫ್‌ಗೆ ಅರ್ಹತೆ ಪಡೆದುಕೊಂಡಿದೆ. ಚೇಸಿಂಗ್ ಆರಂಭಿಸಿದ್ದ ರಾಜಸ್ಥಾನ್ ರಾಯಲ್ಸ್ 8.4 ಓವರ್‌ಗಳಲ್ಲಿ 78 ರನ್‌ಗಳಿಗೆ ಪ್ರಮುಖ 3 ವಿಕೆಟ್ ಕಳೆದುಕೊಂಡಿತ್ತು. ಇದರಿಂದ ರಾಜಸ್ಥಾನ್ ಸೋಲುತ್ತದೆ ಎಂದು ಭಾವಿಸಲಾಗಿತ್ತು. ನಂತರ ಜೊತೆಗೂಡಿದ ಧ್ರುವ್ ಜುರೆಲ್ ಮತ್ತು ಸಂಜು ಸ್ಯಾಮ್ಸನ್ ಜೋಡಿ ಮುರಿಯದ 4ನೇ ವಿಕೆಟ್‌ಗೆ 62 ಎಸೆತಗಳಲ್ಲಿ 121 ರನ್‌ಗಳ ಜೊತೆಯಾಟ ನೀಡಿತು. ಇದರಿಂದ ರಾಜಸ್ಥಾನ್‌ಗೆ ಗೆಲುವು ಸುಲಭವಾಯಿತು.

ಸಂಜು 33 ಎಸೆತಗಳಲ್ಲಿ 71 ರನ್ ಚಚ್ಚಿದರೆ (4 ಸಿಕ್ಸರ್, 7 ಬೌಂಡರಿ), ಧ್ರುವ್ ಜುರೆಲ್ 52 ರನ್ (2 ಸಿಕ್ಸರ್, 5 ಬೌಂಡರಿ), ಯಶಸ್ವಿ ಜೈಸ್ವಾಲ್ 24 ರನ್, ಜೋಸ್ ಬಟ್ಲರ್ 34 ರನ್ ಹಾಗೂ ರಿಯಾನ್ ಪರಾಗ್ 14 ರನ್‌ಗಳ ಕೊಡುಗೆ ನೀಡಿದರು.

ಇದಕ್ಕೂ ಮುನ್ನ ಬ್ಯಾಟಿಂಗ್ ಮಾಡಿದ ಲಕ್ನೋ ಸೂಪರ್ ಜೈಂಟ್ಸ್ ತಂಡ ವಿಕೆಟ್ ಕಳೆದುಕೊಂಡ ಹೊರತಾಗಿಯೂ ಬೃಹತ್ ಮೊತ್ತ ಪೇರಿಸುವಲ್ಲಿ ಯಶಸ್ವಿಯಾಯಿತು. ಕೆ.ಎಲ್ ರಾಹುಲ್ ಮತ್ತು ದೀಪಕ್ ಹೂಡ ಅವರ ಜವಾಬ್ದಾರಿಯುತ ಅರ್ಧಶತಕಗಳ ಬ್ಯಾಟಿಂಗ್ ನೆರವಿನಿಂದ ಲಕ್ನೋ ತಂಡ ಬೌಲಿಂಗ್ ಪಿಚ್‌ನಲ್ಲೂ 190 ರನ್‌ಗಳ ಗಡಿ ದಾಟುವಲ್ಲಿ ಯಶಸ್ವಿಯಾಯಿತು.

ಲಕ್ನೋ ಪರ ಕೆ.ಎಲ್ ರಾಹುಲ್ 76 ರನ್ (48 ಎಸೆತ, 2 ಸಿಕ್ಸರ್, 8 ಬೌಂಡರಿ), ದೀಪಕ್ ಹೂಡ 31 ಎಸೆತಗಳಲ್ಲಿ 7 ಬೌಂಡರಿಗಳೊಂದಿಗೆ 50 ರನ್ ಗಳಿಸಿದ್ರೆ, ನಿಕೋಲಸ್ ಪೂರನ್ 11 ರನ್, ಆಯುಷ್ ಬದೋನಿ 18 ರನ್, ಕೃನಾಲ್ ಪಾಂಡ್ಯ 15 ರನ್ ಕ್ವಿಂಟನ್ ಡಿಕಾಕ್ 8 ರನ್ ಗಳಿಸಿದ್ರೆ, ಮಾರ್ಕಸ್ ಸ್ಟೋಯ್ನಿಸ್ ಸೊನ್ನೆ ಸುತ್ತಿದರು.

ರಾಜಸ್ಥಾನ್ ಪರ ಸಂದೀಪ್ ಶರ್ಮಾ 2 ವಿಕೆಟ್ ಕಿತ್ತರೆ, ಟ್ರೆಂಟ್ ಬೋಲ್ಟ್, ಅವೇಶ್ ಖಾನ್, ಅಶ್ವಿನ್ ತಲಾ ಒಂದೊಂದು ವಿಕೆಟ್ ಪಡೆದರು.

# T20 ವಿಶ್ವಕಪ್‌ಗೆ ಶೀಘ್ರದಲ್ಲೇ ಭಾರತ ತಂಡ ಪ್ರಕಟ

**ನವದೆಹಲಿ:** 2024ರ ಐಸಿಸಿ ಟಿ20 ವಿಶ್ವಕಪ್ ಟೂರ್ನಿ ಈ ಬಾರಿ ವೆಸ್ಟ್ ಇಂಡೀಸ್ ಮತ್ತು ಅಮೆರಿಕ ಜಂಟಿ ಆತಿಥ್ಯದಲ್ಲಿ ನಡೆಯಲಿದೆ. ಅಜಿತ್ ಅಗರ್ಕರ್ ಸಾರಥ್ಯದ ಆಯ್ಕೆ ಸಮಿತಿ ಶೀಘ್ರದಲ್ಲೇ ಭಾರತ ತಂಡವನ್ನು ಪ್ರಕಟಿಸುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಭಾರತೀಯ ಕ್ರಿಕೆಟ್ ತಂಡದ ನಾಯಕ ರೋಹಿತ್ ಶರ್ಮಾ ದೆಹಲಿಯಲ್ಲಿ ಬಿಸಿಸಿಐ ಆಯ್ಕೆಗಾರರನ್ನು ಭೇಟಿಯಾಗಲಿದ್ದಾರೆ.

ಶನಿವಾರ (ಏ.27) ದೆಹಲಿಯಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಮುಂಬೈ ಇಂಡಿಯನ್ಸ್ ಕಣಕ್ಕಿಳಿಯಲಿದೆ. ಪಂದ್ಯ ಮುಗಿದ ಬಳಿಕ ರೋಹಿತ್ ಶರ್ಮಾ ಆಯ್ಕೆ ಸಮಿತಿ ಮುಖ್ಯಸ್ಥರನ್ನು ಭೇಟಿಯಾಗಲಿದ್ದು, ಆಟಗಾರರ ಬಗ್ಗೆ ಚರ್ಚಿಸಲಾಗುತ್ತದೆ. ಮೊದಲಿಗೆ ತಾತ್ಕಾಲಿಕ ತಂಡವನ್ನು ಪ್ರಕಟಿಸಲು ಮೇ 1 ಕೊನೆಯದಿನವಾಗಿದೆ. ಆದ್ದರಿಂದ ಯಾವುದೇ ಕ್ಷಣದಲ್ಲಿ ತಂಡವನ್ನು ಅಂತಿಮಗೊಳಿಸುವ ಸಾಧ್ಯತೆಗಳಿವೆ ಎಂದು ಮೂಲಗಳು ತಿಳಿಸಿವೆ.

ಪ್ರಸಕ್ತ ಟಿ20 ವಿಶ್ವಕಪ್ ಟೂರ್ನಿಯ ನಿಮಿತ್ತ 2024ರ ಐಪಿಎಲ್ ಟೂರ್ನಿಯು ಎಲ್ಲಾ ಆಟಗಾರರಿಗೆ ಅತ್ಯಂತ ಮಹತ್ವದ್ದಾಗಿದೆ. ಈ ಟೂರ್ನಿಯಲ್ಲಿ ಅತ್ಯುತ್ತಮ ಪ್ರದರ್ಶನ ತೋರಿದ ಆಟಗಾರರನ್ನ ಟಿ20 ವಿಶ್ವಕಪ್ ಟೂರ್ನಿಗೆ ಭಾರತ ತಂಡ ಪರಿಗಣಿಸುವ ಸಾಧ್ಯತೆಯಿದೆ. ರೋಹಿತ್ ಶರ್ಮಾ ತಂಡದ ನಾಯಕನಾಗಿ ಮುನ್ನಡೆಸುವುದು ಬಹುತೇಕ ಖಚಿತವಾಗಿದೆ. ಅದರೊಂದಿಗೆ 15 ಆಟಗಾರರ ಸಂಭಾವ್ಯ ಪಟ್ಟಿಯನ್ನೂ ಸಿದ್ಧಪಡಿಸಲಾಗಿದೆ.

ಗುಜರಾತ್ ಟೈಟಾನ್ಸ್ ತಂಡದ ಕ್ಯಾಪ್ಟನ್ ಆದ ನಂತರ ಶುಭಮನ್ ಗಿಲ್ ಅವರು ಬ್ಯಾಟಿಂಗ್ ಪರ್ಫಾರ್ಮೆನ್ಸ್ ಕಳೆದುಕೊಂಡಿದ್ದಾರೆ. ಇನ್ನೂ ಆರೆಂಜ್ ಕ್ಯಾಪ್ ರೇಸ್‌ನಲ್ಲಿ ಕೊಹ್ಲಿ ಮೊದಲ ಸ್ಥಾನದಲ್ಲಿ ಮುನ್ನುಗ್ಗುತ್ತಿದ್ದರೂ ಅವರ ಸ್ಟ್ರೈಕ್ ರೇಟ್ ಬಗ್ಗೆ ಸಾಕಷ್ಟು ಅನುಮಾನಗಳಿವೆ. ಆದ್ದರಿಂದ ಕೊಹ್ಲಿ ಅವರನ್ನು 3ನೇ ಕ್ರಮಾಂಕದಲ್ಲಿ ಕಣಕ್ಕಿಳಿಸುವ ಸಾಧ್ಯತೆಗಳಿವೆ ಎಂದು ಮೂಲಗಳು ತಿಳಿಸಿವೆ.

## ಕರ್ನಾಟಕಕ್ಕೆ 3,454 ಕೋಟಿರೂ.

# ಬರ ಪರಿಹಾರ ಘೋಷಣೆ



**ನವದೆಹಲಿ:** ಕೇಂದ್ರ ಸರ್ಕಾರ ಕರ್ನಾಟಕಕ್ಕೆ 3,454 ಕೋಟಿರೂ.ಬರ ಪರಿಹಾರ ಘೋಷಣೆ ಮಾಡಿದೆ. ಕರ್ನಾಟಕ ಮಾತ್ರವಲ್ಲದೆ ತಮಿಳುನಾಡಿಗೆ ಚಂಡಮಾರುತ ಹಾಗೂ ಪ್ರವಾಹ ಪರಿಹಾರವೆಂದು 275 ಕೋಟಿರೂ.ನೀಡಿದೆ.

ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ರಾಜ್ಯ ಸರ್ಕಾರಕೇಂದ್ರಕ್ಕೆ ಬರ ಪರಿಹಾರಕ್ಕಾಗಿ 18,174 ಕೋಟಿರೂ. ಹಣದ ಬೇಡಿಕೆ ಇಟ್ಟಿತ್ತು. ಕೇಂದ್ರ ಸರ್ಕಾರ ಬರ ಪರಿಹಾರ ಬಿಡುಗಡೆ ಮಾಡಿರದ ಹಿನ್ನೆಲೆರಾಜ್ಯ ಸರ್ಕಾರ ಸುಪ್ರೀಂಕೋರ್ಟ್‌ನಮೊರೆ ಹೋಗಿತ್ತು. ಬಳಿಕ ಕೇಂದ್ರ ಸರ್ಕಾರ ಬರ ಪರಿಹಾರ ಬಿಡುಗಡೆ ಮಾಡುವುದಾಗಿ ಸುಪ್ರೀಂಕೋರ್ಟ್‌ಗೆ ಹೇಳಿತ್ತು.ಅದರಂತೆ ಇದೀಗ ಕೇಂದ್ರ ಸರ್ಕಾರ ಬರ ಪರಿಹಾರಘೋಷಣೆ ಮಾಡಿದೆ.

ಕರ್ನಾಟಕ ಸರ್ಕಾರ ಸುಪ್ರೀಂಕೋರ್ಟ್‌ಗೆ ಸಲ್ಲಿಸಿದ್ದ ಅರ್ಜಿಯನ್ನುಏಪ್ರಿಲ್ 22 ರಂದು ನ್ಯಾ.ಬಿ.ಆರ್ ಗವಾಯಿ ನೇತೃತ್ವದ ದ್ವಿ ಸದಸ್ಯ ಪೀಠ ವಿಚಾರಣೆ ನಡೆಸಿತ್ತು. ವಿಚಾರಣೆ ಆರಂಭವಾಗುತ್ತಿದ್ದಂತೆ ಕೇಂದ್ರ ಸರ್ಕಾರವನ್ನು ಪ್ರತಿನಿಧಿಸಿದ ಅಟಾರ್ನಿಜನರಲ್‌ಆರ್. ವೆಂಕಟರಮಣಿ, ಚುನಾವಣಾಆಯೋಗದಜೊತೆಗೆ ಈ ಬಗ್ಗೆ ಚರ್ಚಿಸಲಾಗಿದ್ದು, ಬರ ಪರಿಹಾರ ಬಿಡುಗಡೆಗೆ ಆಯೋಗ ಅನುಮತಿ ನೀಡಿದೆ.ಹೀಗಾಗಿ ಈ ವಾರದೊಳಗೆ ಈ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದ್ದರು.

ಕೇಂದ್ರ ಸರ್ಕಾರ ಭರವಸೆ ನೀಡಿರುವ ಬೆನ್ನಲ್ಲೇ ಮಧ್ಯಪ್ರವೇಶ ಮಾಡಿದ ನ್ಯಾ.ಬಿ.ಆರ್ ಗವಾಯಿ, ಒಕ್ಕೂಟ ವ್ಯವಸ್ಥೆಯಲ್ಲಿ ಇಂತಹ ವಿಷಯಗಳನ್ನು ಸೌಹಾರ್ದಯುತವಾಗಿ ಬಗೆಹರಿಸಿಕೊಳ್ಳಬೇಕು. ಸುಪ್ರೀಂಕೋರ್ಟ್‌ತನಕ ಈ ಪ್ರಕರಣ ಬರಬಾರದು ಎಂದು ಕೇಂದ್ರ ಸರ್ಕಾರಕ್ಕೆ ಸೂಚಿಸಿದ್ದರು.ಬಳಿಕ ಅರ್ಜಿ ವಿಚಾರಣೆಯನ್ನುಕೋರ್ಟ್ ಏ.29ಕ್ಕೆ ಮುಂದೂಡಿತ್ತು.

# ಮೊದಲ ಹಂತದಚುನಾವಣೆಯಲ್ಲಿ ಹೆಚ್ಚು ಸ್ಥಾನ ಗೆಲ್ಲುವ ವರದಿ ಬಂದಿದೆ

**ಕಲಬುರಗಿ:** ಶುಕ್ರವಾರ ಮೊದಲನೇ ಹಂತದ ಚುನಾವಣೆ ಮುಗಿದಿದೆ.ಅದರಲ್ಲಿ ಹೆಚ್ಚು ಸ್ಥಾನ ಗೆಲ್ಲುವ ವರದಿ ಬಂದಿದೆ ಎಂದು ಸಿಎಂ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.



ಈ ಕುರಿತು ಕಲಬುರಗಿಯಲ್ಲಿ ಮಾತನಾಡಿದ ಅವರು, ಎಲ್ಲಾ ಅಭ್ಯರ್ಥಿ ಮತ್ತು ಮಂತ್ರಿಗಳ ಜೊತೆ ಮಾತನಾಡಿದ್ದೇನೆ. ನಮ್ಮ 5 ಗ್ಯಾರಂಟಿ ಜನರ ಮೇಲೆ ಹೆಚ್ಚು ಪರಿಣಾಮ ಬೀರಿದೆ.ಈ ಚುನಾವಣೆಯಲ್ಲಿ ಕೇಂದ್ರ ಸರ್ಕಾರದ ವೈಫಲ್ಯ ಹಾಗೂ ನಮ್ಮ ಸರ್ಕಾರದ ಸಾಧನೆ ಪ್ರಸ್ತಾಪ ಮಾಡಿದ್ದೇವೆ. ನರೇಂದ್ರ ಮೋದಿ ಈ ದೇಶದ ಪ್ರಧಾನಮಂತ್ರಿಯಾಗಿ ಸುಳ್ಳಿನ ಮಾರುಕಟ್ಟೆ ಮಾಡುತ್ತಿದ್ದಾರೆ. ಹಿಂದುಳಿದವರ ಮೀಸಲಾತಿ ಆರ್ಟಿಕಲ್ 15 ಮತ್ತು 16ರ ಪ್ರಕಾರ ಈ ಸಮಾಜದಲ್ಲಿ ಅವರಿಗೆ ಮೀಸಲಾತಿಕೊಡಬೇಕಾಗಿದೆ ಎಂದರು.

ರಾಜೀವ್‌ಗಾಂಧಿ ಪ್ರಧಾನ ಮಂತ್ರಿ ಆದಾಗ ಆರ್ಟಿಕಲ್ 7374 ಕಾನೂನು ಜಾರಿಗೆತಂದು ಮಹಿಳೆಯರಿಗೆ ಮೀಸಲಾತಿ ತಂದರು. ಆದರೆಅದು ಅವರ ಕಾಲದಲ್ಲಿ ಜಾರಿ ಆಗಲಿಲ್ಲ, ನರಸಿಂಗ್ ರಾವ್ ಕಾಲದಲ್ಲಿಜಾರಿಆಯಿತು. ಕರ್ನಾಟಕದಲ್ಲಿ ಬಿಸಿಎಂ ಎ ಮತ್ತು ಬಿ ಅಂತರಿಸರ್ವೇಶನ್ ಮಾಡಿದ್ದೇವೆ. ಈ ಮೂಲಕ ಮಹಿಳೆಯರಿಗೆ 33% ಮೀಸಲಾತಿ ಮಾಡಿದೆವು. ಹಿಂದುಳಿದವರಿಗೆ 33% ಮೀಸಲಾತಿ ಮಾಡಿದ್ದು, 6.6% ಬಿಸಿಎಂ ಬಿಯವರಿಗೆ ಮೀಸಲಾತಿಕೊಡಲಾಯಿತು.ಇದೆಲ್ಲ 1994–95ರಲ್ಲಿ ನಾನು ಹಣಕಾಸು ಮಂತ್ರಿಇದ್ದಾಗ ಮಾಡಿದ್ದೆವು. ಹಿಂದುಳಿದವರ ಮೀಸಲಾತಿಯಲ್ಲಿ ಮುಸ್ಲಿಮರನ್ನು ಸೇರಿಸಲಾಗಿದೆ. ಆದರೆ ಬಿಜೆಪಿ ರಾಮಾಜೋಯಿಸ್ ಈ ಮೀಸಲಾತಿ ಪ್ರಶ್ನೆ ಮಾಡಿ ಸುಪ್ರೀಂಕೋರ್ಟ್‌ಗೆ ಅರ್ಜಿ ಹಾಕಿದರು. ಖುದ್ದುಅವರೇ ವಾದ ಮಂಡಿಸಿದ್ದರು. ಆದರೆ ಸುಪ್ರೀಂಕೋರ್ಟ್ ಮೀಸಲಾತಿಎತ್ತಿ ಹಿಡಿಯಿತು. ಶಿಕ್ಷಣದಲ್ಲಿ ಹಾಗು ಉದ್ಯೋಗದಲ್ಲಿ ಚಿನ್ನಪ್ಪರೆಡ್ಡಿ ಅವರ ಮೀಸಲಾತಿ ಶಿಫಾರಸು ಮಾಡಿದರು.ಅದನ್ನು ವೀರಪ್ಪ ಮೋಯ್ಲಿಕಾಲದಲ್ಲಿ ಶಿಫಾರಸು ಮಾಡಿದ್ರೆ, ದೇವೇಗೌಡರ ಕಾಲದಲ್ಲಿ ಜಾರಿ ಆಯಿತು ಎಂದು ಹೇಳಿದರು.

ಕೇಂದ್ರ ಸರ್ಕಾರದಿಂದ 3,400 ಕೋಟಿ ರೂ.ಬರ ಪರಿಹಾರ ಬಿಡುಗಡೆ ವಿಚಾರವಾಗಿ ಪ್ರತಿಕ್ರಿಯಿಸಿ, ನಾವು ಕೇಳಿದ್ದು 18,172 ಕೋಟಿರೂ.ಒಟ್ಟು 35 ಸಾವಿರಕೋಟಿ ಬೆಳೆ ನಷ್ಟವಾಗಿದೆ.48 ಲಕ್ಷ ಹೆಕ್ಟೇರ್ ಬೆಳೆ ನಷ್ಟವಾಗಿದೆ. ಎನ್‌ಡಿಆರ್‌ಎಫ್ ನಿಯಮದ ಪ್ರಕಾರ 18 ಸಾವಿರ ಕೋಟಿರೂ. ಕೇಳಿದ್ದೆವು. ಆಗ ನಿರ್ಮಲಾ ಸಿತಾರಾಮನ್, ಅಮಿತ್ ಶಾ ಸುಳ್ಳು ಹೇಳಿದರು. ಕೋಡ್‌ಆಫ್‌ಕಂಡಕ್ಟ್ ಬಂದಿದೆಅಂತಅಮಿತ್ ಶಾ ಹೇಳಿದ್ರೆ, ನಿರ್ಮಲಾ ಸಿತಾರಾಮನ್ ಬರಗಾಲಕ್ಕೆ ಮನವಿ ಕೊಟ್ಟಿಲ್ಲ, ಗ್ಯಾರಂಟಿಗಳಿಗೆ ದುಡ್ಡು ಕೇಳಿದ್ದಾರೆ ಎಂದರು.ನಾವು ಗ್ಯಾರಂಟಿಗಳಿಗೆ ನಯಾಪೈಸೆದುಡ್ಡು ಕೇಳಿಲ್ಲ, ಕೇಳೋದು ಇಲ್ಲ. ಈಗ ಕೇಂದ್ರ ಸರ್ಕಾರ ಬಹಳ ಕಡಿಮೆ ಹಣಕೊಟ್ಟಿದ್ದಾರೆ.ಅಧಿಕಾರಿಗಳ ಜೊತೆಚರ್ಚೆ ಮಾಡುತ್ತೇನೆ ಎಂದು ತಿಳಿಸಿದರು.

ಕಲಬುರಗಿಯಲ್ಲಿ ನಡೆದಘಟನೆ ಮೋದಿ ಬೇರೆ ರಾಜ್ಯದಲ್ಲಿ ಪ್ರಸ್ತಾಪದ ಕುರಿತು ಮಾತನಾಡಿದ ಅವರು, ಮೋದಿ ಸುಳ್ಳು ಹೇಳುವುದರಲ್ಲಿ ನಿಸ್ಸೀಮರು. ಅದನ್ನು ಬಿಟ್ಟು ಏನು ಮಾಡಿದ್ದಾರೆ ಜನರ ಭಾವನೆಗಳ ಜೊತೆ ಸರಿಇಲ್ಲ. ಪ್ರಧಾನಿ ಆಗಿ ಇಂತಹ ಹೇಳಿಕೆ ಪ್ರಧಾನಿ ಸ್ಥಾನಕ್ಕೆ ಗೌರವತರಲ್ಲ. ಇದರಿಂದ ನಮಗೆ ಏನು ಧಕ್ಕೆಆಗಲ್ಲ. ಈ ಬಗ್ಗೆ ಚುನಾವಣಾ ಆಯೋಗಕ್ಕೆ ದೂರು ಕೊಟ್ಟಿದ್ದೇವೆ. ಅವರುಕ್ರಮ ಜರುಗಿಸಿಲ್ಲ, ಕ್ರಮಆಗಿಲ್ಲ. ಅದಕ್ಕಾಗಿ ಕಾಯುತ್ತಿದ್ದೇವೆ. ನಾವು ಏನು ಮಾಡಿದ್ದೇವೆ, ಕೇಂದ್ರ ಏನು ಮಾಡಿದೆಅದರ ಬಗ್ಗೆ ಜನರ ತೀರ್ಪು ಅಂತಿಮ. ಜನ ನಮ್ಮ 5 ಗ್ಯಾರಂಟಿಇಂಪ್ಯಾಕ್ಟ್ ಆಗಿ ನಮ್ಮಅಭ್ಯರ್ಥಿಗೆ ಆಶೀರ್ವಾದ ಮಾಡುತ್ತಾರೆ. ಕಾಂಗ್ರೆಸ್ ಪಕ್ಷದ ಮೇಲೆ ಜನರಿಗೆ ವಿಶ್ವಾಸ ಬಂದಿದೆಎಂದರು.

ಕಲಬುರಗಿಯಲ್ಲಿ ಕೈ ನಾಯಕನ ವಾಹನದಲ್ಲಿ 2 ಕೋಟಿ ಹಣ ಸೀಜ್ ಪ್ರಕರಣದಕುರಿತು ಪ್ರತಿಕ್ರಿಯಿಸಿ, ಅದರ ಬಗ್ಗೆ ನನಗೆ ಏನು ಗೊತ್ತಿಲ್ಲ. ಅದರ ಬಗ್ಗೆ ಆಯೋಗಕ್ರಮ ತೆಗೆದುಕೊಳ್ಳಲಿ. ಬಿಜೆಪಿ ಅಭ್ಯರ್ಥಿ ಸುಧಾಕರ್ ಬಳಿ 4.80 ಕೋಟಿ ಹಣ ಸಿಕ್ಕಿದೆ.ಯಾರೇಇದ್ದರು ಸಹ ಅವರ ಮೇಲೆ ಕ್ರಮಜರುಗಿಸಲಿ ಎಂದರು.ಇನ್ನು ಸಿದ್ದರಾಮಯ್ಯ ಮತ್ತು ಡಿಕೆಶಿ ಶೀತಲ ಸಮರ ವಿಚಾರವಾಗಿ ಮಾತನಾಡಿ, ನನ್ನ ಹಾಗೂ ಡಿಕೆಶಿ ನಡುವೆ ಶೀತಲ ಸಮರಇಲ್ಲಎಂದು ಹೇಳಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com